ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 172 ಸಂಚಿಕೆ- 172 | PAGE-8 ಪುಟ-8 | ಮಂಗಳವಾರ 19.08.2025 | RS.2/- ಬೆಲೆ 2/-

## ಮಳೆ ಹಾನಿ ಪ್ರದೇಶಕ್ಕೆ ಜಿಲ್ಲಾಧಿಕಾರಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 18: ಕಳೆದೆರಡು ದಿನಗಳಿಂದ ನಿರಂತರವಾಗಿ ಸುರಿದ ಮಳೆಗೆ ಔರಾದ್ ಹಾಗೂ ಕಮಲನಗರ ತಾಲ್ಲೂಕಿನ ವಿವಿಧೆಡೆ ಹಾನಿಗೊಳಗಾದ

(2ನೇ ಪುಟ ನೋಡಿ)

## ವಿದ್ಯುತ್ ತಗಲಿ ರೈತ ಸಾವು




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.18: ತಾಲೂಕಿನ ಚಾಮಲಾಪುರ ಗ್ರಾಮದಲ್ಲಿ ಶನಿವಾರ ಸಂಜೆ ವಿದ್ಯುತ್ ಪ್ರಹರಿಸಿ ಯುವ ರೈತನೋರ್ವ ಮೃತಪಟ್ಟಿದ್ದಾನೆ ಕೂಲಿ ನಾಲಿ ಮಾಡಿ ಚಿಕ್ಕ ಮಕ್ಕಳೊಂದಿಗೆ ದುಡಿದು ತಿನ್ನುತ್ತಿದ್ದು ವಿದ್ಯುತ್ ವಿಧಿ ಆಟಕ್ಕೆ ಸಂಗಪ್ಪ ಬಾಗಲಿ 34 ಬಲಿಯಾಗಿದ್ದಾನೆ ಮೃತನಿಗೆ ಹೆಂಡತಿ ಒಂದು ಹೆಣ್ಣು ಎರಡು ಗಂಡು ಮಕ್ಕಳು ಇರುತ್ತವೆ, ಸಂಗಪ್ಪ ಬಾಗ್ಲಿ ಅವರ ಧರ್ಮ ಪತ್ನಿ ನೀಲಮ್ಮ ಬಾಗಲಿ ಅಂಗವಿಕಲೆಯಾಗಿದ್ದಾರೆ

(2ನೇ ಪುಟ ನೋಡಿ)

## ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ಸೇರಿದ ಉಚಿತ ಬಸ್ ಯೋಜನೆ








ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.18: ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ನೀಡಿದ ರಾಜ್ಯ ಸರ್ಕಾರದ ಶಕ್ತಿ ಯೋಜನೆಯು ಪ್ರತಿಷ್ಠಿತ ವಿಶ್ವ ದಾಖಲೆಗೆ ಸೇರ್ಪಡೆಯಾಗಿದೆ.

ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾದ ಶಕ್ತಿ ಯೋಜನೆ 'ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್'ಗೆ ಸೇರ್ಪಡೆಯಾಗಿದೆ.2023ರ ಜೂನ್ 11 ರಿಂದ 2025 ಜುಲೈ 25ರ ಅವಧಿಯಲ್ಲಿ ನಾಲ್ಕೂ ನಿಗಮದ ಸಾರಿಗೆ ಬಸ್‌ಗಳಲ್ಲಿ 5049476416 ಮಹಿಳೆಯರು (500 ಕೋಟಿ) ಉಚಿತ ಟಿಕೇಟ್ ಪಡೆದು ಪ್ರಯಾಣ ಮಾಡಿದ್ದಾರೆ. ಈ ಕಾರಣದಿಂದ ಶಕ್ತಿ ಯೋಜನೆ ಗೊಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದಿದೆ.

ಶಕ್ತಿ ಯೋಜನೆ ಗೊಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದಿರುವುದು ಅತೀವ ಸಂತಸ ಮತ್ತು ಹೆಮ್ಮೆಯ ಕ್ಷಣವಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಹೇಳಿದ್ದಾರೆ.ಶಕ್ತಿ ಯೋಜನೆಯು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕವಾಗಿ ಮಹಿಳೆಯರನ್ನು ಸಬಲರನ್ನಾಗಿಸುತ್ತದೆ ಎಂದು ಬಲವಾಗಿ ನಂಬಿದ್ದವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್. ಈ ಚಾರಿತ್ರಿಕ ಸಾಧನೆಯು ಕೆಎಸ್‌ಆರ್‌ಟಿಸಿ, ಬಿಎಂಟಿಸಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಆಡಳಿತ ಮಂಡಳಿ ಸಾರಿಗೆ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸಾರಿಗೆ ಇಲಾಖೆಯ ಕಾರ್ಯದರ್ಶಿ, ವ್ಯವಸ್ಥಾಪಕ ನಿರ್ದೇಶಕರು, ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸಮರ್ಪಿಸಲಾಗಿದೆ

ನಾನು ಸಾರಿಗೆ ಸಚಿವನಾಗಿ ಎರಡನೇ ಬಾರಿಗೆ ಅಧಿಕಾರ ವಹಿಸಿಕೊಂಡ ಕೂಡಲೇ ದೇಶದಲ್ಲೇ ಪ್ರಪ್ರಥಮ ಬಾರಿಗೆ ಜಾರಿಗೆ ತಂದ ಗ್ಯಾರಂಟಿ ಯೋಜನೆಯಾದ ಶಕ್ತಿ ಯೋಜನೆಯು ಅತ್ಯಂತ ಸವಾಲಿನಿಂದ ಕೂಡಿತ್ತು. ಕಳೆದ ಐದಾರು ವರ್ಷದಲ್ಲಿ ಸಾರಿಗೆ ಸಂಸ್ಥೆಗಳಲ್ಲಿ ಹೊಸ ಬಸ್ಸುಗಳ ಸೇರ್ಪಡೆಯಾಗಿಲ್ಲ. ಹೊಸ ನೇಮಕಾತಿ ಆಗಿಲ್ಲ, ಸಾರಿಗೆ ಸಂಸ್ಥೆಗಳು ಸಾಲದ ಸುಳಿಯಲ್ಲಿದ್ದವು. ಇಂತಹ ಸಂದಿಗ್ಧ ಸ್ಥಿತಿಯಲ್ಲಿ ಒಂದು ತಂಡವಾಗಿ

(2ನೇ ಪುಟ ನೋಡಿ)

## ಮಳೆ ಅನಾಹುತ: ಸೂಕ್ತ ಕ್ರಮಕ್ಕೆ ಜಿಲ್ಲಾಧಿಕಾರಿಗೆ ಈಶ್ವರ ಖಂಡ್ರೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 18: ಬೀದರ್ ಜಿಲ್ಲೆಯ ಕಮಲಾನಗರ ತಾಲೂಕಿನ ನಂದಿ ಬಿಜಲ್‌ಗಾವ್ ಮತ್ತು ಇತರ ಕಡೆಗಳಲ್ಲಿ ನಿನ್ನೆ ರಾತ್ರಿಯಿಡೀ ಸುರಿದ ಧಾರಾಕಾರ ಮಳೆಗೆ ಬೆಳೆ ಹಾನಿ ಮತ್ತು 15ಕ್ಕೂ ಹೆಚ್ಚು ಜಾನುವಾರುಗಳು ಸಾವಿಗೀಡಾಗಿರುವ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕೂಡಲೇ ಪರಿಹಾರ ಮತ್ತು ರಕ್ಷಣಾ ಕಾರ್ಯ ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ ಜಿಲ್ಲಾಧಿಕಾರಿಗಳಿಗೆ ಇಂದು ಅಧಿಕೃತ ಟಿಪ್ಪಣಿ ಕಳಿಸಿರುವ ಸಚಿವರು, ಕೂಡಲೇ ಸ್ಥಳಕ್ಕೆ ಧಾವಿಸಿ, ಪರಿಶೀಲನೆ ನಡೆಸಿ, ಕಡಿತಗೊಂಡಿರುವ ರಸ್ತೆ, ವಿದ್ಯುತ್ ಸಂಪರ್ಕ ಮರುಸ್ಥಾಪನೆಗೆ ಕ್ರಮ ಕೈಗೊಳ್ಳಲು ಹಾಗೂ ತತ್‌ಕ್ಷಣದ ಪರಿಹಾರ ಮತ್ತು ರಕ್ಷಣಾ ಕಾರ್ಯ ಕೈಗೊಳ್ಳಲು ಸೂಚಿಸಿದ್ದಾರೆ ಜಿಲ್ಲೆಯಲ್ಲಿ ಮಳೆಯಿಂದ ಆಗಿರುವ ಬೆಳೆ ಹಾನಿ ಮತ್ತು ಜಾನುವಾರು ಹಾನಿಯ ಬಗ್ಗೆ 24 ಗಂಟೆಯೊಳಗೆ ಪ್ರಾಥಮಿಕ ವರದಿ ಸಲ್ಲಿಸಲೂ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

## ಮತದಾರರ ಪಟ್ಟಿ ಸ್ವಚ್ಛವಾಗಿದೆಯೆಂದು ಚುನಾವಣಾ ಆಯೋಗ ಮೊದಲು ಅಫಿಡವಿಟ್ ಸಲ್ಲಿಸಲಿ: ಕಾಂಗ್ರೆಸ್

ಮಲ್ಲಮ್ಮನುಡಿವಾರ್ತೆ ನವದೆಹಲಿ:.18: ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರನ್ನು ಸೋಮವಾರ ತೀವ್ರ ತರಾಟೆಗೆ ತೆಗೆದುಕೊಂಡ ಕಾಂಗ್ರೆಸ್, ಮೊದಲು ಚುನಾವಣಾ ಆಯೋಗವು ತನ್ನ ಮತದಾರರ ಪಟ್ಟಿ ಸ್ವಚ್ಛವಾಗಿದೆ ಎಂದು ಸುಪ್ರೀಂ ಕೋರ್ಟ್‌ನಲ್ಲಿ ಅಫಿಡವಿಟ್ ಸಲ್ಲಿಸಲಿ. ನಂತರ ನಾವು ಅಸ್ತಿತ್ವದಲ್ಲಿರುವ ಪಟ್ಟಿಯಲ್ಲಿ ಅಕ್ರಮಗಳಿವೆ ಎಂದು ಅಫಿಡವಿಟ್ ಸಲ್ಲಿಸುತ್ತೇವೆ ಎಂದು ಹೇಳಿದೆ.

ಇಂದು ದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ನಾಯಕ ಪವನ್ ಖೇರಾ ಅವರು, ಜ್ಞಾನೇಶ್ ಕುಮಾರ್ "ಬಿಜೆಪಿ ವಕ್ತಾರ"ರಂತೆ ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸಿಇಸಿ, ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಸಹಿ ಮಾಡಿದ ಅಫಿಡವಿಟ್ ಸಲ್ಲಿಸುವಂತೆ ಏಳು ದಿನಗಳ ಗಡುವು ನೀಡಿದ ಒಂದು ದಿನದ ನಂತರ ಕಾಂಗ್ರೆಸ್ ಈ ಹೇಳಿಕೆ ನೀಡಿದೆ. ಇಲ್ಲದಿದ್ದರೆ ಅವರ ಆರೋಪಗಳು ಆಧಾರರಹಿತ ಮತ್ತು ಅಮಾನ್ಯವೆಂದು ಪರಿಗಣಿಸಲಾಗುತ್ತದೆ ಎಂದು ಸಿಇಸಿ ಹೇಳಿದೆ.

ಮತದಾರರ ಅಧಿಕಾರ ಯಾತ್ರೆಯ ಸಂದರ್ಭದಲ್ಲಿ ಪಕ್ಷದ ನಾಯಕ ಕನ್ಹಯ್ಯ ಕುಮಾರ್ ಅವರೊಂದಿಗೆ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ, "ಈ ಯಾತ್ರೆ

(2ನೇ ಪುಟ ನೋಡಿ)

## ಸಮಾಜದ ಒಗ್ಗಟ್ಟಿಗೆ ಜಾತ್ರೆಗಳು ಸಹಕಾರಿ




ಮಲ್ಲಮ್ಮನುಡಿವಾರ್ತೆ ಹುಮನಾಬಾದ್: ನಾಗರಿಕ ಸಮಾಜದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಇರಬೇಕಾದರೆ ಹಬ್ಬ, ಜಾತ್ರೆಗಳು ಸಹಕಾರಿಯಾಗಿವೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ತಾಲೂಕಿನ ಸುಲ್ತಾನಬಾದ್ ವಾಡಿ ಗ್ರಾಮದಲ್ಲಿ ನಡೆದ ಐತಿಹಾಸಿಕ ರಾಮಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಕುಸ್ತಿ ಪಂದ್ಯಾವಳಿ ಉದ್ದೇಶಿ ಮಾತನಾಡಿದರು.

(2ನೇ ಪುಟ ನೋಡಿ)

## ಪ್ರಧಾನಿ ಮೋದಿ ಭೇಟಿಯಾದ ಶುಭಾಂಶು ಶುಕ್ಲಾ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.18: ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣಿಸಿ ಮರಳಿದ್ದ ಭಾರತೀಯ ವಾಯುಪಡೆಯ ಪೈಲಟ್, ಗಗನಯಾತ್ರಿ ಶುಭಾಂಶು ಶುಕ್ಲಾ ಇವತ್ತು ಪ್ರಧಾನಿ ಮೋದಿಯವರನ್ನು ಭೇಟಿಂಯಾಗಿದ್ದಾರೆ. ಪ್ರಧಾನಿ ನಿವಾಸದಲ್ಲಿ ಮೋದಿಯವರು ಶುಭಾಂಶು ಶುಕ್ಲಾರನ್ನು ಆಲಿಂಗಿಸಿ ಬರಮಾಡಿಕೊಂಡರು. ಈ ವೇಳೆ ಶುಕ್ಲಾ ಮೋದಿಯವರಿಗೆ ತಾವು ಬಾಹ್ಯಾಕಾಶಕ್ಕೆ ಕೊಂಡೊಯ್ದಿದ್ದ ತ್ರಿವರ್ಣ ಧ್ವಜವನ್ನು ಉಡುಗೊರೆಯಾಗಿ ನೀಡಿದರು. ಜೊತೆಗೆ ತಮ್ಮ ಬಾಹ್ಯಾಕಾಶ ಯಾನದ ಬಗ್ಗೆ

(2ನೇ ಪುಟ ನೋಡಿ)

## ನಾಲ್ಕೇ ದಿನದಲ್ಲಿ 5 ಲಕ್ಷಕ್ಕೂ ಹೆಚ್ಚು ಫಾಸ್ಟ್‌ಟ್ಯಾಗ್ ಪಾಸ್ ಮಾರಾಟ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.18: ಆಗಸ್ಟ್ 15 ರಂದು ಬಿಡುಗಡೆಯಾದ ವಾರ್ಷಿಕ ಫಾಸ್ಟ್‌ಟ್ಯಾಗ್ ಪಾಸ್‌ಗೆ, ವಿಶೇಷವಾಗಿ ಎರಡು ದಕ್ಷಿಣ ರಾಜ್ಯಗಳಲ್ಲಿ ಅಗಾಧ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಬಿಡುಗಡೆಯಾದ ನಾಲ್ಕೇ ದಿನಗಳಲ್ಲಿ, ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಮಿಳುನಾಡಿನಲ್ಲಿ 1.5 ಲಕ್ಷ ಮತ್ತು ಕರ್ನಾಟಕದಲ್ಲಿ ಸುಮಾರು ಒಂದು ಲಕ್ಷ ಸೇರಿದಂತೆ ಒಟ್ಟು ಐದು ಲಕ್ಷಕ್ಕೂ ಹೆಚ್ಚು ಪಾಸ್ ವಾರ್ಷಿಕ ಪಾಸ್‌ಗಳನ್ನು ಮಾರಾಟ ಮಾಡಿದೆ. ಸುಮಾರು ಒಂದು ಲಕ್ಷ ಪಾಸ್ ಖರೀದಿದಾರರೊಂದಿಗೆ, ಹರಿಯಾಣ ಪ್ರಸ್ತುತ ಮೂರನೇ ಅತಿ ಹೆಚ್ಚು ವಾರ್ಷಿಕ ಪಾಸ್ ಹೊಂದಿರುವ ರಾಜ್ಯವಾಗಿದೆ."ಪ್ರಯಾಣಿಕರಿಗೆ ಅನುಕೂಲಕರ ಮತ್ತು ಪರಿಣಾಮಕಾರಿ ಟೋಲಿಂಗ್ ಅನುಭವ ಒದಗಿಸುವ ಮೂಲಕ, ಹೊಸದಾಗಿ ಪರಿಚಯಿಸಲಾದ ಫಾಸ್ಟ್‌ಟ್ಯಾಗ್ ವಾರ್ಷಿಕ ಪಾಸ್ ಸೌಲಭ್ಯವು ದೇಶಾದ್ಯಂತ ಐದು ಲಕ್ಷ ಬಳಕೆದಾರರ ಹೆಗ್ಗುರುತನ್ನು ದಾಟಿದೆ. ಕಳೆದ ನಾಲ್ಕು ದಿನಗಳಲ್ಲಿ ತಮಿಳುನಾಡು ಅತಿ ಹೆಚ್ಚು ವಾರ್ಷಿಕ ಪಾಸ್‌ಗಳನ್ನು ಖರೀದಿಸಿದೆ, ನಂತರ

(2ನೇ ಪುಟ ನೋಡಿ)

## ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿ ರಾಜ್ಯದಲ್ಲಿಯೇ ಮಾದರಿ ಸಹಕಾರಿ:ಜಾಂತಿಕರ್



ಮಲ್ಲಮ್ಮ ನುಡಿ ವಾರ್ತೆ ಬೀದರ್ :ಅ.18:ಜಿಲ್ಲಾ ಸೌಹಾರ್ದ ಸಹಕಾರಿಗಳ ಇಡೀ ರಾಜ್ಯದಲ್ಲಿಯೇ ಮಾದರಿ ಸಹಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ನಿ. ಬೆಂಗಳೂರು ಇದರ ರಾಜ್ಯ ನಿರ್ದೇಶಕರಾದ ಗುರುನಾಥ್ ಜಾಂತಿಕರ ಅವರು ಅಭಿಪ್ರಾಯಪಟ್ಟರು. ಅವರು ನಗರದ ಸಹಾರ್ದ ತರಬೇತಿ ಸಭಾಂಗಣದಲ್ಲಿ ಆಯೋಜಿಸಿದ

(2ನೇ ಪುಟ ನೋಡಿ)

## ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ಮಹಾಭಿಯೋಗಕ್ಕೆ ವಿಪಕ್ಷಗಳ ಸಿದ್ಧತೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.18: ಮತ ಕಳ್ಳತನ ಆರೋಪದ ಮೇಲೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಸಂಸತ್ತಿನಲ್ಲಿ ಮಹಾಭಿಯೋಗ ಪ್ರಸ್ತಾವನೆ ಮಂಡಿಸಲು ವಿರೋಧ ಪಕ್ಷಗಳ ಇಂಡಿಯಾ ಮೈತ್ರಿಕೂಟ ಸಿದ್ಧತೆ ಮಾಡಿಕೊಳ್ಳುತ್ತಿವೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಮತ್ತು ಮತ ಕಳ್ಳತನದ ವಿರುದ್ಧ ವಿರೋಧ ಪಕ್ಷಗಳು ಪ್ರತಿಭಟನೆಯನ್ನು ತೀವ್ರಗೊಳಿಸುತ್ತಿದೆ. ಈ ಮಧ್ಯೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ದೋಷಾರೋಪಣೆ ಮಾಡಲು ಇಂಡಿಯಾ ಮೈತ್ರಿಕೂಟ ನಿರ್ಧರಿಸಿದೆ. ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ನಡೆದ ಇಂಡಿಯಾ ಮೈತ್ರಿಕೂಟದ ನಾಯಕರ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ವರದಿಗಳಿಂದ ತಿಳಿದುಬಂದಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ವಿರೋಧ ಪಕ್ಷದ ನಾಯಕರೊಬ್ಬರು, ಇಂಡಿಯಾ ಮೈತ್ರಿಕೂಟದ ಎಲ್ಲಾ ಸದಸ್ಯರು ಈ ಪ್ರಸ್ತಾಪವನೆಗೆ ಒಪ್ಪಿಗೆ ಸೂಚಿಸಿದ್ದಾರೆ. ಕಾನೂನು ವಿಧಾನಗಳ ಕುರಿತು ಶೀಘ್ರದಲ್ಲೇ ಚರ್ಚೆ ನಡೆಯಲಿದೆ. ಈ ಪ್ರಕ್ರಿಯೆಯು ನ್ಯಾಯಾಧೀಶರ ಮಹಾಭಿಯೋಗದಂತೆಯೇ ಇರಲಿದೆ ಎಂದು ಹೇಳಿದ್ದಾರೆ.

ಈ ನಡುವೆ ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಯಾನ,

(2ನೇ ಪುಟ ನೋಡಿ)

## ಹೃದಯಾಘಾತ:ಅನಗತ್ಯ ಗೊಂದಲ ಬೇಡ :ಡಾ.ಶರಣ್ ಪ್ರಕಾಶ್ ಪಾಟೀಲ್



ಮಲ್ಲಮ್ಮನುಡಿವಾರ್ತೆ ಬೆಂಗಳೂರು, ಆ 18 :ರಾಜ್ಯದಲ್ಲಿ ಹೆಚ್ಚುತ್ತಿರುವ ಹೃದಯಾಘಾತಗಳ ಬಗ್ಗೆ ಜನತೆ ಅನಗತ್ಯವಾಗಿ ಗೊಂದಲಕ್ಕೆ ಒಳಗಾಗಬಾರದು. ವ್ಯಾಯಾಮ, ಪ್ರಾಣಾಯಾಮ, ಆಹಾರಪದ್ಧತಿ ಹಾಗೂ ಜೀವನ ಶೈಲಿಯನ್ನು ಬದಲಾವಣೆ ಮಾಡಿಕೊಂಡರೆ ಯಾವುದೇ ಸಮಸ್ಯೆ ಬರುವುದಿಲ್ಲ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದರು. ಇಂದು ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಇತ್ತೀಚೆಗೆ ಹೃದಯಾಘಾತ ಪ್ರಕರಣಗಳ ಸಂಖ್ಯೆ ಹೆಚ್ಚಳದ ಬಗ್ಗೆ ಎಲ್ಲರಲ್ಲೂ ಆತಂಕ ಮನೆ ಮಾಡಿದೆ. ಜಯದೇವ ಆಸ್ಪತ್ರೆಯಲ್ಲಿ ಜನರು ಪ್ರತಿನಿತ್ಯ ಬಂದು ಹೃದಯ ತಪಾಸಣೆ ಮಾಡಿಸಿಕೊಳ್ಳುತ್ತಿದ್ದಾರೆ. ಇದರ ಪ್ರಮಾಣ ಶೇ.25ರಷ್ಟು ಏರಿಕೆಯಾಗಿದೆ ಎಂದು ಮಾಹಿತಿ ನೀಡಿದರು.

ವಿಶೇಷವಾಗಿ ಹಾಸನ ಜಿಲ್ಲೆಯಲ್ಲಿ ಹೃದಯಘಾತಗಳ ಸಂಖ್ಯೆ ಹೆಚ್ಚಳವಾಗಿದೆ ಎಂಬ ಆತಂಕ ಜನರಲ್ಲಿ ಮೂಡಿದೆ. ಇದು ತಪ್ಪು ಗ್ರಹಿಕೆ. ವಾಸ್ತವವಾಗಿ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಸರಾಸರಿ ಪ್ರಮಾಣದಲ್ಲಿ ಯಾವುದೇ ವ್ಯತ್ಯಾಸವಾಗಿಲ್ಲ. ಶೇ.5ರಿಂದ 6ರಷ್ಟು ಪ್ರಕರಣಗಳು ಹೃದಯಾಘಾತಕ್ಕೆ ಸಂಬಂಧಿಸಿದವು. ಈ ವರ್ಷವು ಇಷ್ಟೇ ಪ್ರಮಾಣದಲ್ಲಿ ಇದೆ ಎಂದು ಸಚಿವರು ಹೇಳಿದರು.

ಬದಲಾದ ಜೀವನಶೈಲಿ, ಅಧಿಕ ಒತ್ತಡ, ಬೊಜ್ಜು, ಮದ್ಯಪಾನ, ಧೂಮಪಾನ, ಡ್ರಗ್ಸ್ ಸೇವನೆ, ಕುಟುಂಬದ ಹಿನ್ನಲೆ ಇತ್ಯಾದಿ ಕಾರಣಗಳಿಂದ ಹೃದಯಘಾತಗಳು ಸಂಭವಿಸಿವೆ. ಯಾವುದೋ ಒಂದು ಪ್ರಕರಣವನ್ನು ಆಧಾರವಾಗಿಟ್ಟುಕೊಂಡು ಜನತೆ ಆತಂಕಕ್ಕೆ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ರಾಜ್ಯದಲ್ಲಿಯೇ ಮಾದರಿ ಸಹಕಾರಿ:ಜಾಂತಿಕರ್

ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ. ಬೀದರ್ ಇದರ 14ನೇ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು ರಾಜ್ಯದಲ್ಲಿ ಅನೇಕ ಜಿಲ್ಲೆಗಳಲ್ಲಿ ಒಕ್ಕೂಟ ರಚನೆಯಾಗಿವೆ ಆದರೆ ಅವುಗಳಿಗೆ ನಡೆಸಿಕೊಂಡು ಹೋಗಲು ಸಾಧ್ಯವಾಗುತ್ತಿಲ್ಲ. ಅದ್ಯಾವುದೇ ಆದಾಯವಿರುವುದಿಲ್ಲ ಕೇವಲ ಸದಸ್ಯರಿಂದ ವಾರ್ಷಿಕ ಶುಲ್ಕ ಪಡೆದು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಮೊದಲಿಗೆ ಪ್ರಾರ್ಥನೆ ಮಾಡಿ ನಂತರ ಅದರಲ್ಲಿ ಇವಾಗ ಆಗಲಿಲ್ಲ ಕಲ್ಯಾಣ ಕರ್ನಾಟಕದ ವಿದ್ಯಾ ಭಂಡಾರಿ ಡಾ.ಪರಮಪೂಜ್ಯ ಶರಣಬಸವಪ್ಪಾ ಅಪ್ಪಾಜಿ ಶ್ರದ್ಧಾಂಜಲಿಯನ್ನು ಒಕ್ಕೂಟದ ಮಾನ್ಯ ನಿರ್ದೇಶಕರಾದ ಶ್ರೀ ರಾಜಶೇಖರ್ ನಾಗಮೂರ್ತಿಯವರು ನಡೆಸಿಕೊಟ್ಟರು. ನಂತರ ಪ್ರಾಥಮಿಕ ನುಡಿ ಮತ್ತು ಸ್ವಾಗತವನ್ನು ಒಕ್ಕೂಟದ ಮಾನ್ಯ ಉಪಾಧ್ಯಕ್ಷರಾದ ಶ್ರೀ ಸಂಜೀವ್ ಕುಮಾರ್ ಪಾಟೀಲ್ ಅವರು ನಡೆಸಿದರು. ತದನಂತರ ಕಾರ್ಯಕ್ರಮದ ವೇದಿಕೆ ಮೇಲೆ ಆಸಿನರಾದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿಯ ನಿರ್ದೇಶಕರು 14ನೇ ಸಾಮಾನ್ಯ ಸಭೆಯನ್ನು ಉದ್ಘಾಟಿಸಿದರು. 14ನೇ ಸಾಮಾನ್ಯ ಸಭೆಯ ನೋಟಿಸ್ ಅನ್ನು ಒಕ್ಕೂಟದ ಮುಖ್ಯ ಕಾರ್ಯನಿರ್ವಾಹಕರಾದ ಅಮೃತ ಹೊಸಮನಿಯವರು ಓದಿದರು. ಹಿಂದಿನ ಸಾಮಾನ್ಯ ಸಭೆಯ ನಡಾವಳಿ ಮತ್ತು ನಿರ್ಣಯವನ್ನು ಮಾನ್ಯ ನಿರ್ದೇಶಕರಾದ ಶ್ರೀ ಸಂಜಯ್ ಕ್ಯಾಸಾ ಅವರು ಓದಿದರು. 2024–25 ನೇ ಸಾಲಿನ ಲೆಕ್ಕಪರಿಶೋಧನೆ ವರದಿಯನ್ನು ಮಾನ್ಯ ಉಪಾಧ್ಯಕ್ಷರಾದ ಶ್ರೀ ಸಂಜು ಕುಮಾರ್ ಪಾಟೀಲ್ ಅವರು ಓದಿ ಅನುಮೋದನೆ ಪಡೆದರು. ಹಾಗೂ 2024 25 ನೇ ಸಾಲಿನ ವಾರ್ಷಿಕ ವರದಿಯನ್ನು ಮಾನ್ಯ ನಿರ್ದೇಶಕರಾದ ಶ್ರೀ ಜಗನಾಥ್ ಕರಂಜೆ ಅವರು ನಡೆಸಿಕೊಟ್ಟರು. 2025 26 ನೇ ಸಾಲಿನ ಕ್ರಿಯಾ ಯೋಜನೆಯನ್ನು ಮತ್ತೋರ್ವ ನಿರ್ದೇಶಕರಾದ ಶ್ರೀ ಕ್ರಾಂತಿ ಕುಮಾರ್ ಕುಲಾಲ್ ಅವರು ನಡೆಸಿಕೊಟ್ಟರು. ಇದೇ ಸಂದರ್ಭದಲ್ಲಿ ಕಳೆದ ವರ್ಷದ ಸಾಲಿಗೆ ಸದಸ್ಯತ್ವ ಪಡೆದ ಪಟ್ಟಿಯನ್ನು ನಿರ್ದೇಶಕರಾದ ಶ್ರೀ ಶಿವಬಸಪ್ಪ ಚನ್ಮಲ್ಲೆ ಅವರು ಮಂಡಿಸಿದರು. ಹಾಗೂ 2025 26 ನೇ ಸಾಲಿನ ಅಂದಾಜು ಆಯವ್ಯವನ್ನು ನಿರ್ದೇಶಕರಾದ ಶ್ರೀ ಬಸವರಾಜ್ ಹುಡುಗಿ ಅವರು ಓದಿದರು. ನಂತರ 25 26 ನೇ ಸಾಲಿನ ಲೆಕ್ಕಪರಿಶೋಧಕರ ನೇಮಕಾತಿಯನ್ನು ರಾಜಶೇಖರ್ ನಾಗಮೂರ್ತಿ ಅವರು ನಡೆಸಿಕೊಟ್ಟರು. 14ನೇ ಸಾಮಾನ್ಯ ಸಭೆಯಲ್ಲಿ ಉತ್ತಮ ವರದಿಗಾರರೆಂದು ಶ್ರೀ ಶಶಿಕಾಂತ್ ಶಂಭೋಳಿ ಪ್ರಜಾವಾಣಿ ಜಿಲ್ಲಾ ವರದಿಗಾರರು, ಉತ್ತಮ ಸಹಕಾರಿ ಎಂದು ಉಳವಿ ಚನ್ನಬಸವ ಸೌಹಾರ್ದ ಸಹಕಾರಿ ನಿಯಮಿತ ಇದರ ನಿರ್ದೇಶಕಿಯಾದ ಪದ್ಮಜಾ ಪೊದ್ದರ್ ಮತ್ತು ಸಹಕಾರ ರತ್ನ ಪ್ರಶಸ್ತಿಯನ್ನು ಪಡೆದ ಶ್ರೀ ಬಾಬುರಾವ್ ಕುಂಬಾರ್, ಶಂಕರ್ ಭಾರತೀಯ ನೂತನ ಅಧ್ಯಕ್ಷರಾಗಿ ಶ್ರೀ ಶಿವಬಸಪ್ಪ ಚನ್ಮಲೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಶ್ರೀ ಬಸವರಾಜ್ ಹುಡುಗೆ ಹಾಗೂ ಸೌಹಾರ್ದ ಅಭಿವೃದ್ಧಿ ಅಧಿಕಾರಿಯಾದ ವೀರಶೆಟ್ಟಿ ಕಾಮಣ್ಣ ಅವರಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ ವೀರಶೆಟ್ಟಿ ಕಾಮಣ್ಣ ಹಾಗೂ ಒಕ್ಕೂಟದ ಮುಖ್ಯ ಕಾರ್ಯನಿರ್ವಾಹಕರಾದ ಶ್ರೀ ಅಮೃತ್ ಹೊಸಮನಿ ಅವರು ವಂದಿಸಿದರು.

## ಒಗ್ಗಟ್ಟಿಗೆ ಜಾತ್ರೆಗಳು ಸಹಕಾರಿ

ಇಂದಿನ ವೈಜ್ಞಾನಿಕ ಯುಗದಲ್ಲಿ ಮನುಷ್ಯ ಬಹಳ ಒತ್ತಡದ ನಡುವೆ ಜೀವನ ಸಾಗಿಸುತ್ತಿದ್ದಾನೆ. ಒತ್ತಡ ರಹಿತ ಮತ್ತು ನೆಮ್ಮದಿಯಿಂದ ಜೀವನ ಸಾಗಿಸಬೇಕಾದರೆ ಎಲ್ಲರೂ ದಿನನಿತ್ಯ ದೇವರ ಸ್ಮರಣೆ ಮಾಡಬೇಕು ಎಂದು ಸಲಹೆ ನೀಡಿದರು.

ಜಾತ್ರಾ ಮಹೋತ್ಸವ ನಿಮಿತ್ತ ಮಾಜಿ ಸಚಿವ ರಾಜಶೇಖರ ಪಾಟೀಲ್ ರಾಮಲಿಂಗೇಶ್ವರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ದರ್ಶನ ಪಡೆದರು. ಬಳಿಕ ಕುಸ್ತಿ ಪಂದ್ಯಾವಳಿ ವೀಕ್ಷಿಸಿ ಕುಸ್ತಿಯಲ್ಲಿ ವಿಜೇತ ಪಟುವಿಗೆ ನಗದು ಬಹುಮಾನ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ವೆಂಕಟರಾವ ಪಾಟೀಲ್, ಉಪಾಧ್ಯಕ್ಷ ಈಶ್ವರ ಜಾಂತೆ, ಬಸಯ್ಯ, ಗ್ರಾಪಂ. ಸದಸ್ಯರಾದ ಸೋಮನಾಥ ಜಾಂತೆ, ಅಶೋಕ ಚಿಂಚೋಳಿ, ಶರಣಪ್ಪ ರಂಜೇರಿ, ಸಂಗಮೇಶ ಹಿಲಾಲಪೂರೆ, ಮಲ್ಲಿಕಾರ್ಜುನ್ ರಂಜೇರಿ, ಪ್ರಮುಖರಾದ ಧನರಾಜ ಜಾಂತೆ, ಜೈಕುಮಾರ ಗೌರ, ಪ್ರಕಾಶ ದಾಡಗೆ, ಚಂದ್ರಕಾಂತ ಬ್ಯಾಲಹಳ್ಳಿ, ರಾಮಚಂದ್ರ ಉಪಾರ, ಬಲವಂತ ಉಪಾರ ಸೇರಿದಂತೆ ಅನೇಕರಿದ್ದರು.

## ತಗಲಿ ರೈತ ಸಾವು

ಸಂಗಪ್ಪನ ಮಕ್ಕಳಲ್ಲಿ ಒಂದು ಹೆಣ್ಣು ಮಗು ಅಂಗವಿಕಲಿ ಆಗಿರುತ್ತದೆ ಕಡುಬಡತನದಲ್ಲಿ ತಾಯಿ ಜೊತೆ ಹೆಂಡತಿ ಮಕ್ಕಳ ಜೊತೆ ಸಂಸಾರ ಮಾಡುತ್ತಿದ್ದ ಸಂಗಪ್ಪ ಬಾಗಲಿ ಈತನನ್ನು ಕಳೆದುಕೊಂಡ ಕುಟುಂಬ ಬೀದಿ ಪಾಲಾಗಿದೆ ಸಂಜೆ ಮನೆಯಲ್ಲಿ ಟೀ ಕುಡಿದು ಹೆಂಡತಿ ನೀಲಮ್ಮ ಗೆ ಹೇಳಿ ಮೋಟಾರ್ ಏನು ಸ್ಟಾರ್ಟ್ ಆಗುತ್ತಿಲ್ಲವೆಂದು ಆನ್ ಮಾಡಿ ಬರುತ್ತೇನೆ ಎಂದು ಹೇಳಿ ಹೋದ ಸಂಗಪ್ಪ ರಾತ್ರಿ 8:00 ಆದರೂ ವಾಪಸ್ ಬರಲಿಲ್ಲ ಇದನ್ನು ಅರಿತ ಧರ್ಮ ಪತ್ನಿ ಮತ್ತು ಸಂಗಡಿಗರೊಂದಿಗೆ ತೋಟದಲ್ಲಿ ಹೋಗಿ ನೋಡಿದ ಮೇಲೆ ಗೊತ್ತಾಗಿದ್ದು ವಿದ್ಯುತ್ ಹರಿದು ಮೃತಪಟ್ಟಿದ್ದಾನೆ ಎಂದು ಇದನ್ನು ನೋಡಿದ ಧರ್ಮಪತ್ನಿಗೆ ದಂಗುಬಡಿದಾಗಿ ಕುಸಿದು ಬಿದ್ದಿದ್ದಾಳೆ ಚಾಮಲಾಪುರ ಗ್ರಾಮದ ಸ್ಥಳೀಯರು ಬಂದು ಪೋಲೀಸ್ ಅಧಿಕಾರಿಗಳಿಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ ಸ್ಥಳಕ್ಕೆ ಆಗಮಿಸಿದ ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್ಐ ವೀರೇಶ್ ಮಾಳ ಶೆಟ್ಟಿ ಸಿಬ್ಬಂದಿಯೊಂದಿಗೆ ಬಂದು ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ ಊರಿನ ಸ್ಥಳೀಯರು ಮಾತನಾಡಿ ಎರಡು ಎಕರೆ ಹೊಂದಿದ್ದ ರೈತ ಸಂಗಪ್ಪ ಬಾಗ್ಲಿ , ಕುಟುಂಬಕ್ಕೆ ಆಸರೆಯಾಗಿದ್ದ ಅಂಗವಿಕಲರನ್ನು ಹೊಂದಿದ ಕುಟುಂಬಕ್ಕೆ ಜೆಸ್ಕಾಂ ಅಧಿಕಾರಿಗಳು ಪರಿಶೀಲನೆ ಮಾಡಿ ಕುಟುಂಬಕ್ಕೆ ಸಹಾಯಸ್ತದ ಅವಶ್ಯಕತೆ ಇರುತ್ತದೆ ಎಂದು ಸ್ಥಳಿಯರು ಹೇಳಿದರು ಈ ಸಂದರ್ಭದಲ್ಲಿ ಊರಿನ ಹಿರಿಯರು ಎಲ್ಲರೂ ಉಪಸ್ಥಿತರಿದ್ದರು.

## ಜಿಲ್ಲಾಧಿಕಾರಿ ಭೇಟಿ

ಪ್ರದೇಶಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಇಂದು ಭೇಟಿ ನೀಡಿ ಮಳೆ ಹಾನಿ ಸ್ಥಿತಿಗತಿ ವೀಕ್ಷಿಸಿದರು.

ಔರಾದ್ ತಾಲ್ಲೂಕಿನ ಬೋಂತಿ, ಬಾವಲಗಾಂವ ಹಾಗೂ ಹಂಗರಗಾ ಗ್ರಾಮಗಳ ನೂರಾರು ಎಕರೆ ಹೊಲಗಳಿಗೆ ನೀರು ನುಗ್ಗಿ ವಿವಿಧೆಡೆ ಸಂಪರ್ಕ ಸೇತುವೆಗೆ ಹಾನಿಗೊಂಡಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಭೇಟಿ ನೀಡಿ ವೀಕ್ಷಿಸಿದರು.ಬೋಂತಿ ಗ್ರಾಮದ ಸಣ್ಣ ನೀರಾವರಿ ಇಲಾಖೆಯ ಕೆರೆಯೊಂದು ಒಡೆದು ಹೋಗಿದ್ದರಿಂದ ಅಪಾರ ಪ್ರಮಾಣದ ನೀರು ಹರಿದು ಬೋಂತಿ, ಬಾವಲಗಾಂವ ಹಾಗೂ ಹಂಗರಗಾ ಗ್ರಾಮಗಳ ಸಂಪರ್ಕ ಸೇತುವೆ ಕುಸಿದು ಬೃಹತ್ ಗುಂಡಿ ನಿರ್ಮಾಣಗೊಂಡ ಹಿನ್ನೆಲೆಯಲ್ಲಿ ಸಾರ್ವಜನಿಕರು ಈ ಕಡೆ ಓಡಾಡದಂತೆ ಎಚ್ಚರಿಕೆ ವಹಿಸುವಂತೆ ಡಂಗೂರ ಸಾರುವಂತೆ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಔರಾದ್ ತಹಸೀಲ್ದಾರ ಮಹೇಶ ಪಾಟೀಲ ಅವರಿಗೆ ತಿಳಿಸಿದರು.

ಬಾವಲಗಾಂವ ಹಾಗೂ ಹಂಗರಗಾ ಗ್ರಾಮಗಳ ಸಣ್ಣ ನೀರಾವರಿ ಕೆರೆ ಒಡೆದು ನೂರಾರು ಎಕರೆ ಬೆಳೆ ಪ್ರದೇಶಗಳಿಗೆ ನೀರು ನುಗ್ಗಿದೆ. ಬಾವಲಗಾಂವ ಗ್ರಾಮಸ್ಥರಿಗೆ ತಕ್ಷಣವೇ ಸ್ಥಳೀಯ ಶಾಲೆಯಲ್ಲಿ ಕಾಳಜಿ ಕೇಂದ್ರ ಆರಂಭಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ನಿರಂತರ ಮಳೆಯಿರುವ ಕಾರಣ ಗ್ರಾಮಸ್ಥರು ಹಾಗೂ ಜನ ಜಾನುವಾರುಗಳನ್ನು ನೀರಿನ ಮೂಲಗಳ ಹತ್ತಿರ ಬಿಡದಂತೆ ಎಚ್ಚರ ವಹಿಸುವಂತೆಯೂ ಸೂಚಿಸಿದರು.

ಆಗಸ್ಟ್.17 ರಂದು ಒಂದೇ ದಿನ 300 ಮೀ.ಮಿ. ಮಳೆಯಾಗಿದ್ದು, ನಾಲ್ಕು ಸಂಪರ್ಕ ಸೇತುವೆ ಭಾಗಶ ಹಾನಿಯಾಗಿವೆ. ಅಂದಾಜು 500 ಎಕರೆ ಬೆಳೆ ಹಾನಿಯಾಗಿದ್ದು ಮಳೆ ನಿಂತ ಮೇಲೆ ಸಮೀಕ್ಷೆ ಕೈಗೊಳ್ಳಲಾಗುವುದು. ಸಧ್ಯಕ್ಕೆ ಯಾವುದೇ ರೀತಿಯ ಜೀವ ಹಾನಿ ಸಂಭವಿಸಿರುವುದಿಲ್ಲ ಹಾಗೂ ಮನೆಗಳಿಗೂ ಯಾವುದೇ ರೀತಿಯ ಹಾನಿಯಾಗಿರುವುದಿಲ್ಲವೆಂದು ಔರಾದ್ ತಹಸೀಲ್ದಾರ ಮಹೇಶ ಪಾಟೀಲ ತಿಳಿಸಿದರು.

ನಂತರ ಜಿಲ್ಲಾಧಿಕಾರಿಗಳು ಕಮಲನಗರ ತಾಲ್ಲೂಕಿನ ನಂದಿ ಬಿಜಲಗಾಂವ ಗ್ರಾಮದಲ್ಲಿ ಹಾನಿಗೊಳಗಾದ ಸೇತುವೆ, ಬೆಳೆ ಹಾನಿ ವೀಕ್ಷಿಸಿದರು. ಹಲವಾರು ವಿದ್ಯುತ್ ಕಂಬಗಳು ಹಾನಿಗೊಳಗಾಗಿವೆ ಗ್ರಾಮದ ಕೆಲ ಮನೆಗಳಿಗೂ ಭಾಗಶಃ ಹಾನಿಯಾಗಿದ್ದು ಸಮೀಕ್ಷೆ ನಡೆಸಿ ತುರ್ತು ಪರಿಹಾರ ನೀಡುವಂತೆ ತಹಸೀಲ್ದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಪ್ರೋಬೇಷನರಿ ಐಎಎಸ್ ಅಧಿಕಾರಿ ರಮ್ಯಾ, ಸಹಾಯಕ ಆಯುಕ್ತರಾದ ಮಹ್ಮದ ಶಕೀಲ, ತಾಲ್ಲೂಕ ಪಂಚಾಯತ ಇಓ ಕಿರಣ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬೇಡ :ಡಾ.ಶರಣ್ ಪ್ರಕಾಶ್ ಪಾಟೀಲ್

ಒಳಗಾಗಬಾರದು ಎಂದು ತಿಳಿಸಿದರು.

ಕೋವಿಡ್ ನಂತರ ಹೃದಯಘಾತ ಪ್ರಕರಣಗಳು ಹೆಚ್ಚಾಗುತ್ತಿವೆ ಎಂಬ ಗುಮಾನಿಯೂ ಇದೆ. ವಾಸ್ತವವಾಗಿ ಇದಕ್ಕೂ ಅದಕ್ಕೂ ಸಂಬಂಧವೇ ಇಲ್ಲ. ಪ್ರತಿದಿನ ವ್ಯಾಯಾಮ,

ಪ್ರಾಣಯಾಮ, ಸರಿಯಾದ ಸಮಯಕ್ಕೆ ನಿದ್ದೆ, ಒತ್ತಡ ಇಲ್ಲದಿರುವುದು, ಖಿನ್ನತೆ ಒಳಗಾಗದೆ ಸಮತೋಲನ ಕಾಯ್ದುಕೊಂಡರೆ ಯಾವುದೇ ಆರೋಗ್ಯ ಸಮಸ್ಯೆಗಳು ಬರುವುದಿಲ್ಲ ಎಂದು ಸಚಿವರು ಸಲಹೆ ಕೊಟ್ಟರು.

ಈ ಪ್ರಕರಣಗಳ ಕುರಿತಂತೆ ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕರಾದ ಡಾ.ಕೆ ಎಸ್ ರವೀಂದ್ರನಾಥ್ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕಾರ್ಯಪಡೆಯನ್ನು ಸಹ ರಚಿಸಿತ್ತು. ಸರ್ಕಾರಕ್ಕೆ ನೀಡಿರುವ ವರದಿಯಲ್ಲಿ ಜನರ ಊಹೆಗೂ ಇದಕ್ಕೂ ಸಂಬಂಧವಿಲ್ಲ ಎಂದು ಹೇಳಿದ್ದಾರೆ. ಜನರು ಮೊದಲು ವದಂತಿಗಳಿಗೆ ಕಿವಿಗೊಡುವುದನ್ನು ನಿಲ್ಲಿಸಬೇಕು ಎಂದು ಮನವಿ ಮಾಡಿದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ :

ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳ ಜೊತೆ ಕಡ್ಡಾಯವಾಗಿ ಸೂಪರ್ ಸ್ಪೆಷಾಲಿಟಿ

ಆಸ್ಪತ್ರೆಯನ್ನು ತೆರೆಯಬೇಕೆಂಬುದು ನಮ್ಮ ಸರ್ಕಾರದ ಸಿದ್ಧಾಂತವಾಗಿದೆ. ಈಗಾಗಲೇ ಅನೇಕ ಜಿಲ್ಲೆಗಳಲ್ಲಿ ಈ ಆಸ್ಪತ್ರೆಗಳು ಕಾರ್ಯಾರಂಭ ಮಾಡಿವೆ.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಸ್ಥಾಪನೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೂಚನೆ ಕೊಟ್ಟಿದ್ದಾರೆ. ಈ ನಿಯಮವನ್ನು ನಾವು ಈಗಾಗಲೇ ಅಳವಡಿಸಿಕೊಂಡು ಕಾರ್ಯಾರಂಭ ಮಾಡಿದ್ದೇವೆ. ಎಲ್ಲಾ ಜಿಲ್ಲೆಗಳಲ್ಲೂ ಸೂಪರ್ ಸ್ಪೆಷಾಲಿಟಿ ಜೊತೆಗೆ ಟ್ರಾಮಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದರು.

ಬೆಂಗಳೂರು–ಮೈಸೂರು, ಕಲಬುರಗಿ, ಹುಬ್ಬಳ್ಳಿಯ ಜಯದೇವ ಹೃದ್ರೋಗ ಸಂಸ್ಥೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭವಾಗಿದೆ. ಇದೇ ರೀತಿ ಬಾಗಲಕೋಟೆ, ಯಾದಗಿರಿ, ರಾಯಚೂರಿನಲ್ಲೂ ಶೀಘ್ರದಲ್ಲೇ ಕಾರ್ಯಾರಂಭ ಮಾಡಲಾಗುವುದು. ಬೀದರ್, ಕೊಪ್ಪಳ, ಬೆಳಗಾವಿಯಲ್ಲಿ ಎರಡರಿಂದ ಮೂರು ತಿಂಗಳೊಳಗೆ ಈ ಆಸ್ಪತ್ರೆಗಳು ಲೋಕಾರ್ಪಣೆಗೊಳ್ಳಲಿವೆ ಎಂದು ಪಾಟೀಲ್ ತಿಳಿಸಿದ್ದಾರೆ.

## ಸೇರಿದ ಉಚಿತ ಬಸ್ ಯೋಜನೆ



ಕರ್ತವ್ಯ ನಿರ್ವಹಿಸಿ ಶಕ್ತಿ ಯೋಜನೆಯನ್ನು ಯಶಸ್ವಿಯಾಗಿ ಮುನ್ನಡೆಸಿರುವುದು ನನಗೆ ವೈಯಕ್ತಿಕವಾಗಿ ಸಂತೃಪ್ತಿ ತಂದಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಈ ಎರಡು ವರ್ಷಗಳ ಶಕ್ತಿ ಯೋಜನೆಯ ಹಾದಿಯಲ್ಲಿ ಸಾರಿಗೆ ಸಂಸ್ಥೆಗಳಲ್ಲಿ 5,800 ಹೊಸ ಬಸ್‌ಗಳ ಸೇರ್ಪಡೆ, 10,000 ಹೊಸ ನೇಮಕಾತಿ, ಸಾಲ ಪಾವತಿಸಲು ಸರ್ಕಾರದಿಂದ 2,000 ಕೋಟಿ ಸಹಾಯ, ಸಾರಿಗೆ ಸಂಸ್ಥೆಗಳ ಪ್ರಯಾಣಿಕರ ಸಂಖ್ಯೆಯಲ್ಲಿ ಹೆಚ್ಚಳ ಇತರೆ ಅಮೂಲಾಗ್ರ ಬದಲಾವಣೆಗೆ ಕಾರಣವಾಗಿದೆ. ಸಾರಿಗೆ ಸಂಸ್ಥೆಗಳಲ್ಲಿ ಹತ್ತು ಹಲವು ಸವಾಲುಗಳಿದ್ದು, ಎಲ್ಲವನ್ನು ನಾನು ಇತ್ಯರ್ಥ ಪಡಿಸಲು ಸಾಧ್ಯವಿಲ್ಲ. ಆದರೆ ಪ್ರಾಮಾಣಿಕವಾಗಿ ಪ್ರಯತ್ನ ಮಾಡಿದ್ದೇನೆ ಮತ್ತು ಮಾಡುತ್ತಿದ್ದೇನೆ ಎಂದು ಹೇಳಿದ್ದಾರೆ.

Beyond Free Rides- ಎಂಬ ಹೆಸರಿನಲ್ಲಿ Sustainable Mobility Networkನಿಂದ ದೇಶದ 10 ನಗರಗಳಲ್ಲಿ ಮಹಿಳೆಯರಿಗೆ ನೀಡಲಾಗುತ್ತಿರುವ ಉಚಿತ ಬಸ್ ಪ್ರಯಾಣದ ಬಗ್ಗೆ ನಡೆಸಿರುವ ಅಧ್ಯಯನದ ವರದಿಯು ಬೆಂಗಳೂರಿನಲ್ಲಿ 23% ಮತ್ತು ಹುಬ್ಬಳ್ಳಿ–ಧಾರವಾಡದಲ್ಲಿ 21% ಮಹಿಳಾ ಉದ್ಯೋಗಿಗಳ ಸಂ–ಖ್ಯೆಯು ಶಕ್ತಿ ಯೋಜನೆಯಿಂದ ಹೆಚ್ಚಳವಾಗಿದೆಯೆಂದು ತಿಳಿಸಿದೆ. ಇದರಿಂದ ರಾಜ್ಯದ ತಲಾ ಆದಾಯವು ಹೆಚ್ಚಳವಾಗಲು ಕಾರಣವಾಗಿದೆ ಎಂದಿದ್ದಾರೆ.

ವಿಶ್ವ ದಾಖಲೆಗೆ ಸೇರ್ಪಡೆಯಾದ ಶಕ್ತಿ ಯೋಜನೆಯಲ್ಲಿ ತೊಡಗಿಸಿಕೊಂಡ ಪ್ರತಿಯೊಬ್ಬರಿಗೂ ಇಂದು ಹೆಮ್ಮೆ ಮತ್ತು ಗೌರವ. ಶಕ್ತಿ ಯೋಜನೆಯನ್ನು ದೇಶದ ವಿವಿಧ ರಾಜ್ಯಗಳಲ್ಲಿ ಬೇರೆ ಬೇರೆ ಹೆಸರು, ಬದಲಾವಣೆಗಳೊಂದಿಗೆ ಜಾರಿಗೆ ತರಲಾಗುತ್ತಿರುವುದೇ ನಮ್ಮ ಸರ್ಕಾರದ ಶಕ್ತಿ ಯೋಜನೆಯ ಯಶಸ್ಸಿಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ತಿಳಿಸಿದ್ದಾರೆ.

## ಮೊದಲು ಅಫಿಡವಿಟ್ ಸಲ್ಲಿಸಲಿ: ಕಾಂಗ್ರೆಸ್

ಪ್ರಾರಂಭವಾಗುತ್ತಿದ್ದಂತೆ, ಜ್ಞಾನೇಶ್ ಕುಮಾರ್ ಪತ್ರಿಕಾಗೋಷ್ಠಿ ಮಾಡಬೇಕಾಯಿತು. ಮುಖ್ಯ ಚುನಾವಣಾ ಆಯುಕ್ತರು ಇದ್ದಾರೆ ಎಂದು ನಮಗೆ ತಿಳಿದುಬಂದಿತು" ಎಂದರು.

"ಮೊದಲು, ಅನುರಾಗ್ ಠಾಕೂರ್, ಸಂಬಿತ್ ಪಾತ್ರ ಅಥವಾ ಇತರ ವ್ಯಕ್ತಿಯೊಬ್ಬರು ಕಾಮೆಂಟ್‌ಗಳನ್ನು ಮಾಡುತ್ತಾರೆ ಎಂದು ನಾವು ಭಾವಿಸುತ್ತಿದ್ದೆವು. ಆದರೆ ಅಂತಿಮವಾಗಿ ನಾವು ಸಿಇಸಿಯನ್ನು ನೋಡಿದ್ದೇವೆ" ಎಂದು ಖೇರಾ ಹೇಳಿದ್ದಾರೆ.

ಬಿಜೆಪಿ "ವೋಟ್ ಚೋರಿ" ಮಾಡಲು ಮತ್ತು "ಸಂವಿಧಾನವನ್ನು ಕದಿಯಲು" ಬಯಸುತ್ತದೆ ಎಂದು ಕನ್ಹಯ್ಯಾ ಕುಮಾರ್ ಆರೋಪಿಸಿದರು.

ಹರಿಯಾಣ ಮತ್ತು ಮಹಾರಾಷ್ಟ್ರದಲ್ಲಿ, ಸಮೀಕ್ಷೆಗಳು ಕಾಂಗ್ರೆಸ್ ಸರ್ಕಾರ ರಚನೆಯಾಗುತ್ತದೆ ಎಂದು ಸೂಚಿಸಿದ್ದವು. ಆದರೆ ಇದಕ್ಕೆ ವಿರುದ್ಧವಾಗಿ ಫಲಿತಾಂಶ ಬಂದಿತು ಎಂದು ಕನ್ಹಯ್ಯಾ ಕುಮಾರ್ ಹೇಳಿದರು.

## ಶುಭಾಂಶು ಶುಕ್ಲಾ

ಅನುಭವ ಹಂಚಿಕೊಂಡಿದ್ದಾರೆ. ಮೋದಿ, ಶುಕ್ಲಾ ಅವರ ಸಾಧನೆಗಳನ್ನು ಮಾತ್ರವಲ್ಲದೇ, ಭೂಮಿಯಾಚೆಗೆ ಕನಸು ಕಾಣಲು ಯುವಪೀಳಿಗೆಯನ್ನು ಪ್ರೇರೇಪಿಸಿದ್ದಕ್ಕಾಗಿ ಶ್ಲಾಘಿಸಿದರು.

ಇನ್ನೂ ಸೋಮವಾರ ಸಂಸತ್ತಿನಲ್ಲಿ ಶುಭಾಂಶು ಶುಕ್ಲಾ ಅವರಿಗೆ ವಿಶೇಷ ಗೌರವ ಸಲ್ಲಿಸಲಾಯಿತು. ಲೋಕಸಭೆಯಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರು ಶುಕ್ಲಾ ಸಾಧನೆಯನ್ನು ಬಣ್ಣಿಸಿ, 2040ರಲ್ಲಿ ಭಾರತದ ಗಗನಯಾನಿ ಚಂದ್ರನ ಮೇಲೆ ಇಳಿಯಲಿದ್ದಾರೆ ಎಂದು ಹೇಳಿದರು.

## ಮಹಾಭಿಯೋಗಕ್ಕೆ ವಿಪಕ್ಷಗಳ ಸಿದ್ಧತೆ

ಪರಿಣಾಮದ ಕುರಿತು ಲೋಕಸಭೆಯಲ್ಲಿ 2 ದಿನಗಳ ಕಾಲ ವಿಶೇಷ ಚರ್ಚೆ ನಡೆಯಲಿದ್ದು, ಈ ವಿಶೇಷ ಚರ್ಚೆಯಲ್ಲಿ ಸರ್ಕಾರದೊಂದಿಗೆ ಸಹಕರಿಸದಿರಲು ವಿರೋಧ ಪಕ್ಷಗಳು ನಿರ್ಧರಿಸಿವೆ. ವಿಶೇಷ ಚರ್ಚೆಯಲ್ಲಿ ಭಾಗವಹಿಸದಿರಲು ಮತ್ತು ಪ್ರತಿಭಟನೆಗಳನ್ನು ಮುಂದುವರಿಸಲು ನಿರ್ಧರಿಸಿದ್ದೇವೆಂದು ವಿಪಕ್ಷಗಳ ನಾಯಕರು ತಿಳಿಸಿದ್ದಾರೆ.

## ಫಾಸ್ಟ್‌ಟ್ಯಾಗ್ ಪಾಸ್ ಮಾರಾಟ

ಕರ್ನಾಟಕ ಮತ್ತು ಹರಿಯಾಣ ರಾಜ್ಯಗಳು ಹೆಚ್ಚು ಪಾಸ್ ಖರೀದಿಸಿವೆ" ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಲ್ಲದೆ, ಟೋಲ್ ಪ್ಲಾಜಾಗಳಲ್ಲಿ ಫಾಸ್ಟ್‌ಟ್ಯಾಗ್ ವಾರ್ಷಿಕ ಪಾಸ್ ಮೂಲಕ ಗರಿಷ್ಠ ವಹಿವಾಟುಗಳು ತಮಿಳುನಾಡು, ಕರ್ನಾಟಕ ಮತ್ತು ಆಂಧ್ರಪ್ರದೇಶದಲ್ಲಿ ದಾಖಲಾಗಿವೆ.

ವಾರ್ಷಿಕ ಪಾಸ್ ವ್ಯವಸ್ಥೆಯನ್ನು ಪರಿಚಯಿಸಿರುವುದರಿಂದ ರಾಜಮಾರ್ಗ್ ಯಾತ್ರಾ ಮೊಬೈಲ್ ಅಪ್ಲಿಕೇಶನ್ ಬಳಕೆದಾರರ ಸಂಖ್ಯೆಯೂ ಹೆಚ್ಚಾಗಿದೆ. ಈ ಅಪ್ಲಿಕೇಶನ್ ಮೂಲಕ ಪಾಸ್ ಖರೀದಿಸಬಹುದು. "ಇದು ಗೂಗಲ್‌ನ ಪ್ಲೇಸ್ಟೋರ್ ಶ್ರೇಯಾಂಕದಲ್ಲಿ ಒಟ್ಟಾರೆಯಾಗಿ 23ನೇ ಸ್ಥಾನವನ್ನು ತಲುಪಿದೆ ಮತ್ತು 15 ಲಕ್ಷಕ್ಕೂ ಹೆಚ್ಚು ಡೌನ್‌ಲೋಡ್‌ಗಳೊಂದಿಗೆ ಪ್ರಯಾಣ ವಿಭಾಗದಲ್ಲಿ 2 ನೇ ಸ್ಥಾನವನ್ನು ತಲುಪಿದೆ.

ಫಾಸ್ಟ್‌ಟ್ಯಾಗ್ ವಾರ್ಷಿಕ ಪಾಸ್ ಸೌಲಭ್ಯವು ರಾಷ್ಟ್ರೀಯ ಹೆದ್ದಾರಿಗಳು ಮತ್ತು ರಾಷ್ಟ್ರೀಯ ಎಕ್ಸ್‌ಪ್ರೆಸ್‌ವೇಗಳಲ್ಲಿ ಸುಮಾರು 1,150 ಟೋಲ್ ಪ್ಲಾಜಾಗಳಿಗೆ ಮಾನ್ಯವಾಗಿದೆ.

## ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ತಪಾಸಣೆ ನಡೆಸಿ ಉಚಿತವಾಗಿ ಕನ್ನಡಕ ವಿತರಣೆ



ಕಲಬುರಗಿ :ಆ.18: ಜಿಲ್ಲಾ ಆರೋಗ್ಯಮತ್ತುಕುಟುಂಬಕಲ್ಯಾಣ ಇಲಾಖೆಯ ಜಿಲ್ಲಾ ಅಂದತ್ವ ನಿವಾರಣ ಕಾರ್ಯಕ್ರಮದಡಿ ಅಲೋಕಾ ವಿಷನ್ ಫೌಂಡೇಶನ್ ಸಹಯೋಗದೊಂದಿಗೆ ಸೋಮವಾರ ಕಲಬುರಗಿ ನಗರದ ಸರ್ಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಕನ್ನಡಕ ವಿತರಿಸುವ ಕಾರ್ಯಕ್ರಮವನ್ನು ಕಲಬುರಗಿ ಜಿಲ್ಲಾ ಆರೋಗ್ಯಮತ್ತುಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ॥ ಶರಣಬಸಪ್ಪ ಕ್ಯಾತನಾಳ ಅವರು ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ದೃಷ್ಟಿ ದೋಷ ಹೊಂದಿರುವ ಮಕ್ಕಳಿಗೆ ಉಚಿತ ಕನ್ನಡಕ ನೀಡುವುದು ಸರ್ಕಾರದ ಪ್ರಮುಖ ಗುರಿಯಾಗಿದೆ. ಈ ಸರ್ಕಾರದ ಯೋಜನೆಗೆ ಮೆಚ್ಚುಗೆ ವ್ಯಕ್ತಪಡಿಸಿ, ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ಇದು ಪರಿಣಾಮಕಾರಿ ಹೆಜ್ಜೆ ಎಂದು ಅಭಿಪ್ರಾಯಪಟ್ಟರು. ಮುಂದಿನ ದಿನಗಳಲ್ಲಿ ಇಂತಹ ಆರೋಗ್ಯ ಕಾರ್ಯಕ್ರಮಗಳನ್ನು ಇನ್ನಷ್ಟು ಬಲಪಡಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಂದತ್ವ ನಿವಾರಣಾ ಅಧಿಕಾರಿಗಳಾದ ಡಾ॥ ವಿವೇಕಾನಂದ ರೆಡ್ಡಿ ಅವರು ಮಾತನಾಡಿ, ಮಕ್ಕಳ ದೃಷ್ಟಿ ಸಮಸ್ಯೆಗಳನ್ನು ಆರಂಭದಲ್ಲೇ ಪತ್ತೆಹಚ್ಚಿ ಚಿಕಿತ್ಸೆ ನೀಡುವುದು ಅವರ ವಿದ್ಯಾಭ್ಯಾಸಕ್ಕೆ ಸಹಾಯಕ. ಈ ಶಾಲೆಯಲ್ಲಿ ಸುಮಾರು 200 ಮಕ್ಕಳಿಗೆ ತಪಾಸಣೆ ಮಾಡಲಾಗಿ 17 ಮಕ್ಕಳಿಗೆ ದೃಷ್ಟಿ ದೋಷ ಕಂಡು ಬಂದ ಹಿನ್ನಲೆಯಲ್ಲಿ ವಿದ್ಯಾರ್ಥಿನಿಯರಿಗೆ ಅವರ ಇಚ್ಛೆಗೆ ಅನುಗುಣವಾಗಿ ವಿವಿಧ ಬಣ್ಣದ ಕನ್ನಡಕಗಳನ್ನು ವಿತರಣೆ ಮಾಡಿದ್ದು, ಈ ಒಂದು ಕಾರ್ಯಕ್ರಮವು ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಕನ್ಯಾ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯ ವಿಜಯಕುಮಾರ ಬೆಳಮಗಿ ಸೇರಿದಂತೆ ಅರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಪ್ರೌಢ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಾಹಿಸಿದ್ದರು.

## ಹೊನ್ನಿಕೇರಿ ಭಕ್ತರಿಗೆ ಸುಸಜ್ಜಿತ ಯಾತ್ರಿ ನಿವಾಸ

ಬೀದರ್:ಅ.18: ತಾಲೂಕಿನ ಸುಕ್ಷೇತ್ರ ಹೊನ್ನಿಕೇರಿ ಶ್ರೀ ಸಿದ್ದೇಶ್ವರ ದೇವಸ್ಥಾನಕ್ಕೆ ಬರುವ ಭಕ್ತರ ಸೌಕರ್ಯಕ್ಕಾಗಿ 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಸುಸಜ್ಜಿತ ಯಾತ್ರಿ ನಿವಾಸಕ್ಕೆ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಸೋಮವಾರ ಗುದ್ದಲಿ ಪೂಜೆ ನೆರವೇರಿಸಿದರು.ಈ ವೇಳೆ ಮಾತನಾಡಿದ ಶಾಸಕರು, ಐತಿಹಾಸಿಕ ಧಾರ್ಮಿಕ ಕೇಂದ್ರವಾಗಿ ಪ್ರಸಿದ್ಧಿ ಪಡೆದಿರುವ ಹೊನ್ನಿಕೇರಿ ಶ್ರೀ ಸಿದ್ದೇಶ್ವರ ಕ್ಷೇತ್ರಕ್ಕೆ ಕರ್ನಾಟಕವಲ್ಲದೆ ನೆರೆಯ ಮಹಾರಾಷ್ಟ್ರ, ತೆಲಂಗಾಣದಿಂದಲೂ ಅಪಾರ ಭಕ್ತಾದಿಗಳು ಆಗಮಿಸುತ್ತಾರೆ. ಶ್ರಾವಣಮಾಸ ತಿಂಗಳಪೂರ್ತಿ ಹಾಗೂ ಪ್ರತಿ

ಸೋಮವಾರ, ಹುಣ್ಣಿಮೆ, ಅಮವಾಸ್ಯೆ ದಿನ ಭಕ್ತಸಮೂಹವೇ ಹರಿದುಬರುತ್ತದೆ.

ಆದರೆ ಇಲ್ಲಿ ಉತ್ತಮ ವಸತಿ, ಶೌಚಾಲಯ,

ಸ್ನಾನಗೃಹ, ಭೋಜನ ಸೇರಿದಂತೆ ಅಗತ್ಯ ಸೌಲಭ್ಯಗಳ ಕೊರತೆಯಿಂದ ಭಕ್ತಾದಿಗಳಿಗೆ ಅನಾನುಕೂಲತೆ ಕಾಡುತ್ತಿತ್ತು. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಅಗತ್ಯ ಸೌಲಭ್ಯಗಳುಳ್ಳ ಯಾತ್ರಿ ನಿವಾಸ ನಿರ್ಮಿಸಲಾಗುತ್ತಿದೆ ಎಂದು ಹೇಳಿದರು.ವಿವಿಧೆಡೆಯಿಂದ ಬರುವ ಭಕ್ತರಿಗೆ ಯಾತ್ರಿ ನಿವಾಸದಲ್ಲಿ ಸುಸಜ್ಜಿತ ಕೊಠಡಿಗಳಿರಲಿವೆ.

## ಅಕ್ಕ ಕೆಫೆಗೆ ಭೇಟಿ ನೀಡಿ ಹೋಳಿಗೆ ಊಟ ಸವಿದ ಮಾಜಿ ಶಾಸಕ ಹೂಲಗೇರಿ

ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:ಅ.18:ಪಟ್ಟಣದ ಸ್ತ್ರೀ ಶಕ್ತಿ ಸ್ವಸಹಾಯ ಗುಂಪುಗಳ ಸದಸ್ಯೆಯರನ್ನು ಹೋಟೆಲ್ ಉದ್ದಿಮೆಯಲ್ಲಿ ತೊಡಗಿಸಿ, ಅವರ ಸ್ವಾವಲಂಬಿ ಜೀವನಕ್ಕೆ ನೆರವಾಗುವ ಉದ್ದೇಶದಿಂದ ರಾಷ್ಟ್ರೀಯ ಜೀವನೋಪಾಯ ಮಿಷನ್ ಇಲ್ಲಿನ ತಾಲೂಕು



ಪಂಚಾಯತ ಆವರಣದಲ್ಲಿ ಆರಂಭಿಸಿದ 'ಅಕ್ಕ ಕೆಫೆ' ಲಿಂಗಸುಗೂರು ಕಾಂಗ್ರೆಸ್ ಮಾಜಿ ಶಾಸಕ ಡಿ ಎಸ್ ಹೂಲಗೇರೀ ಅವರು ಭೇಟಿ ನೀಡಿ,ಹೋಳಿಗೆ ಊಟ ಸವಿದು ಪರಿಶೀಲಿಸಿದರು ಇವರ ಜೊತೆಗೆ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ್ ಪುರಸಭಾ ಮಾಜಿ ಉಪಾಧ್ಯಕ್ಷ ಮೊಮ್ಮದ್ ರಫಿ ಬ್ಲಾಕ್ ಬ್ಲಾಕ್ ಕಾಂಗ್ರೆಸ್ ಯುವ ಘಟಕ ಅಧ್ಯಕ್ಷರಾದ ಸಂತೋಷ್ ಸಪ್ಪಿಮಠ ಎಸ್ ಸಿ ಘಟಕ ಅಧ್ಯಕ್ಷರಾದ ಉಮೇಶ ಐಹೊಳೆ ಹಾಜಿ ಬಾಬಾ ಕರಡಕಲ್ ಇನ್ನಿತರ ಇದ್ದರು

## ಪರಮೇಶ್ವರ್ 'ವಾರ್ನಿಂಗ್'ಗೆ ಸಂಪಾದಕರ ಸಂಘ ಖಂಡನೆ ಕ್ಷಮೆಯಾಚನೆಗೆ ಒತ್ತಾಯ

ತುಮಕೂರು: ತುಮಕೂರು ದಸರಾ ಉತ್ಸವವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪತ್ರಕರ್ತರಿಗೆ ವಾರ್ನಿಂಗ್ ನೀಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರ ಹೇಳಿಕೆಗೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ತುಮಕೂರು ಜಿಲ್ಲಾ ಘಟಕವು ತೀವ್ರವಾಗಿ ಖಂಡಿಸಿದ್ದು, ಕೂಡಲೇ ಸಚಿವ ಪರಮೇಶ್ವರ್ ಅವರು ಪತ್ರಕರ್ತರ ಕ್ಷಮೆಯಾಚನೆಗೆ ಆಗ್ರಹಿಸಿದೆ.

ಈ ಕುರಿತು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ. ಎಸ್.ಕೃಷ್ಣಮೂರ್ತಿ, ಜಿಲ್ಲಾಧ್ಯಕ್ಷ ಜಿ.ಕರುಣಾಕರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ಎನ್.ಮಂಜುನಾಥ್ ಗೌಡ, ಜಿಲ್ಲಾ ಉಪಾಧ್ಯಕ್ಷ ಪಿ.ಎಸ್. ಮಲ್ಲಿಕಾರ್ಜುನ ಸ್ವಾಮಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮಹೇಶ್ ಕುಮಾರ್ ಸಿ.ಎನ್ ಅವರುಗಳು ಆಗಷ್ಟ್ 18 ರಂದು ಪತ್ರಿಕಾ ಪ್ರಕಟಣೆ ನೀಡಿ ಗೃಹ ಸಚಿವರ ಕ್ಷಮೆಯಾಚನೆಗೆ ಆಗ್ರಹಿಸಿದ್ದಾರೆ.ಗೃಹ ಸಚಿವರು ತುಮಕೂರು ಜಿಲ್ಲೆಯ ಅಭಿವೃದ್ಧಿ ಕುರಿತಂತೆ ಅಧಿಕಾರಿಗಳಿಗೆ ಖಡಕ್ ವಾರ್ನಿಂಗ್ ಕೊಟ್ಟು ಕೆಲಸ ಮಾಡಿಸುವುದು ಬಿಟ್ಟು, ತಪ್ಪು ಒಪ್ಪುಗಳನ್ನು ಎತ್ತಿ ಹಿಡಿಯುವ



ಪತ್ರಕರ್ತರಿಗೆ ವಾರ್ನಿಂಗ್ ಕೊಡುವುದು ಎಷ್ಟು...? ಸಮಂಜಸವೆಂದು ಪ್ರಶ್ನೆ ಮಾಡಿರುವ ಸಂಘದ ಪದಾಧಿಕಾರಿಗಳು ಗೃಹ ಸಚಿವರ ಈ ನಡುವಳಿಕೆ ಖಂಡನೀಯವೆಂದಿದ್ದಾರೆ.ಸಂವಿಧಾನದ ನಾಲ್ಕನೇ ಅಂಗವಾಗಿ ನಾವು ಕಾರ್ಯನಿರ್ವಹಿಸುತ್ತಿದ್ದೇವೆ. ಅದೇ ಸಂವಿಧಾನದಡಿಯಲ್ಲಿ ನೀವು ಕಾರ್ಯನಿರ್ವಹಿಸುತ್ತಿದ್ದೀರಿ.

ನೀವು ಸರಿಯಾಗಿ ಕೆಲಸ ಮಾಡಿದಾಗ ಹೊಗಳಿ ಬರೆದಿದ್ದೇವೆ. ತಪ್ಪು ಮಾಡಿದಾಗ ತಪ್ಪು ಎಂದು ಬರೆದಿದ್ದೇವೆ. ನೀವು ತಪ್ಪು ಮಾಡಿದರೂ ಹೊಗಳಿ ಬರೆಯಬೇಕು ಎಂಬ ನಿಮ್ಮ ವಾರ್ನಿಂಗ್ ಸರಿಯಾದ ಕ್ರಮವಲ್ಲ. ಎರಡನ್ನೂ ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಿ. ಜಿಲ್ಲೆಯಲ್ಲಿ ಜ್ವಲಂತ ಸಮಸ್ಯೆಗಳು ತಾಂಡವವಾಡುತ್ತಿದ್ದು, ಈ ಬಗ್ಗೆ ಗಮನಹರಿಸಿ ಅಧಿಕಾರಿಗಳಿಗೆ ಚಾಟಿ ಬೀಸಿ, ಪತ್ರಕರ್ತರಿಗೆ ವಾರ್ನಿಂಗ್ ಕೊಡಲು ಬರಬೇಡಿ, ನಿಮ್ಮ ವಾರ್ನಿಂಗ್ ಹೇಳಿಕೆಯನ್ನು ವಾಪಸ್ ಪಡೆದು ಪತ್ರಕರ್ತರ ಕ್ಷಮೆಯಾಚಿಸಬೇಕೆಂದು ಸಚಿವರಿಗೆ ಒತ್ತಾಯಿಸಿದ್ದಾರೆ. ಇನ್ನು ಪರಮೇಶ್ವರ್ ಹೇಳಿಕೆಯನ್ನು ಸಮರ್ಥಿಸಿಕೊಂಡಿರುವ ಕೇಂದ್ರ ಸಚಿವ ವಿ.ಸೋಮಣ್ಣ ಅವರೂ ಸಹ ಇದಕ್ಕೆ ಹೊರತಾಗಿಲ್ಲ, ರಾಜಕಾರಣಿಗಳು ಯಾವತ್ತೂ ರಾಜಕಾರಣಿಗಳನ್ನು ಬಿಟ್ಟುಕೊಡುವುದಿಲ್ಲ. ಹಾಗಾಗಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ತುಮಕೂರು ಜಿಲ್ಲಾ ಘಟಕವು ಸಚಿವರ ವರ್ತನೆಯನ್ನು ಖಂಡಿಸಿದೆ.

## ಸಿಹಿ ತಿಂಡಿಗಳನ್ನು ಸೇವಿಸುವುದರ ಜತೆಗೆ ಕೆಲವು ಪದಾರ್ಥಗಳಿಂದಲೂ ದೂರ ಇರುವುದು ಮುಖ್ಯ: ಡಾ. ರಾಡ್ಸನ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ – ಪಟ್ಟಣದ ಶ್ರೀ ವೀರಭದ್ರೇಶ್ವರ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯಕೀಯ ಅಭ್ಯಾಸ ವಿಭಾಗವು ಧುಮನ್ಸೂರ್ ಮತ್ತು ಹತ್ತಿರದ ಹಳ್ಳಿಗಳ ರೋಗಿಗಳಿಗೆ ಅನುಕೂಲವಾಗುವಂತೆ ಮಧುಮೇಹ ತಪಾಸಣೆ, ಅಧಿಕ ರಕ್ತದೊತ್ತಡ ಮತ್ತು ವಿಶೇಷ ಶಿಬಿರವನ್ನು ಜರುಗಿತ್ತು. ಶಿಬಿರದ ಶೈಕ್ಷಣಿಕ ಉಪಕ್ರಮದ ಭಾಗವಾಗಿ, ಡಾ. ರಾಡ್ಸನ್ ಮಾತನಾಡಿ, ಮಧುಮೇಹ ರೋಗಿಗಳು ತಮ್ಮ ಆರೋಗ್ಯದ ಬಗ್ಗೆ ಬಹಳ ಜಾಗರೂಕರಾಗಿರಬೇಕು. ದೈನಂದಿನ ಆಹಾರದ ವಿಷಯದಲ್ಲಿ ಮಾಡುವ ಸಣ್ಣ ತಪ್ಪುಗಳು ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆಯಿದೆ. ಮಧುಮೇಹ ರೋಗಿಗಳು ವಾಸ್ತವವಾಗಿ ಕೆಲವು ಆಹಾರಗಳಿಂದ ದೂರವಿರುವುದೇ ಉತ್ತಮ. ಸಿಹಿ ತಿಂಡಿಗಳನ್ನು ಸೇವಿಸುವುದರ ಜತೆಗೆ ಕೆಲವು ಪದಾರ್ಥಗಳಿಂದಲೂ ದೂರ ಇರುವುದು ಮುಖ್ಯ. ಇನ್ನು ಜ್ಯೂಸ್ ಕುಡಿಯುವ ಅಭ್ಯಾಸವನ್ನು ಕೈ ಬಿಡುವುದು ಉತ್ತಮ. ಬೇಳೆಕಾಳು ದ್ವಿದಳ ಧಾನ್ಯಗಳು ಗ್ಲೈಸೆಮಿಕ್ ಪದಾರ್ಥಗಳಾಗಿವೆ. ಅವುಗಳು ಕಾರ್ಬೋಹೈಡ್ರೇಟ್‌ಗಳನ್ನು ಕ್ರಮೇಣ ಬಿಡುಗಡೆ ಮಾಡುತ್ತವೆ. ಇವು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಹೆಚ್ಚಿಸುವ ಸಾಧ್ಯತೆಯನ್ನು ಕಡಿಮೆ ಮಾಡುತ್ತದೆ. ಇತ್ತೀಚಿನ ಅಧ್ಯಯನದ ಪ್ರಕಾರ ಬೀನ್ಸ್‌ನಂತಹ ಕಡಿಮೆ ಗ್ಲೈಸೆಮಿಕ್ ಆಹಾರವನ್ನು ಸುಮಾರು ಮೂರು ತಿಂಗಳ ಕಾಲ ಸೇವಿಸುವುದರಿಂದ ದೇಹದಲ್ಲಿ ಹಿಮೋಗ್ಲೋಬಿನ್ ಎ 1 ಮತ್ತು ಸಿ ಮಟ್ಟ ಕಡಿಮೆಯಾಗುತ್ತದೆ. ಸೇಬು ಇದು ಕಡಿಮೆ ಗ್ಲೈಸೆಮಿಕ್ ಆಗಿದೆ. ಇದರಲ್ಲಿ ಫೈಬರ್ ಮತ್ತು ವಿಟಮಿನ್ ಸಿ ಸಮೃದ್ಧವಾಗಿದೆ. ದಿನಕ್ಕೆ ಒಂದು ಅಥವಾ 2 ಸೇಬನ್ನು ತಿನ್ನುವುದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಬಾದಾಮಿ ಬಾದಾಮಿಯಲ್ಲಿ ಮೆಗ್ನೀಸಿಯಮ್ ಅಧಿಕವಾಗಿರುತ್ತದೆ. ಇದು ಇನ್ಸುಲಿನ್ ಅನ್ನು ಹೆಚ್ಚು ಪರಿಣಾಮಕಾರಿಯಾಗಿ ಉತ್ಪಾದಿಸಲು ಸಹಾಯ ಮಾಡುತ್ತದೆ. ಇದರಲ್ಲಿ ಮೊನೊಸಾಚುರೇಟೆಡ್ ಕೊಬ್ಬಿನಾಮ್ಲಗಳು, ಪ್ರೋಟೀನ್ ಮತ್ತು ಫೈಬರ್ ಕೂಡ ಅಧಿಕವಾಗಿದೆ. ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಬಾದಾಮಿ ಸಹಾಯ ಮಾಡುತ್ತದೆ. ಸೊಪ್ಪು 21 ಕ್ಯಾಲೊರಿಗಳನ್ನು ಹೊಂದಿರುತ್ತದೆ. ಇದರಲ್ಲಿ ಮೆಗ್ನೀಸಿಯಮ್ ಮತ್ತು ಫೈಬರ್ ಕೂಡ ಇದೆ. ಪಾಲಕ್‌ನಂತಹ ಸೊಪ್ಪುಗಳನ್ನು ಎಣ್ಣೆಯಲ್ಲಿ ಹುರಿದು ತಿನ್ನುವುದರಿಂದ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಬಹುದು. ಓಟ್ಸ್ ಓಟ್ಸ್ ಹೃದಯಕ್ಕೆ ಒಳ್ಳೆಯದು ಎನ್ನುವ ವಿಚಾರ ನಮಗೆ ತಿಳಿದಿದೆ. ಅಂತೆಯೇ ಓಟ್ಸ್ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಕಡಿಮೆ ಮಾಡಲು ಕೂಡ ಸಹಾಯ ಮಾಡುತ್ತದೆ. ಇವು ಕಡಿಮೆ ಗ್ಲೈಸೆಮಿಕ್ ಅನ್ನು ಹೊಂದಿದ್ದು, ಆ ಮೂಲಕ ಮಧುಮೇಹವನ್ನು ದೂರ ಮಾಡುತ್ತದೆ. ಏಕೆಂದರೆ ಇದು ಸಕ್ಕರೆ ಮಟ್ಟವನ್ನು ಕಡಿಮೆ ಮಾಡಲು ಸಹಾಯಕವಾದ ಮಾರ್ಗವಾಗಿದೆ ಎಚಿದರು. ಮಧುಮೇಹದ ಅಪಾಯಕಾರಿ ಅಂಶಗಳ ಕುರಿತು ಭಾಷಣ ಮಾಡಿದರು, ಆದರೆ

ಸಹಾಯಕ ಪ್ರಾಧ್ಯಾಪಕ ಡಾ. ರಾಡ್ಸನ್ ಎಂ., ಡಾ. ಜಾಗೃತಿ ಮತ್ತು ಡಾ. ಜಿಲಾನಿ ಅವರ ಮಾರ್ಗದರ್ಶನದಲ್ಲಿ ಅಂತಿಮ ವರ್ಷದ ಬಿಎಚ್‌ಎಂಎಸ್ ವಿದ್ಯಾರ್ಥಿಗಳು ನಡೆಸಿದ ಉಚಿತ ರಕ್ತದಲ್ಲಿನ ಸಕ್ಕರೆ ಮತ್ತು ರಕ್ತದೊತ್ತಡ ತಪಾಸಣೆ ಸೇರಿದಂತೆ ಒಟ್ಟು 52 ರೋಗಿಗಳು ಸೇವೆಗಳನ್ನು ಪಡೆದರು. ಪರೀಕ್ಷೆಗಳ ಅಗತ್ಯವಿರುವ 22 ರೋಗಿಗಳಿಗೆ ರಕ್ತದಲ್ಲಿನ ಗ್ಲೂಕೋಸ್ ಮಟ್ಟಗಳು ಮತ್ತು ಹಿಮೋಗ್ಲೋಬಿನ್ ಅಂದಾಜು ಮಾಡಲಾಯಿತು. ಡಾ. ಜಾಗೃತಿ ಮತ್ತು ಡಾ. ಜಿಲಾನಿ ಸಾಮಾನ್ಯ ಲಕ್ಷಣಗಳು, ಸಕಾಲಿಕ ತನಿಖೆಗಳ ಮಹತ್ವವನ್ನು ಚರ್ಚಿಸಿದರು ಮತ್ತು ಆರೋಗ್ಯಕರ ಆಹಾರ ಮತ್ತು ನಿಯಮಿತ ವ್ಯಾಯಾಮದ ಕುರಿತು ಮಾರ್ಗದರ್ಶನ ನೀಡಿದರು.

ಈ ಶಿಬಿರವನ್ನು ಹುಮನಾಬಾದ್‌ನ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಬಿ. ಪಾಟೀಲ್ ಅವರ ಮಾರ್ಗದರ್ಶನ ಮತ್ತು ಬೆಂಬಲದೊಂದಿಗೆ ನಡೆಸಲಾಯಿತು. ಈ ಸಂದರ್ಭದಲ್ಲಿ ಸಚಿಜಯ್ ಗುತ್ತೇದಾರ, ಡಾ. ಇಂದ್ರಜೀತ್ ಹಾಗೂ ಸಿಬ್ಬಂದಿ ವರ್ಗದವರಿದ್ದರು.

## ಜ್ಞಾನ , ಕೌಶಲ್ಯ, ಮನೋಧೋರಣೆ ಯಿಂದ ಯಶಸ್ಸು : ಡಾ. ಗುರುರಾಜ ಕರಜಗಿ.



(ವರದಿ. ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಆ 18 ಪ್ರತಿಯೊಬ್ಬರು ತಾವು ಮಾಡುವ ಕೆಲಸದಲ್ಲಿ ವಿಶ್ವಾಸ ವಿರಬೇಕು. ನಿರಂತರ ಪರಿಶ್ರಮಪಡುವ ಮೂಲಕ ಯಶಸ್ಸು ದೊರೆ–ಯುತ್ತದೆ. ಓದು ಅಧ್ಯಯನದಲ್ಲಿ ನಿರ್ಲಕ್ಷ್ಯ ನಿಷ್ಕಾಳಜಿ ಮಾಡದೆ, ನಕಾರಾತ್ಮಕ ಆಲೋಚನೆಗಳು ಬೆಳೆಸಿಕೊಳ್ಳದೆ ಯಶಸ್ಸು ಸಿಗಲು ಸಾಧ್ಯ ಎಂದು ಶಿಕ್ಷಣ ತಜ್ಞ ಡಾ. ಗುರುರಾಜ ಕರಜಗಿ ಹೇಳಿದರು.

ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ನಗರದ ರಥ ಮೈದಾನದ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಶೈಕ್ಷಣಿಕ ಕಾರ್ಯಾಗಾರದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು, ಲೋಕದ ಚಲನೆಯನ್ನು, ವ್ಯವಸ್ಥೆಯನ್ನು ನಿಯಂತ್ರಿಸುವ ಪ್ರಾಕೃತಿಕ ಚೈತನ್ಯವನ್ನು ನಾವೆಲ್ಲರೂ ನಂಬಲೇಬೇಕು ಎಂದರು.

ಜಗತ್ತಿನಲ್ಲಿ ಒಂದು ದೊಡ್ಡ ಶಕ್ತಿಯಿದೆ. ಭೂಗೋಳ, ನಿಸರ್ಗ, ಆಕಾಶಕಾಯಗಳು ಸೇರಿ ಎಲ್ಲವೂ ತನ್ನ ಕೆಲಸ ತಾನೇ ಮಾಡುವಂತಹ ಒಂದು ಚೈತನ್ಯವಿದೆ. ಪ್ರಕೃತಿಯನ್ನು ನಿಯಂತ್ರಿಸುವ ಮತ್ತು ಪ್ರಕೃತಿ ವ್ಯವಸ್ಥೆ ಕಾಪಾಡುವ ಚೇತನವನ್ನೇ ನಾವು ದೇವರೆಂದು ಕರೆದಿದ್ದೇವೆ ಎಂದರು.

ಅಧಿಕಾರ ಮತ್ತು ಸಂಪತ್ತು ಬಿಟ್ಟು ಹೋದ ಬುದ್ಧ, ಬಸವಣ್ಣ, ಗಾಂಧೀಜಿ, ರಾಮ ಇವರೆಲ್ಲರೂ ದೇವರೆನಿಸಿದ್ದಾರೆ. ಅಧಿಕಾರ, ಸಂಪತ್ತು ನೆಮ್ಮದಿ ಮತ್ತು ಸಂತೋಷ ಹಾಳು ಮಾಡುವ ಸಂಗತಿಗಳಾಗಿವೆ. ಜ್ಞಾನ ಮತ್ತು ಕೌಶಲ್ಯ ನಿಮ್ಮ ಸಮಾಜಕ್ಕೆ ಉಪಯೋಗವಾಗಬೇಕು ಎಂದರು.

ಸಾನಿಧ್ಯ ವಹಿಸಿದ್ದ ವಿಜಯಪುರದ ಜ್ಞಾನ ಯೋಗಾಶ್ರಮದ ಪೂಜ್ಯ ಶ್ರೀ ಅದ್ವೈತಾನಂದ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಭಕ್ತಿ ಕೇವಲ ಆಧ್ಯಾತ್ಮಿಕ ಲೋಕಕಷ್ಟೇ ಸೀಮಿತವಾಗಿಲ್ಲ. ಬದುಕಿನ ಎಲ್ಲ ವಲಯದಲ್ಲಿ ಭಕ್ತಿ ಅಗತ್ಯವಿದೆ. ಓದು ಅಧ್ಯಯನ ಭಕ್ತಿಯಿಂದ ಮಾಡಿದರೆ ಬದುಕು ಸಾರ್ಥಕವಾಗುತ್ತದೆ ಎಂದರು.

ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು.

ಬಸವಕಲ್ಯಾಣ ಕ್ಷೇತ್ರ ಸಮಿತಿ ಸಂಚಾಲಕ ಹಾಗೂ ಮಾಜಿ ಸಂಸದ ಬಸವರಾಜ ಪಾಟೀಲ ಸೇಡಂ, ಬಿಡಿವಿಸಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ, ಯುವ ಮುಖಂಡ ಚನ್ನಬಸವ ಬಳತೆ, ಸಿಪಿಐ ಅಲಿಸಾಬ್, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಮಲ್ಲಯ್ಯ ಹಿರೇಮಠ, ಜಗನ್ನಾಥ ಖೂಬಾ, ಅಶೋಕ ನಾಗರಾಳೆ, ಕಾಶಪ್ಪ ಸಕ್ಕರಭಾವಿ, ಶ್ರೀಕಾಂತ ಬಡದಾಳೆ, ಅನಿಲಕುಮಾರ ರಗಟೆ, ವಿಶ್ವಸ್ಥರಾದ ಶಿವರಾಜ ಶಾಶೆಟ್ಟೆ, ಸೋಮಶೇಖರಯ್ಯ ವಸ್ತ್ರದ, ಮಲ್ಲಿನಾಥ ಮಂಠಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಿಡಿಪಿಸಿ ಕಾರ್ಯದರ್ಶಿ ವಿವೇಕಾನಂದ ಹೊದಲೂರೆ ಸ್ವಾಗತಿಸಿದರು.

ಡಾ. ಬಸವರಾಜ ಖಂಡಾಳೆ ನಿರೂಪಿಸಿದರು. ಸಂಗೀತಾ ಮಹಾಗಾಂವೆ ವಂದಿಸಿದರು.

ರಂಭಾಪುರಿ ಜಗದ್ಗುರುಗಳ ತೀರ್ಮಾನ ಕೋಟಿ ಕೋಟಿ

## ಭಕ್ತರಿಗೆ ಹರ್ಷ ತಂದಿದೆ ಹಾರಕೂಡ ಶ್ರೀ.





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 18

ಬಸವಣ್ಣನ ಕಾಯಕದ ಪುಣ್ಯಭೂಮಿಯಲ್ಲಿ ಶ್ರೀಗಳ ತೀರ್ಮಾನ ಕೋಟಿ ಕೋಟಿ ಭಕ್ತರಿಗೆ ಹರ್ಷ ತಂದಿದೆ ಮತ್ತು ಸಮಾಜವನ್ನು ಬೆಸೆಯುವ ಕಾರ್ಯ ಮಾಡಿದೆ, ನಿಜವಾಗಿಯು ರಂಭಾಪುರಿ ಶ್ರೀಗಳು ಪೀಠದ ಘೋಷವಾಕ್ಯದಂತೆ ಮಾನವ ಧರ್ಮಕ್ಕೆ ಜಯವಾಗಿಸಿದ್ದಾರೆ ಎಂದು ದಸರಾ ದರ್ಬಾರ್ ಕಾರ್ಯಕ್ರಮದ ಗೌರವ ಅಧ್ಯಕ್ಷರಾದ ಹಾರಕೂಡ ಶ್ರೀಮಠದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ದಸರಾ ದರ್ಬಾರ್ ಸ್ವಾಗತ ಸಮಿತಿಯ ಗೌರವಾಧ್ಯಕ್ಷರಾದ ಡಾ. ಚನ್ನವೀರ ಶಿವಾಚಾರ್ಯರ ಮತ್ತು ಕಾರ್ಯಾಧ್ಯಕ್ಷರಾದ ಶಾಸಕ ಶರಣು ಸಲಗರ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಮಾತನಾಡಿದ ಶ್ರೀಗಳು ಈ ಮೊದಲಿಗೆ ಭಕ್ತರ ಆಶಯದಂತೆ ದಸರಾ ದರ್ಬಾರ್ ಆಚರಿಸಲು ಒಪ್ಪಿಗೆ ಕೊಟ್ಟ ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಅನಂತ ನಮಸ್ಕಾರಗಳು.

ಮೊದಲೇ ದಸರಾ ದರ್ಬಾರ್ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿತ್ತು, ಆದ–ರೆ ಪಲ್ಲಕ್ಕಿ ಮೆರವಣಿಗೆ ಬಗ್ಗೆ ಸ್ವಲ್ಪ ಗೊಂದಲ ಮೂಡಿತ್ತು, ಈಗ ಅದು ತಿಳಿ ಆಗಿದ್ದು, ಈ ಸಭೆಯಲ್ಲಿ ದಸರಾ ದರ್ಬಾರ್ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಯಿತು.

ಭಕ್ತರ ಆಶಯದಂತೆ ವಿಜಯದಶಮಿಯ ಕೊನೆಯ ದಿನದಂದು ಪಲ್ಲಕ್ಕಿಯನ್ನು ಭಕ್ತರ ಹೆಗಲ ಮೇಲೆ ಹೆರುವ ಬದಲಿಗೆ ಅಲಂಕರಿಸಿದ ವಾಹನದ ಮೇಲೆ ಅಡ್ಡ ಪಲ್ಲಕ್ಕಿ ಮೆರವಣಿಗೆ ಮಾಡಲು ತೀರ್ಮಾನಿಸಲಾಯಿತು.

ವೀರಶೈವ ಲಿಂಗಾಯತ ಪರಂಪರೆಯಲ್ಲಿ ಭಕ್ತನ ಭಾವನೆ ಮುಖ್ಯ, ರಂಭಾಪುರಿ ಶ್ರೀಗಳು ಭಕ್ತರ ಮನಸ್ಸಿನ ಇಂಗಿತಕ್ಕೆ ಅನುಗುಣವಾಗಿ ತೀರ್ಮಾನ ತೆಗೆದುಕೊಂಡಿದ್ದು ಅವರ ಔದಾರ್ಯಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಈ ಸಭೆಯಲ್ಲಿ ಸುರೇಶ ಸ್ವಾಮಿ, ದಯಾನಂದ ಶೀಲವಂತ, ಸುನೀಲ ಪಾಟೀಲ, ರಾಜಕುಮಾರ ಸಿರಗಾಪುರ, ಮೇಘರಾಜ ನಾಗರಾಳೆ, ಮಲ್ಲಿನಾಥ ಹಿರೇಮಠ ಹಾರಕೂಡ, ವೀರಣ್ಣ ಶೀಲವಂತ, ಸೂರ್ಯಕಾಂತ ಶೀಲವಂತ, ರಮೇಶ ರಾಜೋಳೆ, ರುದ್ರೇಶ್ವರ ಸ್ವಾಮಿ ಗೋರಟಾ, ಸೂರ್ಯಕಾಂತ ಮಠ, ಚಂದ್ರಶೇಖರ ಪಾಟೀಲ, ಸದಾನಂದ ಪಾಟೀಲ, ಸಿದ್ದು ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

## ಕಲ್ಲೇಶಿವೋತ್ತಮರಾವ್ ಅವರಿಗೆ ದೇವರಾಜ ಅರಸು ಪ್ರಶಸ್ತಿ: ಕೆಯುಡಬ್ಲ್ಯೂಜೆ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಕರ್ನಾಟಕ ಸರ್ಕಾರ ಕೊಡಮಾಡುವ ದೇವರಾಜ ಅರಸು ಪ್ರಶಸ್ತಿಗೆ ಆಯ್ಕೆಯಾಗಿರುವ ತೊಂಬತ್ತೈದು ವರ್ಷದ ಹಿರಿಯ ಪತ್ರಕರ್ತ ಕಲ್ಲೇಶಿವೋತ್ತಮರಾವ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಭಿನಂದನೆಗಳು.

ಸುವರ್ಣ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಅವರ ಮನೆಗೆ ತೆರಳಿ ಮನೆಯಂಗಳದಲ್ಲಿ ಅವರನ್ನು ಗೌರವಿಸಿದ್ದು ಅಭಿಮಾನದ ಸಂಗತಿಯಾಗಿತ್ತು.

ಮನೆಯಂಗಳದಲ್ಲಿ ಪತ್ರಕರ್ತರಿಗೆ ಕೆಯುಡಬ್ಲ್ಯೂಜೆ ನಮನ ಕಾರ್ಯಕ್ರಮವನ್ನು ಕಲ್ಲೇ ಅವರ ಮನೆಯಿಂದಲೇ ಪ್ರಾರಂಭಿಸಲಾಗಿತ್ತು.

ಅಷ್ಟೂ ಪತ್ರಕರ್ತರ ಅನುಭವವನ್ನು ಅಮೃತಬೀಜ ಕೃತಿ ಮೂಲಕ ಕೆಯುಡಬ್ಲ್ಯೂಜೆ ದಾಖಲೀಕರಣ ಮಾಡಿದ್ದು ಈ ಕೃತಿಯನ್ನು ಬಹುರೂಪಿ ಸಂಸ್ಥೆ ಹೊರತಂದಿದೆ.

ಹಿರಿಯ ಪತ್ರಕರ್ತರಾದ ಕಲ್ಲೇ ಶಿವೋತ್ತಮರಾವ್ ಅವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಅಭಿನಂದಿಸಿದ್ದಾರೆ.

## ಯುವ ಕ್ರಾಂತಿ ಸಂಘಟನೆ; ಉತ್ತಮ ಕೆಲಸ ಮಾಡಲಿ ಮಾಜಿ ಸಚಿವ ರಾಜಶೇಖರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 18 ಯುವ ಸಂಘಟನೆಗಳು ಉತ್ತಮ ಕೆಲಸ ಮಾಡಲಿ ಮತ್ತು ಜನಹಿತ ಕಾಯಲು ಆದ್ಯತೆ ನೀಡಬೇಕು ಎಂದು ಇಲ್ಲಿನ ಬಸವ ಮಹಾನೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಯುವ ಕ್ರಾಂತಿ ಸಂಘಟನೆಯ ಜಿಲ್ಲಾ ಮಟ್ಟದ ಯುವ ಸಮ್ಮೇಳನ ಮತ್ತು 13 ನೇಯ ವಾರ್ಷಿಕೋತ್ಸವದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ ಮಾತನಾಡುತ್ತಾ ನುಡಿದರು. ಯುವ ಕ್ರಾಂತಿ ಸಂಘಟನೆಯ 13 ನೇಯ ವರ್ಷದಿಂದ ಒಳ್ಳೆಯ ರೀತಿಯ ಕಾರ್ಯ ನಿರ್ವಹಿಸುತ್ತಿದ್ದು ಮುಂದೆಯೂ ಸಹ ಒಳ್ಳೆಯ ರೀತಿಯಾಗಿ ಕಾರ್ಯನಿರ್ವಾಹಿಸಿ ಕೂಂಡು ಸಾಗಲಿ ಎಂದರು. ಯುವ ಕ್ರಾಂತಿ ಸಂಘಟನೆಯ ರಾಜ್ಯ ಅಧ್ಯಕ್ಷರಾದ ಗುಂಡುರಡ್ಡಿ ಆರ್ ಕಮಲಾಪುರೆ ಯವರು ಹುಮನಾಬಾದ ಹಾಗೂ ಬಸವಕಲ್ಯಾಣ ತಾಲ್ಲೂಕಿನಲ್ಲಿ ಅನೇಕ ವರ್ಷಗಳಿಂದ ವಿವಿಧ ಸಮಾಜದ ಕಾರ್ಯ ಮಾಡುತ್ತಾ ಬಂದಿದ್ದಾರೆ, ಸಂಘಟನೆ ಜೊತೆಯಲ್ಲಿ ಗುಣಮಟ್ಟದ ಶಿಕ್ಷಣ ಪಡೆದುಕೊಳ್ಳಬೇಕು, ಏಕಂದರೆ ಶಿಕ್ಷಣ ಅಸ್ತ್ರ ಎಲ್ಲಕ್ಕಿಂತ ದೊಡ್ಡದು, ಡಾ.ಬಿ.ಆರ್.ಅಂಬೇಡ್ಕರ್ ರವರು ಹೇಳಿದತೆ, ಶಿಕ್ಷಣ, ಸಂಘಟನೆ, ಹೋರಾಟ ಇವತ್ತಿನ ಇವೇಲ್ಲ ಕೂಡ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು. ಗುಂಡುರೆಡ್ಡಯವರು ಯುವ ಕ್ರಾಂತಿ ಸಂಘಟನೆ ಪ್ರಾರಂಭ ಮಾಡಿದ್ದಾರೆ. ನಾನು ಕೂಡ ಸುಮಾರು ವರ್ಷಗಳಿಂದ ನೋಡುತ್ತಿದ್ದೇನೆ, ಗುಂಡುರೆಡ್ಡಿಯವರಿಗೆ ಸಂಪೂರ್ಣವಾಗಿ ಬೆಂಬಲ ನೀಡುತ್ತೇನೆ ಎಂದರು. ಮಾಜಿ ಶಾಸಕರಾದ ಮಲ್ಲಿಕಾರ್ಜುನ ಎಸ್ ಖೂಬಾ ಮಾತನಾಡಿದರು. ಯುವ ಕ್ರಾಂತಿ ಸಂಘಟನೆಯ ರಾಜ್ಯ ಅಧ್ಯಕ್ಷರಾದ ಗುಂಡುರಡ್ಡಿ ಆರ್ ಕಮಲಾಪುರೆ ಅಧ್ಯಕ್ಷತೆ ವಹಿಸಿ ಮಾತನಾಡಿ ಸಂಘಟನೆಯನ್ನು ರಾಜ್ಯಾದ್ಯಂತ ಬೆಳೆಯಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿದರು. ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ ನಾರಾಯಣರಾವ ಮಾತನಾಡಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯ ಗುಂಡುರಡ್ಡಿ ಮಾಡುತ್ತಿದ್ದಾರೆ ಎಂದರು. ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷೆ ಲತಾ ಹಾರಕೂಡೆ. ಯುವ ಮುಖಂಡರಾದ ಶಿವರಾಜ್ ಶೆಟ್ಟಕಾರ್ ಮಾತನಾಡಿದರು. ಸಾನಿಧ್ಯ ವಹಿಸಿದ್ದ ಜೈ ಭಾರತ ಮಾತ ಸೇವಾ ಸಮಿತಿಯ ಸಂಸ್ಥಾಪಕ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಡಾ. ಹವಾ ಮಲ್ಲಿನಾಥ ಮಹಾರಾಜರು ಸಮ್ಮೇಳನ ಉದ್ಘಾಟಿಸಿದರು. ಶಹಾಪುರ ತಾಲ್ಲೂಕಿನ ಪೂಜ್ಯಶ್ರೀ ಮಲ್ಲಿಕಾರ್ಜುನ ಮುತ್ಯಾ. ಮುಚಳಂಬದ ಪೂಜ್ಯ ಶ್ರೀ ಪ್ರಣವಾನಂದ ಮಹಾಸ್ವಾಮಿಗಳು. ಅಣದೂರಿನ ಪೂಜ್ಯ ಶ್ರೀ ಜ್ಞಾನ ಸಾಗರ ಭಂತೆ. ಬೀರಲಿಂಗೇಶ್ವರ ಪೂಜ್ಯ ಶ್ರೀ ಬೀರಪ್ಪ ಮುತ್ಯಾ ಸಾನಿಧ್ಯ ವಹಿಸಿದ್ದರು. ಮಾಜಿ ಎಂಎಲ್ಸಿ ಅರವಿಂದಕುಮಾರ ಅರಳಿ. ಜಿ ಪಂ ಮಾಜಿ ಸದಸ್ಯರಾದ ಸುಧೀರ್ ಕಾಡದಿ. ಆನಂದ ಪಾಟೀಲ್. ತಾಪಂ ಮಾಜಿ ಅಧ್ಯಕ್ಷರಾದ ಸಿದ್ರಾಮ ಕಾಮಣ್ಣ. ಸಂಘಟನೆಯ ರಾಜ್ಯ ಉಪಾಧ್ಯಕ್ಷ ಮಲಿಕನಾತ ಮಡಿಗೆ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜಕುಮಾರ್ ಹಳ್ಳಿಖೇಡ. ಪ್ರಮುಖರಾದ ಪ್ರದೀಪ ವಾತಡೆ. ದೀಪಕ ಗಾಯಕವಾಡ. ಸಂಜುಕುಮಾರ ಸುಗರೆ. ಸಿದಾಣಟಿಜಜಜಿಟಿಜಜಮಗುದಗೆ. ಶಿವಕುಮಾರ ಬಿರಾದಾರ. ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ. ಲೋಕೇಶ್ ಮೊಳಕೆರೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಸಂಘಟನೆಯ ಜಿಲ್ಲಾ ಅಧ್ಯಕ್ಷ ಸಂಗಮೇಶ ಭೂರೆ. ಸ್ವಾಗತ ಸಮಿತಿಸಿ ಪ್ರಸ್ತಾವಿಕ ಮಾತನಾಡಿದರು. ತಾಲ್ಲೂಕು ಅಧ್ಯಕ್ಷ ನವನಾಥ ಮೇತ್ರೆ ವಂದಿಸಿದರು. ದೀಪಕ ಠಮಕೆ ನಿರೂಪಿಸಿದರು. ಕಾರ್ಯಕ್ರಮಕ್ಕೆ ಮುನ್ನ ನಗರದ ಕೋಟೆಯಿಂದ ಪ್ರಮುಖ ರಸ್ತೆಗಳ ಮೂಲಕ ಕಾರ್ಯಕ್ರಮದ ವೇದಿಕೆಯವರಿಗೆ ಬೈಕ್ ರ್ಯಾಲಿ ನಡೆಯಿತು.

ಯುವ ಕ್ರಾಂತಿ ಸಂಘಟನೆಯ
13ನೇ ವಾರ್ಷಿಕೋತ್ಸವ ಹಾಗೂ ಜಿಲ್ಲಾ ಯುವ ಸಮ್ಮೇಳನ ಕಾರ್ಯಕ್ರಮದಲ್ಲಿ ಸಂಘಟನೆಯ ಅಧ್ಯಕ್ಷರು ಉಪಾಧ್ಯಕ್ಷರು ಸದಸ್ಯರು, ಪದಾಧಿಕಾರಿಗಳು, ಗಣ್ಯರು, ಎಲ್ಲ ಊರಿನ ಗ್ರಾಮಸ್ಥರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದಕ್ಕೆ ಆನಂತ–ಆನಂತ ಕೃತಜ್ಞತೆಗಳು



–ಸಚ್ಚಿನ್ ಎಸ್. ಜೋಗಿರೆ ಮೋಳಕೇರಾ

## ಪ್ರಧಾನಮಂತ್ರಿ ಆವಾಸ್ ಯೋಜನೆಯ ಮನೆಗಾಗಿ ಫಲಾನುಭವಿಗಳ ಆಯ್ಕೆ ಸಂಬಂಧ ಆಗಸ್ಟ್ 20ರಂದು ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 18–: ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ಜಾರಿಯಲ್ಲಿರುವ ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪ ಘಟಕ ಎ.ಹೆಚ್.ಪಿ ಆರ್ಡಿ 2,419 ಮನೆಗಳಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ ಪಂಗಡ ವರ್ಗದ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಲುವಾಗಿ ಆಗಸ್ಟ್ 20ರ ಬೆಳಿಗ್ಗೆ 11.30ಕ್ಕೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಪರ ಸಂಘ–ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಭಾಗವಹಿಸಿ ಯಶಸ್ವಿಗೊಳಿಸಿಬೇಕೆಂದು ಕೋರಲಾಗಿದೆ.

ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪಘಟಕ ಎ.ಹೆಚ್.ಪಿ ರಡಿ ಒಟ್ಟು 2,419 ಮನೆಗಳ ನಿರ್ಮಾಣ ಜಾರಿಯಲ್ಲಿ ಇರುತ್ತದೆ. ಇದರಲ್ಲಿ ನಗರದ ಬಡ ವಸತಿ ರಹಿತರಿಗೆ ಸೌಲಭ್ಯ ಕಲ್ಪಿಸುವ ಅತಿ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಪ.ಜಾತಿ ವರ್ಗದವರಿಗೆ 951 ಹಾಗೂ ಪ.ಪಂಗಡ ವರ್ಗದವರಿಗೆ 1,053 ಮನೆಗಳು ಒಟ್ಟು 2,400 ಗುರಿ ನಿಗದಿಯಾಗಿದೆ.

ಆದರೆ ಈ ವರ್ಗದಿಂದ ಇದುವರೆಗೂ ನೀರಿಕ್ಷತ ಮಟ್ಟದಲ್ಲಿ ಅರ್ಜಿಗಳು ಬಂದಿರುವುದಿಲ್ಲ. ಈ ಇಂತಹ ಮಹತ್ವಪೂರ್ಣ ಯೋಜನೆಯಡಿ ಬಡ ವಸತಿ ರಹಿತ ಪ.ಜಾತಿ ಪ.ಪಂಗಡದ ವರ್ಗದವರಿಗೆ ವಸತಿ ಸೌಲಭ್ಯ ಕಲ್ಪಿಸುವುದು ಅಗತ್ಯವಾಗಿದೆ. ಈ ವರ್ಗದವರಿಂದ ಅರ್ಜಿ ಪಡೆದು ಯೋಜನೆ ಯಶಸ್ವಿಗೊಳಿಸುವುದು ಅಗತ್ಯವಾಗಿದ್ದು, ಈ ಕುರಿತು ಚರ್ಚಿಸಲು ಪಾಲಿಕೆಯ ಆಯಕ್ತರ ಅಧ್ಯಕ್ಷತೆಯಲ್ಲಿ ಸಭೆ ಹಮ್ಮಿಕೊಳ್ಳಲಾಗಿದೆ. ಈ ಸಭೆಗೆ ನಗರದ ಪರಿಶಿಷ್ಟ

ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಪರ ಸಂಘ ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಾಗುವಂತೆ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

### CITATION
### IN THE COURT OFH The PRL. CIVIL JUDGE AND JMFC HUMNABAD AT HUMNABAD
### CRL.MISC. NO. 1194/2025

1. Praveen So Devappa Age 31 Ro Village Hankuni Tq:Humnabad Advocate-Pushpa Halmadgi
2. R2 Vishwa So Devappa Age 25 Ro Village Hankuni Tq:Humnabad
3. R3 Banneppa So Devappa Age 39 Ro Village Hankuni Tq:Humnabad
4. R4 Ratnamma Do Devappa Age 54 Ro Village Hankuni Tq:Humnabad
5. R5 Giremma Do Devappa Wo Basawaraj Age 54 Ro Village Hankuni Tq:Humnabad
6. R6 Sharnamma Do Devappa Age 37 Ro Ro Village Hankuni Tq:Humnabad
7. R7 Aruthi Do Devappa Age 31 Ro Village Hankuni Tq:Humnabad
8. R8 Jyothi Do Devappa Age 35 Ro Village Hankuni Tq:Humnabad
9. R9 Reeta Wo Praveen Age 22 Ro Village Hankuni Tq:Humnabad
10. R10 Sadmalla Wo Banneppa Age 25 Ro Village Hankuni Tq:Humnabad

PETTITIONERS:-

RESPONDENT:-

The Registrar Of Birth and Death –through Tahasildar, Humnabad.

Whereas the above named petitioners have filed the petition under section 13 (3) of Birth and Death Registration Act 1969 praying this Honourable court to issue Death certificate of their father Late Devappa S/o Banneppa Who died on 03-11-2021 at Hankuni Tq:Humnabad. The petitioners claiming the death certificate of deceased Devappa for transfer of property and other official purpose and home record.

Therefore, it is hereby proclaimed that if any persons have got any objection in this regard he/they may approach to honourable court on 28/08/2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this 4th day of August-2025.

//By order of the court//
Chief Ministerial Officer,
Prl. Civil Judge and JMFC Court,
Humnabad

# ಪತ್ರಕರ್ತ ದೇವಿಂದ್ರಪ್ಪ ಕಪನೂರಗೆ ಪಿತೃವಿಯೋಗ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.18:ಹಿರಿಯ ಪತ್ರಕರ್ತರಾದ ದೇವೇಂದ್ರಪ್ಪ ಕಪನೂರಅವರತಂದೆಹಣಮಂತಪ್ಪ ತಂದೆ ಶರಣಪ್ಪ ಕಪನೂರ (ದೇಗಾಂವ) ರವರುಅ.18 ರಂದು ನಿಧನರಾಗಿದ್ದಾರೆ.



ಮೃತರ ಅಂತ್ಯಕ್ರಿಯೆ ಅ.19 ರಂದು ಮಧ್ಯಾನ 1 ಗಂಟೆಗೆ ಕಪನೂರರುದ್ರಭೂಮಿಯಲ್ಲಿ ನಡೆಯಲಿದೆಎಂದುಕುಟುಂಬದ ಮೂಲಗಳು ತಿಳಿಸಿವೆ.ಮೃತರು ಪುತ್ರರಾದ ರಾಜಕುಮಾರ ಕಪನೂರ, ರವಿಕುಮಾರ ಕಪನೂರ,

ಪ್ರಕಾಶ್ ಕಪನೂರ ಪಾಲಿಕೆ ಸದಸ್ಯರು, ಶರಣಬಸವ ಕಪನೂರ ಹಾಗೂ ಅಶೋಕ್ ಕಪನೂರ ರ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

# ಬೀದರ ಜಿಲ್ಲೆಯ ನಗರ ಹಾಗೂ ಗ್ರಾಮೀಣ ವಿಭಾಗದ ಹಲವು ಸಮಸ್ಯೆಗಳ ಕುರಿತು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 18 : ಈ ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆಸಂಭಂಧಿಸಿದಂತೆ ಬೀದರ ನಗರ ಹಾಗೂ ಗ್ರಾಮೀಣ ವಿಭಾಗದ ಹಲವು ವ್ಯಾಪಾರೋದ್ಯಮಿಗಳ ಹಾಗೂ ಕೃಷಿ ರೈತರ ಸಮಸ್ಯೆಗಳು ಈ ಕೆಳಕಂಡಂತೆ ಇವೆ ಇವುಗಳನ್ನು ಬಗೆ ಹರಿಸಲು ವಿನಂತಿ.

ರಾಜ್ಯದಲ್ಲಿ ಇದೀಗ ವಿದ್ಯುತ್ ದರ ಮುಂದಿನ ಮೂರು ವರ್ಷಗಳಿಗೆ ಅಂದರೆ ಹಣಕಾಸು ವರ್ಷ 2025–26 ರೂ. 36 ಪೈಸೆ ಪ್ರತಿ ಯುನಿಟಿಗೆ,2026–27ಕ್ಕೆರೂ. 35 ಪೈಸೆ ಪ್ರತಿ ಯುನಿಟಿಗೆ, 2027–28ಕ್ಕೆ ರೂ. 34 ಪೈಸೆ ಪ್ರತಿ ಯುನಿಟಿಗೆ ಹೆಚ್ಚಳ ಮಾಡಿರುವ ಆದೇಶವನ್ನು ಪುನರ್ ಪರಿಶೀಲಿಸುವುದು.

ವಿದ್ಯುತ್ ಏರಿಳಿತ ತಡೆಗಟ್ಟಿ, ಸತತವಿದ್ಯುತ್ಪೂರೈಕೆಯಾಗಬೇಕು ಹಾಗೂ ಇಲಾಖೆ ಜನರಿಗೆ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಬೇಕು.

ವಿದ್ಯುತ್ ಗ್ರೀಡ್‌ಗಳಲ್ಲಿ ಅಂದರೆ ವಿದ್ಯುತ್ ಜಾಲ ಅಥವಾ ವಿದ್ಯುತ್ ವ್ಯವಸ್ಥೆ ಮತ್ತು ವಿದ್ಯುತ್ ಉತ್ಪಾದನಾ ಘಟಕಗಳುಪ್ರಸರಣಮಾರ್ಗಗಳು ಮತ್ತು ವಿತರಣಾ ಜಾಲಗಳ ಸುಧಾರಣೆ ಮಾಡಿ ಈ ಗ್ರೀಡ್ ಕೇಂದ್ರಗಳಲ್ಲಿರುವ ಹಳೆ ಮಾದರಿಯ ವಿದ್ಯುತ್ ಉಪಕರಣಗಳನ್ನು ಬದಲಿಸಿ ಆಧುನಿಕ ಉಪಕರಣಗಳನ್ನು ಬಳಸಿ ವಿದ್ಯುತ್ ಪ್ರಸರಣದ ಗುಣಮಟ್ಟ ಸುಧಾರಿಸಬೇಕು.

ಸಾರ್ವಜನಿಕರ, ವಾಣಿಜ್ಯ ಬಳಕೆದಾರರ ಹಾಗೂ ಕೈಗಾರಿಕೋದ್ಯಮಿಗಳ ವಿದ್ಯುತ್ ಬಿಲಗಳಲ್ಲಿ "ನಿಗದಿತ ಶುಲ್ಕವು" (ಈಥಜಜ ಆಜರಿಥಣ) ರೂ. 125 ಇದ್ದಿದ್ದು, ರೂ. 200ಕ್ಕೆ ಹೆಚ್ಚಳ ಮಾಡಿದ್ದೀರಿ ಅಂದರೆ1) 50 ಕೆ.ವಿಗೆ ರೂ. 116 ಇದ್ದಿದ್ದು, ರೂ. 210ಕ್ಕೆ ಹೆಚ್ಚಿಸಿದೆ. 2) 50 ಕೆ.ವಿ. ವಾಣಿಜ್ಯ ಬಳಕೆಗೆ ಇರುವದನ್ನು ರೂ. 300ಕ್ಕೆ ಹೆಚ್ಚಿಸಿದ್ದೀರಿ. ಕಾರಣ ಹಳೆಯ ದರವನ್ನೆ ಮರುಪರಿಶೀಲಿಸಿ ನಿಗದಿಮಾಡುವುದು.

ವಿದ್ಯುತ್ ಪ್ರಸರಣ ಜಾಲ ಕೇಂದ್ರಗಳಲ್ಲಿ ನುರಿತ ತರಬೇತಿ ಪಡೆದ ಅನುಭವಿ ಸಿಬ್ಬಂಧಿಗಳ ನೇಮಿಸಿ ಗುಣಮಟ್ಟವನ್ನು ಕಾಪಾಡಲು ಮತ್ತು ನಿರ್ವಹಿಸಲು ಕೋರಿದೆ.

ರೈತರಿಗೆ ಹಾಗು ವಾಣಿಜ್ಯ ಬಳಕೆದಾರರಿಗೆ ಅವರ ಭಾಗದಲ್ಲಿ ಟ್ರಾನ್ಸಫಾರ್ಮರಗಳು ಸುಟ್ಟಾಗ ಬಹು ಬೇಗನೇ ಬದಲಾಯಿಸಿ ಹೊಸ ಟ್ರಾನ್ಸಫಾರ್ಮರಗಳು ಅಳವಡಿಸಬೇಕು. ಆದರೆ 15 ದಿನಗಳಿಂದ 30 ದಿನಗಳ ವರೆಗೆ ಅಥವಾ ಇದಕ್ಕಿಂತ ಹೆಚ್ಚಿನ ವಿಳಂಬ ಮಾಡುತ್ತಿರುವುದು ಕಂಡುಬರುತ್ತಿದೆ.

ಬೀದರ ನಗರ ಹಾಗೂ ಜಿಲ್ಲೆಯಾದ್ಯಂತ ಈ ಹಿಂದೇ ಅಳವಡಿಸಿರುವ 100 ಕೆ.ವಿ.ಎ. ಇದ್ದ ಸ್ಥಳದಲ್ಲಿ 250 ಕೆ.ವಿ.ಎ ಟ್ರಾನ್ಸಫಾರ್ಮರಗಳನ್ನು ಇದೇ ಅನುಪಾತದಲ್ಲಿ ಹೆಚ್ಚಿನ ಸಾಮರ್ಥ್ಯದ

ಟ್ರಾನ್ಸಫಾರ್ಮರಗಳನ್ನು ಕಾಲಕಾಲಕ್ಕೆ ಪರಿಶೀಲಿಸಿ ಸಾಮರ್ಥ್ಯಕ್ಕೆ ಅನುಗುಣವಾಗಿ ಬದಲಾಯಿಸಿ ನಿರ್ವಹಿಸಲು ಕ್ರಮ ಕೈಕೊಳ್ಳಬೇಕು.

ಪವರ್ ಟ್ರೀಪ್ ಆಗದಂತೆ ವ್ಯವಸ್ಥಿತ ನಿರ್ವಹಣೆಯಾಗಬೇಕು, ಇದರಿಂದ ವಿದ್ಯುತ್ ಹಾಗೂ ವಿದ್ಯುನ್ಮಾನ ಉಪಕರಣಗಳು ಸುಟ್ಟು ಸಾರ್ವಜನಿಕರಿಗೆ ಹಾನಿ ಉಂಟಾಗುತ್ತಿದೆ.

ವಿದ್ಯುತ್ ಸಂಪರ್ಕ ಕಲ್ಪಿಸಲು ವಿಳಂಬ ಧೋರಣೆ ಯಾಕೇ ? ಐಪಿ2, ಐಪಿ3, ಐಪಿ5 ಅಡಿಯಲ್ಲಿ ಸಂಪರ್ಕ ಅರ್ಜಿಗಳ ಸಂಖ್ಯೆ ಎಷ್ಟು ? ವಿಳಂಬ ಮಾಡದೇ ಸಂಪರ್ಕ ಕಲ್ಪಿಸಬೇಕು.

ಕೇಂದ್ರಮತ್ತುರಾಜ್ಯಸರ್ಕಾರದ ವಿವಿಧ ಇಲಾಖೆಗಳಿಂದ ಹಾಗೂ ನಿಗಮ ಮಂಡಳಿಗಳ ಸಹಸ್ರಾರು ಕೋಟಿಗಳಷ್ಟು ಬಾಕಿ ಉಳಿಸಿಕೊಂಡಿರುವ ವಿದ್ಯುತ್ ಬಾಕಿ ಮೊತ್ತವನ್ನು ತುರ್ತು ಕ್ರಮಗಳ ಮೂಲಕ ವಸೂಲಿ ಮಾಡಿ ಸಂಪನ್ಮೂಲ ಸಮತೋಲನಗೊಳಿಸಿ ಹಣಕಾಸು ವ್ಯವಸ್ಥೆಯನ್ನು ಸರಿದೂಗಿಸಿಕೊಳ್ಳಬೇಕೆಹೊರತು ದರ ಹೆಚ್ಚಳದ ಬರೆ ಗ್ರಾಹಕರ ಮೇಲೆ ಹೋರಿಸುವುದು ತಪ್ಪಿಸಬೇಕು.

ಈ ಮೇಲಿನ ಸಮಸ್ಯೆಗಳು ಹಾಗೂ ಬೇಡಿಕೆಗಳು ಬೀದರ ವಾಣಿಜ್ಯಮತ್ತುಕೈಗಾರಿಕೆ ಸಂಸ್ಥೆ ಬೀದರ ಸಾರ್ವಜನಿಕರು,ರೈತರು ಹಾಗೂ ವ್ಯಾಪಾರೋದ್ಯಮಿಗಳ ಪರವಾಗಿ ಸಹಾನುಭೂತಿಯಿಂದ ಪರಿಶೀಲಿಸಿ ಬಗೆಹರಿಸಬೇಕಾಗಿ ಮನವಿ ಮಾಡಿದ್ದಾರೆ.

# ರಾಜ್ಯಮಟ್ಟದ ಬಸವಣ್ಣ ಪಾತ್ರಧಾರಿ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 18: ನಗರದಲ್ಲಿ ಸೆಪ್ಟೆಂಬರ್ 3 ರಂದು ನಡೆಯಲಿರುವ ಬಸವ ಸಂಸ್ಕೃತಿ ಅಭಿಯಾನದ ನಿಮಿತ್ತ ಬೀದರ್ ಬಸವ ಸಂಸ್ಕೃತಿ ಅಭಿಯಾನ ಸಮಿತಿಯು ಬಸವಣ್ಣನವರ ಪಾತ್ರಧಾರಿಗಳ ರಾಜ್ಯಮಟ್ಟದ ಸ್ಪರ್ಧೆ ಹಮ್ಮಿಕೊಂಡಿದೆ.

ಸ್ಪರ್ಧೆಯ ವಿಜೇತರಿಗೆ ರೂ. 30 ಸಾವಿರ ಪ್ರಥಮ, ರೂ. 20 ಸಾವಿರ ದ್ವಿತೀಯ ಹಾಗೂ ರೂ. 10 ಸಾವಿರ ತೃತೀಯ ಬಹುಮಾನ ಕೊಡಲಾಗುವುದು ಎಂದು ಬೀದರ್ ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ.

ಬಸವಣ್ಣನವರನ್ನು ಹೋಲುವಂತಹ ದೇಹ ಹಾಗೂ ಸೌಂದರ್ಯ ಹೊಂದಿದ ಆಸಕ್ತರು ಬಸವಣ್ಣನವರ ಪ್ರಧಾನಮಂತ್ರಿಯ ಪೋಷಾಕು, ಕಿರೀಟ, ಖಡ್ಗ, ಕುದುರೆಯೊಂದಿಗೆ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದ್ದಾರೆ.

ಅಭಿಯಾನ ಅಂಗವಾಗಿ ಸೆ. 3 ರಂದು ಸಂಜೆ 4ಕ್ಕೆ ನಗರದ ಬಸವೇಶ್ವರ ವೃತ್ತದಿಂದ ಬಿ.ವಿ. ಭೂಮರಡ್ಡಿ ಕಾಲೇಜು ವರೆಗೆ ಭವ್ಯ ಮೆರವಣಿಗೆ ಜರುಗಲಿದೆ. ಸ್ಪರ್ಧಾಳುಗಳು ಈ ಮೆರವಣಿಗೆಯಲ್ಲಿ ಭಾಗವಹಿಸಬೇಕಾಗಲಿದೆ ಎಂದು ತಿಳಿಸಿದ್ದಾರೆ.

ಮೆರವಣಿಗೆಯು ಬಿ.ವಿ. ಭೂಮರಡ್ಡಿ ಕಾಲೇಜು ತಲುಪಿದ ನಂತರ ಅಲ್ಲಿ ಬಹಿರಂಗ ಸಭೆ ಜರುಗಲಿದೆ. ಸಭೆಯಲ್ಲಿ ಸಮಿತಿಯ ನಿರ್ಣಾಯಕರ ತಂಡ ಆಯ್ಕೆಗೊಳಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ, ಸ್ಮರಣಿಕೆ ಹಾಗೂ ನಗದು ಬಹುಮಾನ ವಿತರಿಸಲಾಗುವುದು ಎಂದು ಹೇಳಿದ್ದಾರೆ.

ಹೆಸರು ನೋಂದಾಯಿಸಿದವರಿಗೆ ಮಾತ್ರ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಅವಕಾಶ ಇದೆ. ಆಸಕ್ತರು ಆಗಸ್ಟ್ 28 ರ ಒಳಗೆ ಹೆಸರು ನೋಂದಾಯಿಸಬಹುದಾಗಿದೆ. ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9449274994 (ರಾಜೇಂದ್ರ ಜೊನ್ನಿಕೇರಿ)ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಕಾಂಗ್ರೆಸ್‌ಗೆ ನೇಮಕ : ಜಾನಸನ್ ಘೋಡೆಗೆ ಸನ್ಮಾನ

ಬೀದರ. ಆ. 18 : ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಜಂಟಿ ಸಂಯೋಜಕರಾಗಿ ನೇಮಕಗೊಂಡ ಜಾನಸನ್ ಘೋಡೆ ಅವರನ್ನು ನೌಬಾದನ ಸದ್ಗುರು ಯಲ್ಲಾಲಿಂಗೇಶ್ವರ ಪುಣ್ಯಾಶ್ರಮದಲ್ಲಿ ಶ್ರಾವಣ ನಿಮಿತ್ತ ಭಾನುವಾರ



ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಮುಗಳಖೋಡ–ಜಿಡಗಾ ಮಠದ ಡಾ. ಮುರುಘರಾಜೇಂದ್ರ ಸ್ವಾಮೀಜಿ ಅವರು ಶಾಲು ಹೊದಿಸಿ ಸತ್ಕರಿಸಿದರು. ಗಣ್ಯರು, ಮಠದ ಭಕ್ತರು ಇದ್ದರು.

# ಶಿರೂರಿನಲ್ಲಿ ಸಂಭ್ರಮದ ರಾಮಲಿಂಗೇಶ್ವರ ರಥೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.18–ತಾಲೂಕಿನ ಶಿರೂರಪಟ್ಟಣದಲ್ಲಿ ಸೋಮವಾರ ಶ್ರಾವಣ ಕೊನೆಯ ದಿನದಂದು ರಾಮಲಿಂಗೇಶ್ವರ ದೇವರ ರಥೋತ್ಸವ ಸಂಭ್ರಮದಿಂದ ಜರುಗಿತು. ಬೆಳಿಗ್ಗೆಯಿಂದಲೇ ದೇವಸ್ಥಾನದಲ್ಲಿ ಜಾತ್ರೆಯ ಸಂಭ್ರಮ ಆರಂಭವಾಗಿ ಸಾಯಂಕಾಲ 6 ಗಂಟೆಗೆ ರಥೋತ್ಸವ ಸಡಗರದಿಂದ ನಡೆಯಿತು. ಪಟ್ಟಣದ ಸಾವಿರಾರು ಜನ ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡು ಜಯಘೋಷದೊಂದಿಗೆ ರಥ–ಕ್ಕೆ ಹೂವು, ಹಣ್ಣು, ಉತ್ತತ್ತಿ, ಬಾಳೆಹಣ್ಣು ಎಸೆದು ಹರಕೆ ತೀರಿಸಿದರು. ಬೆಳಿಗ್ಗೆ ದೇವಸ್ಥಾನದಲ್ಲಿ ರಾಮಲಿಂಗೇಶ್ವರ ದೇವರಿಗೆ



ರುದ್ರಾಭಿಷೇಕ, ನಾನಾ ಪೂಜಾ ಕೈಂಕರ್ಯಗಳು ನಡೆದವು. ಮುಂಜಾನೆ 8 ಗಂಟೆಯಿಂದ 12 ರವರೆಗೆ ರಥದ ಕಳಸದ ಮೆರವಣಿಗೆ ಜರುಗಿತು. ನಂತರ ಸಾಯಂಕಾಲ 4 ಗಂಟೆಗೆ ನಂದಿ ಧ್ವಜಗಳ ಮೆರವಣಿಗೆ ನಡೆದು ರಥೋತ್ಸವ ಜರುಗಿ–ತು. ಆ.19 ರಂದು ಜಾತ್ರೆಯ ಅಂಗವಾಗಿ ಮಧ್ಯಾಹ್ನ 3–30 ಗಂಟೆಗೆ ಜಂಗೀ ಕುಸ್ತಿಗಳನ್ನು ಆಯೋಜಿಸಲಾಗಿದೆ.

# ಹಾರಕೂಡ ಶ್ರೀಗಳ ನಿರ್ಧಾರಕ್ಕೆ ಭಾತಂಬಾ ಶ್ರೀಗಳ ಸ್ವಾಗತ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.18:ದಸರಾದರ್ಬಾರ್ ಸಮಾರಂಭದ ದೂರ ಸರಿಯುವುದಾಗಿ ಹೇಳಿರುವ ಹಾರಕೂಡ ಹಿರೇಮಠ ಸಂಸ್ಥಾನ ಮಠದ ಡಾ.ಚನ್ನವೀರ ಶಿವಾಚಾರ್ಯರ ನಿರ್ಧಾರದಿಂದ ಬಸವ ಭಕ್ತರಿಗೆ ಸಂತಸ ತರಿಸಿದೆ ಎಂದು ಭಾತಂಬ್ರಾ ನಿರಂಜನ ಸಂಸ್ಥಾನ ಮಠದ ಜಗದ್ಗುರು ಶಿವಯೋಗೀಶ್ವರ ಮಹಾಸ್ವಾಮೀಜಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಬಸವಕಲ್ಯಾಣದಲ್ಲಿ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನಡೆಸಲು ಉದ್ದೇಶಿಸಿರುವ ವಾರ್ಷಿಕ ದಸರಾ ದರ್ಬಾರ್ ಸಮಾರಂಭದಲ್ಲಿ ಭಕ್ತರ ಹೆಗಲ



ಮೇಲೆ ಅಡ್ಡ ಪಲ್ಲಕ್ಕಿ ನಡೆಸುವ ಪಟ್ಟು ಬಿಡದ ಹಿನ್ನೆಲೆಯಲ್ಲಿ ಮಾನವೀಯತೆಯಲ್ಲಿ ನಂಬಿಕೆ ಇಟ್ಟ ಬಸವ ಭಕ್ತರ ಭಾವನೆಗೆ ಧಕ್ಕೆ ಉಂಟು ಮಾಡದಿರಲು ದರ್ಬಾರ್‌ನಿಂದ ಹೊರಗುಳಿಯುವ ತೀರ್ಮಾನ ಕೈಗೊಂಡಿರುವ ಹಾರಕೂಡ ಪೂಜ್ಯರ ನಿರ್ಧಾರವನ್ನು ಸ್ವಾಗತಿಸುವುದಾಗಿ ತಿಳಿಸಿದ್ದಾರೆ.

# ಹಂದಿಕೇರಾ ಶಾಲೆಯಲ್ಲಿ ಶಿಕ್ಷಕರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ


ಕಮಲನಗರ:ಅ.18:ತಾಲೂಕಿನ ಹಂದಿಕೇರಾ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಆರ್.ಎಮ್.ಎಸ್.ಎ ಪ್ರೌಢಶಾಲೆಯಲ್ಲಿ ನಡೆದ 79ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಮಕ್ಕಳ ಶೈಕ್ಷಣಿಕ ಸಾಧನೆಗೆ ಕಾರಣ–ಕರ್ತದ ಶಿಕ್ಷಕರಿಗೆ ಗ್ರಾಮಸ್ಥರಿಂದ ಸನ್ಮಾನ ನಡೆಯಿತು.

ಈ ವೇಳೆ ಮಾತನಾಡಿದ, ಗಣಪತರಾವ ಪಾಟೀಲ ಶಾಲೆ ಅಭಿವೃದ್ಧಿ ಆಗಬೇಕಾದರೆ, ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಅತ್ಯಂತ ಅವಶ್ಯಕವಾಗಿರುತ್ತದೆ. ನಮ್ಮ ಶಾಲೆಯ ಶಿಕ್ಷಕರ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದು, ಅವರಿಗೆ ಗ್ರಾಮಸ್ಥರಿಂದ ಸನ್ಮಾನಿಸಿ ಗೌರವಿಸಿದ್ದೇವೆ ಎಂದು ಹೇಳಿದರು. ಪ್ರತಿ ತರಗತಿಯಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಾಲಾಜಿ ಹನುಮಂತರಾವ ಪಾಟೀಲ ನಗುದು ಬಹುಮಾನ ಕೊಟ್ಟಿ ಪ್ರೋತ್ಸಾಹಿಸಿದರು. ಈ ಸಂದರ್ಭದಲ್ಲಿ ಎಸ.ಡಿ.ಎಂ.ಸಿ ಅಧ್ಯಕ್ಷರಾದ ಉಮಾಕಾಂತ ಬೋಸಲೆ, ಜ್ಞಾನೋಭಾ ಬೋಸಲೆ, ಶರದ ಪಾಟೀಲ, ಶುಭಾಷ್ ಮಹಾರಾಜ, ಭಗವಂತರಾವ ಬಿರಾದರ, ರವಿ ಭೋಸಲೆ, ಅಮೂಲ ಬಿರಾದರ, ಶ್ರೀಧರ ಪಾಟೀಲ, ಮುಖ್ಯಶಿಕ್ಷಕರಗಳಾದ ಆರ್. ಆರ್. ಪಾಟೀಲ, ಮಾಣಿಕ ಹೊಂಡಾಲೆ ಸೇರಿದಂತೆ ಶಾಲೆ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

# ತಂದೆ ತಾಯಿಯ ಸೇವೆ ದೊಡ್ಡ ಸೇವೆ: ಹಾವಗಿಲಿಂಗೇಶ್ವರ ಶಿವಾಚಾರ್ಯ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.18:ಮನೆಯಲ್ಲಿ ತಂದೆ ತಾಯಿಯನ್ನು ನರಳಲು ಬಿಟ್ಟು, ಗುಡಿ ಗೋಪುರಗಳಲ್ಲಿ ಭಕ್ತಿ ಸಲ್ಲಿಸಿದರೆ ದೇವರಿಗೆ ಒಪ್ಪದು ಮೊದಲು ತಂದೆ ತಾಯಿ ಸೇವೆ ದೊಡ್ಡ ಸೇವೆಯಾಗಿರುತ್ತದೆ ಎಂದು ಹೌವಗಿಲಿಂಗೇಶ್ವರ ಶಿವಾಚಾರ್ಯ ನುಡಿದರು.



ತಾಲೂಕಿನ ಡಿಗ್ಗಿ ಗ್ರಾಮದ ಮಡಿವಾಳೇಶ್ವರದೇವಾಲಯದಲ್ಲಿ ಸೋಮವಾರ ನಡೆದ ಶಿವಲಿಂಗ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಹಲಬರ್ಗಾ, ಶಿವಣಿ, ಹೈದರಾಬಾದ ಮಠದ ಪೀಠಾಧಿಪತಿ ಹೌವಗಿಲಿಂಗೇಶ್ವರ ಶಿವಾಚಾರ್ಯ ಮಾತನಾಡಿದರು ಯಾವುದೋ ಮಹಾರಾಜರು ಹೇಳಿದರೆ ಎಂದು ಶಿವಲಿಂಗಕ್ಕೆ ನೀರಿರುವುದು ಬೇಡ, ನಿಮ್ಮ ಮನಸ್ಸು ಭಾವವನ್ನೇ ಸ್ವಚ್ಛ ಮಾಡಿ, ಒಳ್ಳೆ ಆಚಾರ ವಿಚಾರವನ್ನು ರೂಢಿ ಮಾಡಿಕೊಂಡು ಭಕ್ತಿಯನ್ನು ಅರ್ಪಿಸಿ ಅವಾಗ ದೇವರು ಸಂತಸ ಕೊಳ್ಳುತ್ತಾನೆ. ಪವಿತ್ರವಾದ ಶ್ರಾವಣ ಮಾಸದಲ್ಲಿ ಧಾರ್ಮಿಕ ಕಾರ್ಯ ಮತ್ತು ಅನ್ನದಾಸೋಹ ಮಾಡುವುದಕ್ಕೆ ಬಹಳ ಒಳ್ಳೆಯ ಸಮಯ, ಡಿಗ್ಗಿ ಗ್ರಾಮದಲ್ಲಿ ಇಂದು ಶ್ರಾವಣ ಮಾಸದ ಸೋಮವಾರ ಲಿಂಗ ಪ್ರತಿಷ್ಠಾಪನೆಯ ಅಮೃತಗಳಿಗೆ ಪಾಲ್ಗೊಂಡ ನೀವೆಲ್ಲರೂ ಪುಣ್ಯವಂತರು ಎಂದರು. ಗ್ರಾಮದಲ್ಲಿ ನಡೆಯುತ್ತಿರುವ ನಿರಂತರ ಅನ್ನದಾಸ ಕಾರ್ಯಕ್ರಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮ ನಿಮಿತ್ಯ ಮಡಿವಾಳೇಶ್ವರ ರುದ್ರಾಭಿಷೇಕ ಹಾಗೂ ಭಜನೆ ಸಂಘದಿಂದ ಭಜನೆ, ಆರಾಧನೆ ನಡೆಯಿತು. ನಂತರ ಎಲ್ಲರೂ ಶಿವಲಿಂಗಕ್ಕೆ ಹೂ ಪತ್ರಿ ಸಲ್ಲಿಸಿ ನಮಿಸಿದರು. ಈ ಸಂದರ್ಭದಲ್ಲಿ ಮಡಿವಾಳೇಶ್ವರ ದೇವಾಲಯ ಟ್ರಸ್ಟ್ ಅಧ್ಯಕ್ಷ ದೇವೇಂದ್ರ ಪಾಟೀಲ, ಕಾರ್ಯದರ್ಶಿ ಮಡಿವಾಳಪ್ಪ ಮುರ್ಕೆ, ಶಿವಕುಮಾರ ರಾಂಪುರೆ, ಮಡಿವಾಳಪ್ಪಶ್ರೀಗಿರಿ ಚನ್ನಬಸವ ಬಿರಾದಾರ, ಬಾಲಾಜಿ ಬನವಾಸೆ, ಸಂದೀಪ ಪಾಟೀಲ, ವೈಜಿನಾಥ ಕುಂಬಾರಗೆರೆ, ಸೋಮನಾಥ ರಾಂಪುರೆ, ಸಂಗಮನಾಥ ಬಿರಾದಾರ, ಪರಮೇಶ ರಾಂಪುರೆ, ಸಂಗಮೇಶ ಬನವಾಸೆ, ಅಭಿಜಿತ ರಾಂಪುರೆ, ಸೇರಿದಂತೆ ಇನ್ನಿತರು ಇದ್ದರು.

# ಕೃಷ್ಣ ಜನ್ಮಾಷ್ಟಮಿ ನಿಮಿತ್ಯ ರಾಧಾ ಕೃಷ್ಣ ವೇಷಧಾರಿಗಳಿಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.18: ಕೃಷ್ಣ ಜನ್ಮಾಷ್ಟಮಿ ಎಂದರೆ ನಾವು ಶ್ರೀಕೃಷ್ಣನ ಜನ್ಮವನ್ನು ಆಚರಿಸುವ ದಿನ. ಶ್ರೀಕೃಷ್ಣ ಪರಮಾತ್ಮ ಆನಂದ (ಆನಂದ, ಶುದ್ಧ ಸಂತೋಷ) ಎಂದರ್ಥ. ನಾವು ಯಾವುದೇ ಸಂತೋಷವನ್ನು ಆಚರಣೆಯ ಮೂಲಕ ವ್ಯಕ್ತಪಡಿಸುತ್ತೇವೆ. ಆದ್ದರಿಂದ ಜನ್ಮಾಷ್ಟಮಿ ಪರಮಾತ್ಮನ ಜನ್ಮವನ್ನು ಆಚರಿಸುತ್ತೇವೆ ಎಂದು ಮಡಿವಾಳಪ್ಪ ಮುರ್ಕೆ ಹೇಳಿದರು.



ತಾಲೂಕಿನ ಡಿಗ್ಗಿ ಗ್ರಾಮದ ಮಡಿವಾಳೇಶ್ವರದೇವಾಲಯದಲ್ಲಿ ಆಯೋಜನೆ ಮಾಡಿದ ರಾಧಾಕೃಷ್ಣ ವೇಷಭೂಷಣೆ ಸ್ಪರ್ಧೆ ಕಾರ್ಯಕ್ರಮದಲ್ಲಿ ದೇವಾಲಯ ಟ್ರಸ್ಟ್ ನ ಕಾರ್ಯದರ್ಶಿ ಮಡಿವಾಳಪ್ಪ ಮುರ್ಕೆ ಮಾತನಾಡಿದರು.

ಮಕ್ಕಳಿಗೆ ಕೃಷ್ಣವಾಣಿಯಂತೆ ಜೀವನವನ್ನು ಅರ್ಥ ಮಾಡಿಕೊಂಡು ಬಾಳಬೇಕು, ಮಕ್ಕಳಿಗೆ ರಾಧಾಕೃಷ್ಣನ್ ಮಹತ್ವ ತಿಳಿಸುವ ಸಲುವಾಗಿ ಇಂತ ಸಂಸ್ಕೃತಿಕ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಟ್ರಸ್ಟ್ ನ ಸದಸ್ಯರಾದ ಶಿವಕುಮಾರ ರಾಂಪುರೆ, ಸೂರ್ಯಕಾಂತ್ ಬಿರಾದಾರ, ಸಂಗಮನಾಥ ಬಿರಾದಾರ ಮತ್ತು ರಾಧಾ ಕೃಷ್ಣನ ವೇಷದಲ್ಲಿ ಪ್ರಾಚಿ, ಭವಾನಿ, ಸೋನಿ, ಅಭಿಷೇಕ್, ಪಿಯೂಷ, ಎಲ್ಲರ ಗಮನ ಸೆಳೆದರು. ಕಾರ್ಯಕ್ರಮ ದಲ್ಲಿ ಭಜನಾ ಸಂಘದ ಅಣ್ಣನ ಬಳಗ ಅಕ್ಕನ ಬಳಗದವರು ಇದ್ದರು.



ಭಾಲ್ಕಿ: ಪಟ್ಟಣದ ಅಥರ್ವ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ನಿಮಿತ್ಯ ಪುಟಾಣಿ ವಿದ್ಯಾರ್ಥಿಗಳು ರಾಧಾ, ಕೃಷ್ಣ ವೇಷಧಾರಿಗಳಾಗಿ ಸಂಭ್ರಮಿಸಿದರು. ಶಿಕ್ಷಣ ಸಂಸ್ಥೆಯ ಮುಖ್ಯಸ್ಥೆ ಶೃತಿ ಬಸವರಾಜ ಬಿರಾದಾರ ಮತ್ತು ಶಿಕ್ಷಕರು ಇದ್ದರು.

# ಸತತ ಮಳೆಯಿಂದ ನೀರಲ್ಲಿ ಮುಳುಗಿದ ರೈತರ ಬೆಳೆ, ಅಪಾರ ನಷ್ಟ; ತಕ್ಷಣ ಜಂಟಿ ಸಮೀಕ್ಷೆ ಮಾಡಿ ಪರಿಹಾರ ನೀಡಿ: ಭೀಮುನಾಯಕ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸತತ ಮಳೆಯಿಂದಾಗಿ ಜಿಲ್ಲೆಯಾದ್ಯಂತರೈತರುಬೆಳೆದಬೆಳೆಗಳುನೀರಲ್ಲಿ ನಿಂದು ಅಪಾರ ಹಾನಿಯಾಗಿದ್ದು ಕೂಡಲೇ ಸರ್ಕಾರ ರೈತರ ನೆರವಿಗೆ ಧಾವಿಸಬೇಕು. ತ್ವರಿತವಾಗಿ ಜಂಟಿ ಸಮೀಕ್ಷೆ ಮಾಡಿ ಸೂಕ್ತ ಪರಿಹಾರ ವಿತರಣೆಗೆ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಟಿಎನ್ ಭೀಮುನಾಯಕ ಆಗ್ರಹಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಖುದ್ದಾಗಿ ಕೊಯಿಲೂರು ಭಾಗದಲ್ಲಿ ರೈತರ ಹೊಲಗಳಿಗೆ ಭೇಟಿ ಕೊಟ್ಟಾಗ ಬೆಳೆಯೆಲ್ಲ ಮಳೆಯ ನೀರ ಮಡುವಿನಲ್ಲಿ ನಿಂತಿರುವುದು ಕಮಡುಬಂತು.

ಕಳೆದ 4 ದಿನಗಳಿಂದ ಬಿಟ್ಟು ಬಿಡದೇ ಸುರಿಯುತ್ತಿರುವ ಮಳೆಯಿಂದಾಗಿ ರೈತರು ಬೆಳೆದ ಹೆಸರು, ಹತ್ತಿ, ತೊಗರಿ ಸೇರಿದಂತೆ ಇನ್ನಿತರ ಬೆಳೆಗಳು ನೀರಲ್ಲಿ ನಿಂತಿವೆ.

ಸಾಲ ಸೋಲ ಮಾಡಿ ಎಕರೆಗೆ 40-50 ಸಾವಿರ ರೂ. ಖರ್ಚು ಮಾಡಿ ಬೆಳೆ ಬೆಳೆದ ರೈತರಿಗೆ ಪ್ರಕೃತಿಯ ಮುನಿಸಿನಿಂದಾಗಿ ಭೀಕರ ಹಸಿ ಬರದ ಬರೆ ಬಿದ್ದಂತಾಗಿದೆ.

ಬೆಳೆ ಕೈಗೆ ಬಂದಿದ್ದರೆ ಲಕ್ಷಾಂತರ ರೂ. ಕೈಸೇರಿ ರೈತರಿಗೆ ಆಸರೆಯಾಗುತ್ತಿತ್ತು. ಆದರೆ ಇದ್ದಕ್ಕಿದ್ದಂತೆ ಮಳೆರಾಯನ ಮುನಿಸಿನಿಂದಾಗಿ ರೈತರಿಗೆ ಒಂದೋ ಗುಳೆ ಹೋಗಬೇಕು ಇಲ್ಲವೇ ಆತ್ಮಹತ್ಯೆಗೆ ಶರಣಾಗಬೇಕೆಂಬ ಪರಿಸ್ಥಿತಿ ನಿರ್ಮಾಣವಾಗಿದೆ.

ಆದ್ದರಿಂದ ಸರ್ಕಾರ ತಕ್ಷಣ ಎಚ್ಚೆತ್ತು ಯುದ್ಧೋಪಾದಿಯಲ್ಲಿ ಅಣಿಯಾಗಿ ಕಂದಾಯ ಹಾಗು ಕೃಷಿ ಇಲಾಖೆಗಳ ಜಂಟಿ ಸಮಿಕ್ಷೆಯನ್ನು ಕೈಗೊಂಡು ನೊಂದ ರೈತರಿಗೆ ತ್ವರಿತವಾಗಿ ಎಕ-ರೆಗೆ 50 ಸಾವಿರದಂತೆ ಪರಿಹಾರ ವಿತರಿಸಲು ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ.

ಸಂಕಷ್ಟಕ್ಕೆ ಸಿಲುಕಿರುವ ಅನ್ನದಾತನ ನೆರವಿಗೆ ತಕ್ಷಣ ಬರಬೇಕು ಎಂದು ಕನ್ನಡಕ್ಕಾಗಿ ಕೊಡುಗೆ ಕೊಟ್ಟವರಿಗೆ ಅವಮಾನ ಆದರೂ ಸುಮ್ಮನಿರುವುದು ಕನ್ನಡದವರ ಜಾಯಮಾನವಲ್ಲ ಇದಕ್ಕೆ ಸರಿಯಾದ ಪ್ರತಿಕಾರ ಕೈಗೊಂಡು ಹಿರಿಯ ನಟನ ಕೊಡುಗೆಗೆ ಪ್ರತಿಯಾಗಿ ಸಮ್ಮಾನ ನೀಡುವ ಕೆಲಸ ಮಾಡಬೇಕು ಸರ್ಕಾರ ಇಂತಹ ದಿವ್ಯ ನಿರ್ಲಕ್ಷ ತೋರುತ್ತಿರುವುದು ತರವಲ್ಲ ಎಂದು ಮಲ್ಲು ಮಾಳಿಕೇರಿ, ಸಿದ್ದು ನಾಯಕ ಹತ್ತಿಕುಣಿ, ಅಂಬ್ರೇಷ್ ಹತ್ತಿಮನಿ, ಸಂತೋಷ ನಿರ್ಮಲಕರ್, ಪ್ರಕಾಶ ಪಾಟೀಲ್ ಜೈಗ್ರಾಮ್, ಯಮುನಯ್ಯ ಗುತ್ತೇದಾರ, ವಿಶ್ವರಾಜ ಪಾಟೀಲ್, ವೆಂಕಟೇಶ ನಾಯಕ ಬೈರಿಮಡ್ಡಿ, ಅಬ್ದುಲ್ ಚಿಗಾನೂರು, ಶರಣಬಸಪ್ಪ ಯಲ್ಹೇರಿ, ಬಸವರಾಜ ಚೆನ್ನೂರು, ಕಾಶಿನಾಥ ನಾನೇಕ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಹಳೆಪೇಟೆಯ ಜ್ಞಾನಗಂಗೋತ್ರಿ ಶಾಲೆಯಲ್ಲಿ ಸ್ವಾತಂತ್ರ್ಯ ಸಂಭ್ರಮ

# ಗಮನ ಸೆಳೆದ ಪರೇಡ್:




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ನಗರದ ಹಳಪೇಟೆ ಬಡಾವಣೆಯ ಜ್ಞಾನಗಂಗೋತ್ರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮ ಸಡಗರದಿಂದ ಜರುಗಿತು.

ಬೆಳಗ್ಗೆ ಧ್ವಜಾರೋಹಣದ ನಂತರ ಮಕ್ಕಳನ್ನು ಉದ್ದೇಶಿಸಿ ಮೂಡಬಿದರೆಯ ಪ್ರೊಫೆಸರ್ ಡಾ.ರಾಘವೇಂದ್ರ.ಕೆ ಮಾತನಾಡಿ, ಭಾರತ ಇಡೀ ಜಗತ್ತಿನಲ್ಲಿಯೇ ಶ್ರೇಷ್ಠ ದೇಶ ಎನಿಸಿಕೊಂಡಿದ್ದು, ದಿನಗಳಂತೆ ಅಭಿವೃದ್ಧಿ ಪಥದತ್ತ ಸಾಗುತ್ತಿದೆ ದೇಶದ ಗೌರವ ರಕ್ಷಣೆಯಲ್ಲಿ ನಮ್ಮೆಲ್ಲರ ಜವಾಬ್ದಾರಿಯು ಪ್ರಮುಖವಾಗಿದ್ದು, ವಿದ್ಯಾರ್ಥಿ ದೆಸೆಯಲ್ಲಿ ದೇಶಾಭಿಮಾನ ರೂಢಿಸಿಕೊಳ್ಳುವ ಮೂಲಕ ಪ್ರತಿಯೊಬ್ಬರು ಸಾಧನೆಯ ಹಾದಿ ಹಿಡಿದು ಉತ್ತಮ ವ್ಯಕ್ತಿಗಳಾಗಬೇಕು ಎಂದರು.

ಶಾಲೆಯ ಅಧ್ಯಕ್ಷ ಮುರುಳಿಧರಕುಲ್ಕರ್ಣಿ ಧ್ವಜಾರೋಹಣ ನೆರವೇರಿಸಿದರು, ಸಂಸ್ಥೆ ಕಾರ್ಯದರ್ಶಿ ನಾರಾಯಣಾಚಾರ್ಯ ಸಗರ ಪ್ರಾಸ್ತವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಹಿರಿಯರಾದ ಕೋನೇರಾಚಾರ್ಯ ಸಗರ, ಸೇರಿದಂತೆ ಶಾಲೆಯ ಮುಖ್ಯಸ್ಥರು, ಶಿಕ್ಷಕರು ಪಾಲ್ಗೊಂಡಿದ್ದರು. ವಿದ್ಯಾರ್ಥಿಗಳಿಂದ ಆಕರ್ಷಕ ಪರೇಡ್ ಬಡಾವಣೆಯಲ್ಲಿ ಜರುಗಿ-ತು, ನಂತರ ಮಕ್ಕಳು ಸಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ

# ಕಾರ್ಮಿಕರ 5 ನೇ ರಾಜ್ಯ ಸಮ್ಮೇಳನ..! ಕೆ. ಮಹಾಂತೇಶ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯ ಸರ್ಕಾರ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ರಚಿಸಲು ಹಲವು ಹೋರಾಟಗಳನ್ನು ನಡೆಸಬೇಕಾಯಿತು ಇದರಿಂದ ಹಲವಾರು ಕಟ್ಟಡ ಕಾರ್ಮಿಕರು ಅನೇಕ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ.

ಎಂದು ಸೋಮುವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಶಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಮಹಾಂತೇಶ್ ಹೇಳಿದರು. ನಂತರ ಮಾತನಾಡಿದ ಇವರು.

ಇತ್ತೀಚಿಗೆ ದಿನಗಳಲ್ಲಿ ಸರ್ಕಾರವು ಕಾರ್ಮಿಕರಿಗೆ ಸೌಲಭ್ಯದ ಹಣ ನೀಡಲು ಹಲಾವಾರು ತೊಂದರೆಗಳನ್ನು ನೀಡುತ್ತಿದೆ. ಹೈಕೋರ್ಟ್ ಆದೇಶದಂತೆ ಬಾಕಿ ಇರುವ ವಿದ್ಯಾರ್ಥಿ ವೇತನವನ್ನು ನೀಡುತ್ತಿಲ್ಲ.ಆದರೆ ಇದರ ವಿರುದ್ಧ ನಮ್ಮ ಸಂಘಟನೆ ಹೈಕೋರ್ಟ್ ನಲ್ಲಿ ರಿಟ್ ಅರ್ಜಿ ಸಲ್ಲಿಸಿದ ಪರಿಣಾಮ ಕಲ್ಯಾಣ ಮಂಡಳಿ ಇದೀಗ ಶೈಕ್ಷಣಿಕ ಧನಸಹಾಯ ಪರಿಷ್ಕರಿಸಿದ್ದರೂ ಅದು ನ್ಯಾಯ ಸಮ್ಮತವಾಗಿಲ್ಲ, ಹೈಕೋರ್ಟ್ ಆದೇಶದಂತೆ ಎಲ್ಲ ವಿದ್ಯಾರ್ಥಿಗಳಿಗೆ ಸ್ಕಾಲರ್ಶಿಪ್ ಸಿಗಲೇಬೇಕಿದೆ.

ಮತ್ತೊಂದು ಕಡೆ ಮಂಡಳಿಯಲ್ಲಿ ಶೇಖರಣೆಯಾಗಿರುವ ಕಾರ್ಮಿಕರ ಬೆವರಿನ ಹಣವನ್ನು ವಿವಿದ ಕಿಟ್ ಹಂಚಿಕೆ, ಆರೋಗ್ಯ ತಪಾಸಣೆ, ಆಂಬುಲೆನ್ಸ್, ಜಿಲ್ಲೆಗೊಂದು ವಸತಿ ಶಾಲೆಗೆ 930 ಕೋಟಿ ರೂ.. ಕೌಶಲ್ಯ ಕೇಂದ್ರಕ್ಕೆ 868 ಕೋಟಿ ರೂ.. ಕೊಳಚೆ ಬೋರ್ಡ್ ಗೆ 544 ಕೋಟಿ ರೂ., ಮತ್ತಿತರ ಅನವಶ್ಯಕ ಯೋಜನೆಗಳ ಹೆಸರಿನಲ್ಲಿ ಸಚಿವರು ಮತ್ತು ಅಧಿಕಾರಿಗಳು ದುಂದು ವೆಚ್ಚ ಮಾಡುತ್ತಿದ್ದಾರೆ. ಕಾರ್ಮಿಕರ ದುಡಿಮೆಯಿಂದ ಸಂಗ್ರಹವಾಗಿರುವ ಕಲ್ಯಾಣ ಮಂಡಳಿಯ ಹಣವನ್ನು ಫಲಾನುಭವಿಗೆ ನೇರ ನಗದು ವರ್ಗಾವಣೆ ಮೂಲಕ ವಿತರಿಸಬೇಕೆಂದು ಕಾಯ್ದೆಯಲ್ಲಿ ಸ್ಪಷ್ಟವಾಗಿ ಹೀಗಿದ್ದರು. ಕೂಡ ಕೋಟ್ಯಾಂತರ ರೂಪಾಯಿಗಳನ್ನು ವಸ್ತು ರೂಪದಲ್ಲಿ ಖರೀದಿಸುವ ಮೂಲಕ ಅವ್ಯವಹಾರ ನಡೆಸುತ್ತಿದ್ದಾರೆ.

ಕೇಂದ್ರ ಸರ್ಕಾರ ಈಗಿನ ಕಟ್ಟಡ ಕಾರ್ಮಿಕರ ಕಾನೂನು 1996 ಮತ್ತು ಸೆಸ್ ಕಾನೂನು ವಿಲೀನಗೊಳಿಸಿದೆ. ದೇಶದಲ್ಲಿರುವ ಕಾನೂನುಗಳನ್ನು ಮತ್ತು ಸಾಮಾಜಿಕ ಭದ್ರತೆ ಒದಗಿಸುತ್ತಿದ್ದ ಯೋಜನೆಗಳನ್ನು ರದ್ದು ಮಾಡಿ ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡಲು ರಾಜ್ಯ ಸರ್ಕಾರಗಳ ಮೇಲೆ ನಿರಂತರವಾಗಿ ಒತ್ತಡ ಹಾಕುತ್ತಿದೆ. ಈ ಕಾರ್ಮಿಕ ಸಂಹಿತೆಗಳು ಜಾರಿಯಾದರೆ, ಕಾರ್ಮಿಕ ಹಕ್ಕುಗಳಿಂದ ವಂಚಿತರಾಗಿ ಕಾರ್ಮಿಕರು ಗುಲಾಮರ ರೀತಿಯಲ್ಲಿ ದುಡಿಯಬೇಕಾಗುತ್ತದೆ. ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿ ಸೇರಿದಂತೆ ವಿವಿಧ ಕಲ್ಯಾಣ ಮಂಡಳಿಗಳು ರದ್ದಾಗಲಿವೆ. ಇದನ್ನು ವಿರೋಧಿಸಿ ಕೇಂದ್ರ ಕಾರ್ಮಿಕ ಸಂಘಟನೆಗಳು ಕರೆ ನೀಡಿದ್ದ 2025 ಜುಲೈ 9ರ ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ಅಭೂತಪೂರ್ವ ಯಶಸ್ಸನ್ನು ಕಂಡಿದೆ.

ಈ ಹಿನ್ನೆಲೆಯಲ್ಲಿ ಕಟ್ಟಡ ಕಾರ್ಮಿಕರು ಸಂಘಟನೆಗೊಂಡು ಹೋರಾಟ ನಡೆಸುವುದು ಅನಿವಾರ್ಯವಾಗಿದೆ. ರಾಜ್ಯದಲ್ಲಿ ಕಟ್ಟಡ ಕಾರ್ಮಿಕರ ಚಳವಳಿ ಹಾಗೂ ಸಂಘಟನೆಯನ್ನು ಇನ್ನಷ್ಟು ಬಲಿಷ್ಠಗೊಳಿಸುವ ಭಾಗವಾಗಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ 5 ನೇ ರಾಜ್ಯ ಸಮ್ಮೇಳನವನ್ನು ದಾಸೋಹ ಹಾಗೂ ಸೌಹಾರ್ದ ನಗರವಾದ ಕೊಪ್ಪಳ ನಗರದಲ್ಲಿ ಇದೇ ಆಗಸ್ಟ್ 24-25 2025 ರಂದು ಎರಡು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ. ರಾಜ್ಯದ ಎಲ್ಲ ಜಿಲ್ಲೆಗಳಿಂದ 50 ಸಾವಿರ ಸದಸ್ಯರನ್ನು ಪ್ರತಿನಿಧಿಸಿ ಸುಮಾರು 400 ಕಟ್ಟಡ ನಿರ್ಮಾಣವಲಯದ ಕಾರ್ಮಿಕರು ಪ್ರತಿನಿಧಿಗಳಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿದರು. ಈ ಸಂಧರ್ಭದಲ್ಲಿ ಕೊಪ್ಪಳ ಜಿಲ್ಲಾ ಅಧ್ಯಕ್ಷ ಕಾಸಿಂ ಸರ್ದಾರ್, ಪ್ರದಾನ ಕಾರ್ಯದರ್ಶಿ ರಂಗಪ್ಪ ದೊರೆ, ಜಿಲ್ಲಾ ಉಪಾಧ್ಯಕ್ಷ ಇಸ್ಮಾಯಿಲ್, ಚಾಂದ ಪಾಷಾ, ಇನ್ನಿತರರು ಉಪಸ್ಥಿತರಿದ್ದರು.

ಆಗಸ್ಟ್ 24 ರಂದು ಕಟ್ಟಡ ನಿರ್ಮಾಣ ಕಾರ್ಮಿಕರ ಬೃಹತ್ ಮರವಣಿಗೆ ನಡೆಯಲಿದೆ. ಮುಖ್ಯ ಭಾಷಣಕಾರರಾಗಿ ಸಿಐಟಿಯು ರಾಜ್ಯ ಪ್ರಧಾನಕಾರ್ಯದರ್ಶಿ ಮೀನಾಕ್ಷೀಸುಂದರಂ, ಅಫಈಖ ಅಖಿಲ ಭಾರತ ಪ್ರಧಾನ ಕಾರ್ಯದರ್ಶಿ ಯು.ಪಿ ಜೋಸೆಫ್ ರಾಜ್ಯ ಪ್ರಧಾನಕಾರ್ಯದರ್ಶಿ ಕೆ.ಮಹಾಂತೇಶ್ ಮಾತನಾಡಲಿದ್ದಾರೆ..

ಅತಿಥಿಗಳಾಗಿ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಎ.ಶಫೀ, ಸಿಐಟಿಯು ಜಿಲ್ಲಾ ಅಧ್ಯಕ್ಷರಾದ ನಿರುಪಾದಿ ಬೆಣಕಲ್, ಭಾಗವಹಿಸಲಿದ್ದಾರೆ. ಬಹಿರಂಗ ಸಭೆ ಅಧ್ಯಕ್ಷತೆಯನ್ನು ಅಫಈಖ ರಾಜ್ಯ ಅಧ್ಯಕ್ಷರಾದ ಬಾಲಕೃಷ್ಣ ಶೆಟ್ಟಿ ವಹಿಸಲಿದ್ದಾರೆ. ಬಹಿರಂಗ ಸಭೆ ಬಳಿಕ ಂಖಬ(ಮೇಘರಾಜ) ಕಲ್ಯಾಣ ಮಂಟಪದಲ್ಲಿ ಪ್ರತಿನಿಧಿ ಅಧಿವೇಶನ ಆರಂಭಗೊಳ್ಳಲಿದೆ.

# ಸುದರ್ಶನ ಕ್ರಿಯೆ ಜೀವನ ಮುಕ್ತಿ ಹನುಮಂತರೆಡ್ಡಿ ಕರೆ



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ನಗರದ ಬಾಪುಗೌಡ ನಗರದ ಶ್ರೀ ಶ್ರೀ ರವಿಶಂಕರ್ ಗುರೂಜಿ ವಿದ್ಯಾಲಯದಲ್ಲಿ ಆರು ದಿನಗಳ ಯೋಗ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ನಗರದ ಯೋಗ ತರಬೇತಿದಾರರು ಹಲವಾರು ಸ್ಥಳೀಯ ಹಾಗೂ ನಗರ ನಿವಾಸಿಗಳು ಭಾಗವಹಿಸಿದ್ದರು.

ಆರು ದಿನಗಳ ಕಾಲ ತಮ್ಮ ಯೋಗಾಭ್ಯಾಸವನ್ನು ಮುಗಿಸಿ ಜೀವನದಲ್ಲಿ ಎಷ್ಟೊಂದು ಅದ್ಭುತವಾಗಿರುವ ಕ್ರಿಯೆ ನಾವು ನಮ್ಮ ಜೀವನವನ್ನು ಮರೆತು ಬೇಡವಾದ ಆಸೆಗಳನ್ನು ಉಪಯೋಗ ಬರದ ವಿಚಾರಗಳನ್ನು ಮನಸ್ಸಿಗೆ ನೀಡುತ್ತಾ ಮನಸ್ಸು ನೆಮ್ಮದಿ ಹಾಳು ಮಾಡುತ್ತಾ ಬಂದಿದ್ದೇವೆ.

ಅದನ್ನು ಪುನಃ ಜೀವನ ಎಂಬುದು ಹೇಗೆ ಇರಬೇಕು ಎಂಬ ಪಾಠ ಕಲಿಸಿಕೊಟ್ಟ ತರಬೇತಿಯ ಯೋಗ ಮುಖ್ಯ ಗುರಿ ಆಗಿದೆ ಎಂದು ಶಿಲ್ಪ ಆವಂಟಿ ಹೇಳಿದರು.

ಜೀವನದಲ್ಲಿ ಮನುಷ್ಯನಿಗೆ ಏನು ಬೇಕು ಅದನ್ನು ಬಯಸದೆ ಏನು ಬೇಕಾಗಿರುವುದು ಅದು ಬಯಸುತ್ತಾ ಮನುಷ್ಯನ ನೆಮ್ಮದಿ ಹಾಳುಮಾಡುತ್ತದೆ ನಿಮ್ಮ ಜೀವನ ಹಲವಾರು ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು.

ಜೀವನದಲ್ಲಿ ಸುದರ್ಶನ ಕ್ರಿಯೆ ಬಹಳ ಜೀವನದ ಮುಕ್ತಿದಾಯಕ ಯೋಗ ಧ್ಯಾನ ಮಾಡುವುದರಿಂದ ಮನಸ್ಸು ಹಾಗೂ ಮಾನಸಿಕ ನಮ್ಮದು ದುರಲೋಚನೆಗಳಿಂದ ಮುಕ್ತರಾಗುತ್ತಿವೆ. ನಾವು ಇನ್ನೊಬ್ಬರ ಸೇವೆಯ ಮಾಡುವ ಉದ್ದೇಶದಿಂದ ನಾವು ನಮ್ಮ ಜೀವನ ಪಾವನವಾಗುತ್ತದೆ. ನನ್ನ ಜೀವನ ಹೇಗಾಗಿದೆ ಎಂದರೆ ಬರೀ ಮದಾಹ ಮೋಹ ಮತ್ಸರ ವ್ಯಾಮೋಹ ಇವಳಂದ ಕೂಡಿದೆ ಇನ್ನೊಬ್ಬರ ಜೀವನದಲ್ಲಿ ಯಾವುದೇ ಆಶಾಭಾವನೆ ಇಲ್ಲದೆ ಸ್ವಯಂ ಪ್ರೇರಿತವಾಗಿ ಇನ್ನೊಬ್ಬರಿಗೆ ಸಹಾಯ ಮಾಡುವ ಮನಸ್ಥಿತಿ ಇದ್ದರೆ ನಮ್ಮ ಜೀವನ ಪಾವನವಾಗುತ್ತದೆ ಎಂದು ಹನುಮಂತರೆಡ್ಡಿ ಗುರುಗಳು ಹೇಳಿದರು.

ರವಿಶಂಕರ್ ಗುರೂಜಿ ಅವರ ಆಧ್ಯಾತ್ಮಿಕ ಜೀವನದ ನಾವೆಲ್ಲರೂ ಸತ್ಸಂಗ ಮಾಡುವುದರಿಂದ ನಾವ್ ಪುನೀತರಾಗುತ್ತೇವೆ ಎಂದು ಸುದೀರ್ಘವಾಗಿ ತರಬೇತಿದಾರರಿಗೆ ತಿಳಿಹೇಳಿ ಜೀವನದ ಬದಲಾವಣೆ ಬಹು ಮುಖ್ಯಪಾತ್ರವಾಗಿದೆ ನಾವೆಲ್ಲರೂ ನಮ್ಮ ಜೀವನದಲ್ಲಿ ದಿನನಿತ್ಯ ಯೋಗ ಧ್ಯಾನ ಸುದರ್ಶನ ಕ್ರಿಯೆ ಮಾಡುವುದು ಬಹಳ ಅವಶ್ಯಕವಾಗಿದೆ ಹನುಮಂತ್ ರೆಡ್ಡಿ ಸರ್ ಸಹ ವಿಸ್ತಾರವಾಗಿ ಮಾತನಾಡಿದರು.

ಸ್ವಯಂಸೇವಕರಾದ ಭೀಮರಾಯ ಗುಲ್ಯಾಳ್. ದೇವರಾಜ್ ಐಕುರ್. ಹಲವಾರು ನಗರದ ಸ್ವಯಂ ಸೇವಕರು ತಮ್ಮದೇ ಆದ ಸೇವೆ ಸಲ್ಲಿಸಲು ಪ್ರಮುಖ ಪಾತ್ರವಹಿಸಿದರು.

# ಶಹಾಪುರದಲ್ಲಿ ಆ,24ರಂದು ಶೋಷಿತರ ಐಕ್ಯತಾ ಸಮಾವೇಶ. ಐದು ಸಾವಿರ ಜನ ಸೇರುವ ನೀರೀಕ್ಷೆ!



ಶಹಾಪುರ. ಶಹಾಪುರದಲ್ಲಿ ಆಗಷ್ಟ 24ರಂದು ನಗರದ ಆರಬೋಳ ಕಲ್ಯಾಣ ಮಂಟಪದಲ್ಲಿ ಶೋಷಿತ ವರ್ಗಗಳ ಐಕ್ಯತಾ ಸಮಾವೇಶ ನಡೆಯಲ್ಲಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಒಕ್ಕೂಟ, ದಲಿತ ಸಂಘಟನೆಗಳ ಒಕ್ಕಕೂಟ, ಸಮ ಸಮಾಜ ಚಿಂತನಾ ವೇದಿಕೆ, ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ಅರೆ ಸರ್ಕಾರಿ ಪ,ಜಾ,/ಪಂ, ನೌಕರರ ಒಕ್ಕೂಟಗಳು ಜಂಟಿಯಾಗಿ ತಿಳಿಸಿವೆ, ಈ ಕಉರಿತು ಶಹಾಪುರ ಪ್ರವಾಸಿ ಮಂದಿರದಲ್ಲಿ ಪೂರ್ವ ಬಾವಿ ಸಭೆ ನಡೆಸಿದ ಮುಖಂಡರು ಈ ವಿಷಯ ತಿಳಿಸಿದರು, ಬೀತಿ ಪತ್ರಗಳನು ಬಿಡುಗಡೆಗೊಳಿಸಿದ ಅವರು ಅಂದಿನ ಮಾಹಾ ಕಾರ್ಯಕ್ರಮವನ್ನು ಶ್ರೀ ಉರಿಲಿಂಗ ಪೆದ್ದಿ ಮಾಹಾಸಂಸ್ಥಾನದ ಪೂಜ್ಯ ಜ್ಞಾನ ಪ್ರಕಾಶ ಸ್ವಾಮೀಜೀಯವರು ದಿವ್ಯ ಸಾನಿಧ್ಯ ವಹಿಸಿಲಿದ್ದಾರೆ, ಅಲ್ಲದೆ ಈ ಕಆರ್ಯಕ್ರಮವನ್ನು ಕರ್ನಾಟಕ ಸರ್ಕಾರ ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರಾದ ಶರಣಬಸ್ಸಪ್ಪಗೌಡ ದರ್ಶನಾಪುರವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ. ಸಮಾಜ ಕಲ್ಯಾಣ ಮಂತ್ರಿಗಳಾದ ಡಾ,ಎಚ್,ಸಿ, ಮಹಾದೇವಪ್ಪನವರು, ಸಮಾಜಿಕ ಪರಿವತ್ನಕಾರರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡುವದರ ಮುಖಾಂತರ ಲೋಕೋಪಯೋಗಿ ಮಂತ್ರಿಗಳಾದ ಸತೀಶ ಜಾರಕಿಹೊಳಿ ಯವರು ಜ್ಯೋತಿ ಬೆಳಗುವರು, ಕರ್ನಾಟಕ ರಾಜ್ಯದ ಸಂಘಟಿತ ಪಿತಾಮಹ ,ದ,ಸಂ,ಸ, ರಾಜ್ಯಾದ್ಯಕ್ಷರಾದ ಡಾ,ಡಿ,ಜಿಸಾಗರವರು ಅಧ್ಯಕ್ಷತೆ ವಹಿಸುವರು, ಅಲ್ಲದೆ ಮುಖ್ಯ ಅಥಿತಿಗಳಾಗಿ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣಪ್ಪ ಕಮಕನೂರ ಹಾಗೂ ಸುರುಪುರ ಮತ ಕ್ಷೇತ್ರದ ಶಾಸಕರಾದ ರಾಜಾ ವೇಣುಗೋಪಾಲನಾಯಕ,ರವರು ಅನೇಕ ಗಣ್ಯರು ಸಮ ಸಮಾಜದ ಹಿರಿಯವರು, ಪಾಲ್ಗೊಳ್ಳಲಿದ್ದಾರೆ ಎಂದು ಸಮಿತಿಗಳ ಮುಖಂಡರು ಪೂರ್ವಭಾವಿ ಸಭೆಯಲ್ಲಿ ವಿವರಣೆ ನೀಡಿದರು, ಈ ಸಭೆಯಲ್ಲಿ, ಹಿರಿಯರಾದ ತಿಮ್ಮಯ್ಯ ಪುರ್ಲೆ, ಕೆಪಿಸಿಸಿ ರಾಜ್ಯ ಪ್ರಚಾರ ಸಮಿತಿ ಉಪಾಧ್ಯಕ್ಷರಾದ ಡಾ,ಭೀಮಣ್ಣ ಮೇಟಿ, ಜಿ,ಪಂ, ಮಾಜಿ ಉಪಾಧ್ಯಕ್ಷರಾದ ಹನುಮೇಗೌಡ ಮರ್ಕಲ್, ವಾಲ್ಮೀಕಿ ಸಮಾಜದ ಅಧ್ಯಕ್ಷರಾದ ಗೌಡಪ್ಪಗೌಡ ಆಲ್ದಾಳ, ಕೊಲಿ ಸಮಾಜದ ಮುಖಂಡರಾದ ಮಾಹಾದೇವಪ್ಪ ಸಾಲಿಮನಿ, ಹಾಗೂ ಮಲ್ಲಣ್ಣ ಗೌಡಗೇರಿ, ಮೊಹ್ಮದ್ ರಫೀಕ್ ಚೌದ್ರಿ, ಮುಸ್ತಾಫ ದರ್ಬಾನ, ಬಂಜಾರ ಸಮಾಜದ ಮುಖಂಡರಾದ ಚಂದ್ರಶೇಖರ ಜಾದವ್ ವಕೀಲರು, ದೇವಿಂದ್ರಪ್ಪ ವಿಶ್ವಕರ್ಮ, ಬಸವರಾಜ ಬಜಂತ್ರಿ, ಅಯ್ಯಣ ಇನಾಮದಾರ, ಶೇಖರ ದೊರೆ, ಮರೆಪ್ಪ ಪ್ಯಾಟಿ, ಮೌನೇಶ ಹಳಿಸಗರ, ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು,

# ಕರಡಿ ದಾಳಿ ರೈತನಿಗೆ 60 ಸಾವಿರ ರೂಪಾಯಿ ಪರಿಹಾರ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ರಾವಣಕಿ ಗ್ರಾಮದ ಕೃಷಿಕ ಜಮೀನಿನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕರಡಿ ದಾಳಿಗೊಳಗಾಗಿದ್ದು ಗಾಯಾಳುವಿಗೆ 60 ಸಾವಿರ ರೂಪಾಯಿ ಪರಿಹಾರ ನೀಡಲಾಗಿದೆ.

ಕಳೆದ ಜುಲೈ 11ರಂದು ತಾಲೂಕಿನ ರಾವಣಕಿ ಗ್ರಾಮದ ರೈತ ನಾಗಪ್ಪ ಬೆಂಚಳ್ಳಿ ಕೃಷಿ ಜಮೀನಿನಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ವೇಳೆ ಕರಡಿಯೊಂದು ದಾಳಿ ಮಾಡಿದ್ದು, ದಾಳಿಗೊಳಗಾದ ರೈತನಿಗೆ ಇಲಾಖೆಯ ವರದಿ ಪ್ರಕಾರ ಕಾಡು ಪ್ರಾಣಿಗಳಿಂದ ಹಲ್ಲೆಗಳಾದ ವ್ಯಕ್ತಿಗಳ ದಾಖಲೆಗಳ ಹಾಗೂ ವರದಿಗಳ ಆಧಾರದಲ್ಲಿ ಕಾಡುಪ್ರಾಣಿ ದಾಳಿಯಿಂದ ಗಾಯಗೊಂಡ/ಅಂಗವೈಕಲ್ಯ ಹೊಂದಿದ ವ್ಯಕ್ತಿ/ವ್ಯಕ್ತಿಗಳಿಗೆ ಸರ್ಕಾರಿ ಆದೇಶಗಳನ್ವಯ ಗಾಯಗೊಂಡ ಪ್ರತಿ ವ್ಯಕ್ತಿಗಳಿಗೆ ರೂ.60,000/-(ಅರವತ್ತುಸಾವಿರ ರೂಪಾಯಿಗಳು ಮಾತ್ರ)ದ ಮಿತಿಗೊಳಪಟ್ಟ ಎಕ್ಸ್-ಶ್ರೇಟಿಯಾ ಪರಿಹಾರ ಧನವನ್ನು ಮಂಜೂರು ಮಾಡಲು ಈ ಗಾಯಾಳುವಿಗೆ ಅವಕಾಶವಿರುತ್ತದೆ ಆದ್ದರಿಂದ

ಕಾಡುಪ್ರಾಣಿ ದಾಳಿಯಿಂದ ಸಂತ್ರಸ್ತರಿಗೆ ಗಾಯಗೊಂಡಿರುವುದು ಧೃಡಪಟ್ಟಿರುವುದರಿಂದ, ಈ ಸಂತ್ರಸ್ತನಿಗೆ ಕರ್ನಾಟಕ ಸರ್ಕಾರದ ಆದೇಶದನ್ವಯ ಎಕ್ಸ್-ಶ್ರೇಟಿಯಾ ಹಣವನ್ನು ಪಾವತಿಸಲು ಮಾಡಲಾಗಿದೆ.

ಅರಣ್ಯ ಇಲಾಖೆಯ ವತಿಯಿಂದ 60 ಸಾವಿರ ರೂಪಾಯಿಗಳ ಪರಿಹಾರವನ್ನು ನಾಗಪ್ಪ ಬೆಂಚಳ್ಳಿ ಅವರ ಬ್ಯಾಂಕ್ ಖಾತೆಗೆ ವರ್ಗಾಯಿಸುವುದರೊಂದಿಗೆ ಪರಿಹಾರ ನೀಡಲಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಪತ್ರಿಕಾ ಪ್ರಕಟಣೆಗೆ ತಿಳಿಸಿರುತ್ತಾರೆ.

# ಶಹಾಪುರ ಮತ್ತೊಬ್ಬರ ಏಳಿಗೆ ಬಯಸುವವರು ಹಾಲುಮತದವರು : ಪೂಜ್ಯ ಸಿದ್ದರಮಾನಂದಪುರಿ ಸ್ವಾಮಿಗಳು



ಶಹಾಪುರ: ತಮ್ಮತನವನ್ನು ಬದಿಗೊತ್ತಿ ಇತರರ ಜಾತಿ ಧರ್ಮದವರ ಏಳಿಗೆಯನ್ನು ಬಯಸುವವರು ಹಾಲುಮತದವರು ಎಂದು ತಿಂಥಣಿ ಬ್ರಿಜ್ ನ ಕನಕ ಗುರುಪೀಠದ ಪೂಜ್ಯಶ್ರೀ ಸಿದ್ದರಮಾನಂದಪುರಿ ಮಹಾಸ್ವಾಮಿಗಳು ಹೇಳಿದರು. ನಗರದ ಭೀರಲಿಂಗೇಶ್ವರ ಸಭಾಭವನದಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘ, ಕನಕ ನೌಕರರ ಸಂಘ, ಸಂಗೊಳ್ಳಿ ರಾಯಣ್ಣ ಯುವಕ ಸಂಘ ಮತ್ತು ಕನಕ ಗುತ್ತಿಗೆದಾರರ ಸಂಘಗಳ ಸಂಯುಕ್ತಾಶ್ರಯದಲ್ಲಿ ಸ್ವತಂತ್ರ ದಿನಾಚರಣೆ ನಿಮಿತ್ತ ಸಂಗೊಳ್ಳಿ ರಾಯಣ್ಣ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹಾಲುಮತದವರು ಸಹೋದರರ ಸಮಾಜಕ್ಕೆ ಕೆಟ್ಟದ್ದನ್ನು ಬಯಸಿಲ್ಲ. ಹಾಲುಮತದ ಧರ್ಮದ ಪೂಜಾರಿಗಳು ಶ್ರೇಷ್ಠರು ಎನ್ನುವುದನ್ನು ಮರೆಯಬಾರದು. ನಾವು ಇತರರಿಗೆ ಗುಲಾಮರಾಗಿದ್ದೇವೆ. ನಮ್ಮತನ ನಾವು ಕಂಡುಕೊಳ್ಳಬೇಕಿದೆ. ಸ್ವತಂತ್ರ ಪೂರ್ವದಲ್ಲಿ ಕುರುಬ ಸಮಾಜ ಪರಿಶಿಷ್ಟ ಪಂಗಡಕ್ಕೆ ಸೇರಿತ್ತು. ನಮ್ಮ ಹಕ್ಕು ನಾವು ಕೇಳುತ್ತಿದ್ದೇವೆ. ಯಾರೇ ವಿರೋಧಿಸಿದರೂ ನಮ್ಮ ಹೋರಾಟ ನಿಲ್ಲದು. ಹಾಲುಮತದವರು ಯಾವುದೇ ಸುಳ್ಳು ಪ್ರಮಾಣ ಪತ್ರ ತೆಗೆದುಕೊಂಡಿಲ್ಲ ಎಂದರು.

ರಾಜಕೀಯವಾಗಿ ನಾವು ಬೆಳೆಯಬೇಕಿದೆ. ಕೋಳೂರು ಮಲ್ಲಪ್ಪನವರನ್ನು ಹೊರತುಪಡಿಸಿದರೆ ಜಿಲ್ಲೆಯಲ್ಲಿ ಯಾರು ಕೂಡ ಶಾಸಕರಾಗಿಲ್ಲ. ಸಮಾಜ ಎಂದು ಬಂದಾಗ ಜಿಲ್ಲೆಯಲ್ಲಿ ಎಲ್ಲರೂ ಮನಸ್ತಾಪಗಳನ್ನು ಬದಿಗೊತ್ತಿ ಒಂದಾಗಿ ನಿಲ್ಲೋಣ ಎಂದು ಕರೆ ನೀಡಿದರು. ಮುಖ್ಯಮಂತ್ರಿಗಳು ಕುರಿಗಾರರ ಹಿತರಕ್ಷಣೆ ಕಾಯ್ದೆಯನ್ನು ಜಾರಿಗೆ ತರುತ್ತೇನೆ ಎಂದವರು ವಿಳಂಬವಾಗಿದೆ. ಹೋರಾಟ ಅನಿವಾರ್ಯ. ಆಗಸ್ಟ್ 19ರಂದು ಬೆಂಗಳೂರಿನಲ್ಲಿ ಹೋರಾಟಕ್ಕೆ ಕರೆಕೊಟ್ಟರು. ತಾವೆಲ್ಲರೂ ಪಾಲ್ಗೊಳ್ಳಬೇಕೆಂದು ತಿಳಿಸಿದರು.

ಪೂಜ್ಯಶ್ರೀ ಸಿದ್ದರಮಾನಂದಪುರಿ ಸ್ವಾಮಿಗಳು ಮತ್ತು ಅಗತೀರ್ಥ ಮಠದ ಶ್ರೀ ಶಾಂತಮಯ ಸ್ವಾಮಿಗಳ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರಂಭದಲ್ಲಿ ಭೀರಲಿಂಗೇಶ್ವರ ದೇವಸ್ಥಾನಕ್ಕೆ ಮೆಟ್ಟಿಲುಗಳ ನಿರ್ಮಾಣಕ್ಕಾಗಿ ಅಡಿಗಲ್ಲುಪೂಜೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಹತ್ತನೆ ತರಗತಿ, ಪಿಯುಸಿ, ನೂತನ ಸರಕಾರಿ ನೌಕರರು, ನಿವೃತ್ತಿ ಹೊಂದಿದ ನೌಕರರು, ರಾಜಕೀಯ, ಸಾಮಾಜಿಕ, ಪತ್ರಿಕೋದ್ಯಮ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯಲ್ಲಿ ಗುರು ರೇವಣಸಿದ್ದೇಶ್ವರ ಮಠ ಅಗತೀರ್ಥ ಪೀಠಾಧಿಪತಿಗಳಾದ ಶಾಂತಮಯ ಶ್ರೀಗಳು, ಸಿದ್ದರಾಮಯ್ಯ ಗುರುವಿನ, ಬಿಜೆಪಿ ಜಿಲ್ಲಾಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ, ಮಾಜಿ ವಿಧಾನ ಪರಿಷತ್ ಸದಸ್ಯ ಅಮಾತೆಪ್ಪ ಕಂದಕೂರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವುಮಾಂತಪ್ಪ ಸಾಹು, ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷ ಡಾ. ಭೀಮಣ್ಣ ಮೇಟಿ, ಗಿರಿಯಪ್ಪಗೌಡ ಬಾಣತಿಹಾಳ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಯಲ್ಲಪ್ಪ ನರಿ, ಕನಕ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಾಳಿಂಗರಾಯ ಮಂಡಗಳ್ಳಿ, ಕನಕ ನೌಕರರ ಸಂಘದ ಜಿಲ್ಲಾಧ್ಯಕ್ಷ ಅಯ್ಯಣ್ಣ ಇನಾಮ್ದಾರ್, ತಾಲೂಕು ಅಧ್ಯಕ್ಷ ಧರ್ಮಣಗೌಡ ಹುಲ್ಕಲ್, ವೀರನಗೌಡ ಮಲ್ಲಾಬಾದಿ, ಮಲ್ಲಿಕಾರ್ಜುನ ಕಂದುಕೂರ್, ಸಂಗೊಳ್ಳಿ ರಾಯಣ್ಣ ಅಧ್ಯಕ್ಷ ರಾಯಪ್ಪ ಚೆಲುವಾದಿ, ಕುರಿ ಸಾಕಾಣಿಕೆದಾರರ ಮಹಾಮಂಡಳ ನಿರ್ದೇಶಕ ಶಾಂತಗೌಡ ನಾಗನಟಗಿ, ಸಿದ್ದಣ್ಣ ಕನ್ಯಾ ಕೋಳೂರು, ಶರಭಣ್ಣ ರಸ್ತಾಪೂರ, ಬಲಭೀಮ ಮಡ್ನಾಳ್ ಸೇರಿದಂತೆ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕರ್ನಾಟಕ ಪ್ರದೇಶ ಕುರುಬ ಸಂಘದ ಪ್ರಧಾನ ಕಾರ್ಯದರ್ಶಿ ಮತ್ತು ಬಿಜೆಪಿ ಯುವ ಮೋರ್ಚಾ ಗ್ರಾಮಿಣ ಮಂಡಲ ಅಧ್ಯಕ್ಷ ಮಹೇಶ ರಸ್ತಾಪುರ ಸ್ವಾಗತಿಸಿದರು. ಹೊನ್ನಪ್ಪ ಹುಂಡೆಕಲ್ ಪನ್ಯಾಸಕರು ನಿರೂಪಿಸಿದರು.

# ಸೆ.13 ರಂದು ರಾಷ್ಟ್ರೀಯ ಲೋಕ್ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಸೆಪ್ಟೆಂಬರ್ 13 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ,ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು,ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ. ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು.

*ವಿಶೇಷ ಸೂಚನೆ:*

ಪ್ರತಿದಿನ ಎಲ್ಲಾ ನ್ಯಾಯಾಲಯಗಳಲ್ಲಿ ಮೆಗಾ–ಲೋಕ್ ಅದಾಲತ್ ಗೆ ಸಂಬಂಧಿಸಿದಂತೆ ಪೂರ್ವಭಾವಿ ಬೈಠಕ್‌ಗಳು ನಡೆಯುತ್ತಲಿರುತ್ತವೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ದೂ.08392–278077 ಹಾಗೂ ಎನ್‌ಎಲ್‌ಎಸ್‌ಎ ಸಹಾಯವಾಣಿ ಸಂಖ್ಯೆ 15100 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

# ಮುಂಗಾರು ಬೆಳೆ ಸಮೀಕ್ಷೆಯ ಖಾಸಗಿ ನಿವಾಸಿಗಳಿಗಾಗಿ ಆಪ್ ಅಭಿವೃದ್ಧಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಕೃಷಿ ಇಲಾಖೆ ವತಿಯಿಂದ 2025–26ನೇ ಸಾಲಿನ ಮುಂಗಾರು ಹಂಗಾಮಿನ ಖಾಸಗಿ ನಿವಾಸಿಗಳಿಂದ ರೈತರು ಬೆಳೆದ ಬೆಳೆಗಳ ಬಗ್ಗೆ ನಿಖರ ಮಾಹಿತಿಯನ್ನು ಮೊಬೈಲ್ ಆಪ್ ಮೂಲಕ ದಾಖಲಿಸಲು ಇ–ಆಡಳಿತದಿಂದ ಆಪ್ ಅಭಿವೃದ್ಧಿಪಡಿಸಿದ್ದು,ಸೆ.30ರವರೆಗೆ ಬೆಳೆ ಸಮೀಕ್ಷೆ ಅಪ್‌ಲೋಡ್ ಮಾಡಲು ಕೊನೆಯ ದಿನವಾಗಿದೆ.

ಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯದಲ್ಲಿ, ಬೆಳೆ ಕಟಾವು ಪ್ರಯೋಗದಲ್ಲಿ, ಪ್ರಕೃತಿ ವಿಕೋಪ ಸಂದರ್ಭದಲ್ಲಿ, ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾಯೋಜನೆ, ಬೆಂಬಲ ಬೆಲೆ ಯೋಜನೆ, ಆರ್.ಟಿ.ಸಿ.ಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿಯನ್ನು ಉಪಯೋಗಿಸಲಾಗುತ್ತದೆ.

ಖಾಸಗಿ ನಿವಾಸಿಗಳು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇಸ್ಟೋರ್‌ನಿಂದ ಬೆಳೆ ಸಮೀಕ್ಷೆ ಮುಂಗಾರು ಹಂಗಾಮಿನ "ಕ್ರಾಪ್ ಸರ್ವೇ ಖಾರೀಫ್–2025(Crop Survey Kharif-2025) ಆಪ್ ನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ಜಿಲ್ಲೆಯಲ್ಲಿ 3,57,700 ಬೆಳೆ ತಾಕುಗಳಿದ್ದು, ಮೊಬೈಲ್ ಆಪ್ ನಲ್ಲಿ ಜಿಯೋ ರೆಫರೆನ್ಸ್ಡ್ ಅಂಡ್ ಡಿಜಿಟೈಜ್ಡ್ ಬೆಳೆಗ್ರಾಮ ನಕಾಶೆ ಅಳವಡಿಸಲಾಗಿರುವುದರಿಂದ ಆಯಾ ತಾಕಿನ ಗಡಿರೇಖೆಯೊಳಗೆ ಹೋಗಿ ಜಿಪಿಎಸ್ ನಿಖರತೆ ಪಡೆದು ಛಾಯಾಚಿತ್ರದೊಂದಿಗೆ ಬೆಳೆಯ ವಿವರಗಳನ್ನು ಎಲ್ಲಾ ಬೆಳೆಗಳ ವಿವರಗಳನ್ನು ಕಡ್ಡಾಯವಾಗಿ ದಾಖಲು ಮಾಡಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಕ್ಕೆ ಛಾಟಿ ಏಟು ನೀಡುವ ಶಕ್ತಿ ಸಾಹಿತ್ಯ ಪರಿಷತ್ತಿಗೆ ಬೇಕು..! ಡಾ.ಸೋಮಶೇಖರ್



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ರಾಜ್ಯದಲ್ಲಿ ಕನ್ನಡ ಶಾಲೆಗಳನ್ನು ಮುಚ್ಚಿ, ಇಂಗ್ಲೀಷಮಯ ಮಾಡುತ್ತಿರುವ ಸರಕಾರಕ್ಕೆ ಛಾಟಿ ಏಟು ನೀಡುವಂತಹ ಶಕ್ತಿ ಕನ್ನಡ ಸಾಹಿತ್ಯ ಪರಿಷತ್ತಿಗೆ ಬರಬೇಕಾದ ಅವಶ್ಯಕತೆ ಇದೆ. ಕಸಾಪವನ್ನು ಇಂತಹ ಸಂಸ್ಥೆಯಾಗಿಸುವ ದಿಸೆಯಲ್ಲಿ ತಮ್ಮ ಪ್ರಯತ್ನಕ್ಕೆ ನಾಡಿನ ಎಲ್ಲ ಸಾಹಿತಿಗಳ, ಕನ್ನಡಿಗರ ಬೆಂಬಲ, ಹೋರಾಟ ಬೇಕಾಗಿದೆ ಎಂದು ನಿವೃತ್ತ ಐ.ಎ.ಎಸ್ ಅಧಿಕಾರಿ ಹಾಗೂ ಸಾಹಿತಿ ಡಾ: ಸಿ ಸೋಮಶೇಖರ ಅಭಿಪ್ರಾಯಪಟ್ಟಿದ್ದಾರೆ.

ಕೊಪ್ಪಳದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು , ತಾವು ಈ ಬಾರಿ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯ ಅಧ್ಯಕ್ಷ ಸ್ಥಾನದ ಸೇವಾಕಾಂಕ್ಷಿಯಾಗಿದ್ದು, ತಾವು ಅಧಿಕಾರದಲ್ಲಿದ್ದಾಗ ಕನ್ನಡ ಪರ ಸೇವೆ ಮಾಡಿದ್ದು, ಹಲವು ಪುಸ್ತಕಗಳನ್ನು ಪ್ರಕಟಿಸಿದ್ದು ತಮಗೆ ಸರ್ವ ಸಾಹಿತಿಗಳ, ಕನ್ನಡಿಗರ ಬೆಂಬಲದ ಅವಶ್ಯಕತೆ ಎಂದು ಅವರು ಹೇಳಿದರು.

ತಾವು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾಗಿದ್ದಾಗ, ಕನ್ನಡ ಗಡಿ ಪ್ರಾಧಿಕಾರದ ಕಾರ್ಯದರ್ಶಿಯಾಗಿದ್ದಾಗ, ಜಿಲ್ಲಾಧಿಕಾರಿ, ಅಸಿಸ್ಟಂಟ ಕಮೀಷನರ್ ಆಗಿದ್ದಾಗ ಕನ್ನಡ ಪ್ರಜ್ಞೆ, ಜಾಗೃತಿಗೆ ವಿಶೇಷ ಆದ್ಯತೆ ನೀಡಿದ್ದು, ಹಲವು ಜಿಲ್ಲಾ ಸಾಹಿತ್ಯ ಪರಿಷತ್ತಿಗಳಿಗೆ ಕನ್ನಡ ಭವನಕ್ಕಾಗಿ ನಿವೇಶನ, ಹಣಕಾಸು ಒದಗಿಸಿದ್ದಲ್ಲದೇ, ಗಡಿನಾಡ ಚೇತನ ಪ್ರಶಸ್ತಿ ಸ್ಥಾಪಿಸಿ ಅನೇಕ ಮಹನೀಯರಿಗೆ ಪ್ರಶಸ್ತಿ ನೀಡಿದ್ದಾಗಿ ತಿಳಿಸಿದರು, ಗಡಿನಾಡಲ್ಲಿ ಕನ್ನಡ ಪ್ರೇಮ, ಕನ್ನಡ ಶಾಲೆ ಉಳಿಸಲು ವಿಶೇಷ ಪ್ರಯತ್ನ ಮಾಡಿದ್ದಾಗಿ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ನ್ನು ಕನ್ನಡ ಸರಸ್ವತಿಯ ದೇಗುಲ ಎಂಬ ಭಾವನೆ ಬರುವಂತೆ, ಕನ್ನಡಿಗರೆಲ್ಲರೂ ಈ ಸಂಸ್ಥೆಯ ಸದಸ್ಯರಾಗುವಂತೆ ಜನಾಂದೋಲನ ರೂಪಿಸುವ ಗುರಿ, ವಯಕ್ತಿಕ ಬದ್ಧತೆ ಹೊಂದಿದ್ದು, ರಾಜ್ಯದ ಎಲ್ಲ ತಾಲ್ಲೂಕು, ಜಿಲ್ಲೆಗಳಲ್ಲಿ ಸಾಹಿತ್ಯ ಪರಿಷತ್ ಗಳಿಗೆ ಕಟ್ಟಡ, ಕನ್ನಡ ಭವನ ಒದಗಿಸುವುದು, ಹಿರಿಯ, ಉದಯೋನ್ಮುಖ ಸಾಹಿತಿಗಳ ಪುಸ್ತಕ ಪ್ರಕಟಣೆ, ಕಸಾಪ ಗ್ರಂಥಾಲಯದ ಡಿಜಿಟಲೀಕರಣ, ದಾಸ, ವಚನ, ಬಂಡಾಯ, ದಲಿತ, ಮಹಿಳಾ ಸಾಹಿತ್ಯಕ್ಕೆ ಆದ್ಯತೆ ಒದಗಿಸುವುದು, ಸಾಹಿತ್ಯ ಸಮ್ಮೇಳನಗಳು ಹೆಚ್ಚು ಸಾಹಿತ್ಯಮಯವಾಗಿಸುವುದು, ಮಕ್ಕಳಲ್ಲಿ ಕನ್ನಡ ಪ್ರೇಮ ಮೂಡಿಸಲು ಮಕ್ಕಳ ಪ್ರತಿಭೋತ್ಸವ ಇನ್ನಿತರ ಕನಸುಗಳನ್ನು, ಗುರಿಯನ್ನು ಹೊಂದಿರುವುದಾಗಿ ಅವರು ತಿಳಿಸಿದರು .

ತಾವು ಚಿಂತನ ಚಿಲುಮೆ, ಚುಂತನಕಿರಣ, ಅರಿವೇ ಗುರು, ಮಾತೆಂಬುದು ಜ್ಯೋತಿರ್ಲಿಂಗಮುಂತಾದ ಕೃತಿ ಸಹ ರಚಿಸಿದ್ದು, ದೇಶ ವಿದೇಶಗಳಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನಗಳಲ್ಲಿ ಭಾಗಿಯಾಗಿದ್ದು, ಉಪನ್ಯಾಸ ನೀಡಿದ್ದು, ಬಾಲ್ಯದಿಂದಲೇ ಅಪಾರ ಕನ್ನಡ ಪ್ರೇಮ ಹೊಂದಿರುವ ಕಾರಣ ಕನ್ನಕ್ಕಾಗಿ ವಿಶೇಷ ಸೇವೆ ಸಲ್ಲಿಸಿದ್ದು, ಈ ಬಾರಿಯ ರಾಜ್ಯ ಕನ್ನಡ ಸಾಹಿತ್ಯ ಪರಿಷತ್ ಚುನಾವಣೆಯಲ್ಲಿ ಸಕಲ ಕನ್ನಡಿಗರು, ಸಾಹಿತಿಗಳು ಮತ ನೀಡಿ, ಸೇವೆ ಸಲ್ಲಿಸುವ ಅವಕಾಶ ಒದಗಿಸಬೇಕೆಂದು ಅವರು ವಿನಂತಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಸಾಹಿತಿಗಳಾದ ಡಿ.ವಿ.ಬಡಿಗೇರ, ಶಿವಕುಮಾರ, ಬಸವರಾಜ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎ.ವಿ.ಕಣವಿ, ಬಿ.ಬಿ.ಪಾಟೀಲ ಇನ್ನಿತರರು ಉಪಸ್ಥಿತರಿದ್ದರು.

# ಇಟಗಿ: ಆ.20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಕಂಪ್ಲಿ ಜೆಸ್ಕಾಂ ವ್ಯಾಪ್ತಿಯ ಇಟಗಿ 110/11ಕೆವಿ ಉಪ ಕೇಂದ್ರದಲ್ಲಿ ವಿದ್ಯುತ್ ನಿರ್ವಹಣೆ ಕಾರ್ಯ ಕೈಗೊಳುತ್ತಿರುವುದರಿಂದ ಆ.20 ರಂದು ಬೆಳಿಗ್ಗೆ 09 ರಿಂದ ಸಂಜೆ 04 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:

ಇಟಗಿ ಉಪ ಕೇಂದ್ರದ ವ್ಯಾಪ್ತಿಗೆ ಬರುವ ಸಣಾಪುರ, ಬೆಳಗೋಡುಹಾಳು, ನಂ.2 ಮುದ್ದಾಪುರ, ಅರಳಹಳ್ಳಿ, ಮಾರೆಮ್ಮ ಕ್ಯಾಂಪ್, ಬಸವೇಶ್ವರ ಕ್ಯಾಂಪ್, ಇಟಗಿ ಗ್ರಾಮಗಳ ನಿರಂತರ ಜ್ಯೋತಿ.

ಎಫ್4–ಅರಳಹಳ್ಳಿ ಮತ್ತು ಎಫ್3–ಎಚ್‌ಟಿ ಮಾರ್ಗಗಳು, ನೀರಾವರಿ ವಿದ್ಯುತ್ ಮಾರ್ಗಗಳಿಗೆ ಸಂಬಂಧಿಸಿದಂತೆ ಎಫ್1–ಇಟಗಿ, ಎಫ್2–ತುಂಗಭದ್ರ, ಎಫ್7–ಮಣ್ಣೂರು ಕ್ಯಾಂಪ್ ಮತ್ತು ಎಫ್11–ಮುದ್ದಾಪುರ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಇಟಗಿ ಉಪಕೇಂದ್ರಕ್ಕೆ ಸಂಬಂಧಿಸಿದ ಪಂಪ್ ಸೆಟ್(ಐಪಿ ಸೆಟ್) ಮೇಲೆ ತಿಳಿಸಿದ ಮಾರ್ಗಗಳಲ್ಲಿ ಅಂ–ದು ಬೆಳಿಗ್ಗೆ 4 ರಿಂದ 9ವರೆಗೆ (5ತಾಸು) ಉಳಿದ 2 ತಾಸು ಸಂಜೆ ವಿದ್ಯುತ್ ಸರಬರಾಜು ಮಾಡಲಾಗುವುದು.

ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕಾರ್ಯ ಪೂರ್ವಾನುಮತಿ ಇಲ್ಲದೇ ಮಾಡಬಾರದು. ಒಂದು ವೇಳೆ ವಿದ್ಯುತ್ ಅಪಘಾತ ಸಂಭವಿಸಿದ್ದಲ್ಲಿ ಜೆಸ್ಕಾಂ ಕಂಪನಿ ಜವಾಬ್ದಾರಿಯಾಗಿರುವುದಿಲ್ಲ. ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.19 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 33/11 ಕೆವಿ ರ‍್ರಗುಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ದುರಸ್ತಿ ಕಾರ್ಯ ಕೈಗೊಳ್ಳುತ್ತಿರುವುದರಿಂದ ಆ.19 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಎಫ್–01ಡಿ.ಎನ್.ಹಳ್ಳಿ ಎನ್‌ಜೆವೈ ಮಾರ್ಗದ ಡಿ.ಎನ್.ಹಳ್ಳಿ,ಜಿ.ಎನ್.ಹಳ್ಳಿ, ತಂಬ್ರಳ್ಳಿ, ಜಾಲಿಚಿಂತೆ ಗ್ರಾಮಗಳು. ಎಫ್–02 ಜಿ.ಎನ್.ಹಳ್ಳಿ ಐಪಿ ಮಾರ್ಗದ ಜಿ.ಎನ್.ಹಳ್ಳಿ, ತಂಬ್ರಳ್ಳಿ, ಕೃಷಿ ಪ್ರದೇಶಗಳು. ಎಫ್–03 ಹಳೆ ರ‍್ರಗುಡಿ, ಹೊಸ ರ‍್ರಗುಡಿ, ಸಿಂಧುವಾಳ, ಬೆಣಕಲ್ಲು ಹಾಗೂ ಕೃಷಿ ಪ್ರದೇಶಗಳು. ಎಫ್–05 ಸಿಂಧುವಾಳ ಸೋಲಾರ್ ಮಾರ್ಗದ ಹಳೆ ರ‍್ರಗುಡಿ, ಹೊಸ ರ‍್ರಗುಡಿ, ಸಿಂಧುವಾಳ, ಬೆಣಕಲ್ಲು, ಗೋನಾಳ್, ಜಾಲಿಹಾಳ್, ಬೊಮ್ಮನಹಾಳ್ ಗ್ರಾಮಗಳು ಮತ್ತು ಎಫ್–06 ಜಾಲಿಹಾಳ್ ಐಪಿ ಮಾರ್ಗದ ಎಂ.ಗೋನಾಳ್, ಜಾಲಿಹಾಳ್, ಬೊಮ್ಮನಹಾಳ್ ಹಾಗೂ ಕೃಷಿ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಮೀಟರ್ ಬದಲಾವಣೆ; ಸಾರ್ವಜನಿಕರು ಸಹಕರಿಸಿ

ಬಳ್ಳಾರಿ,ಆ.18–ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗ ವ್ಯಾಪ್ತಿಯಲ್ಲಿ ಬರುವ ಎಲ್ಲ ವಿದ್ಯುತ್ ಗ್ರಾಹಕರಿಗೆ ಈಗಾಗಲೇ ಇರುವ ಹಳೆಯ ಕಬ್ಬಿಣದ ಮೀಟರ್‌ಗಳನ್ನು ಕಂಪ್ಲಿ ಜೆಸ್ಕಾಂ ಕಚೇರಿಯಿಂದ ಹೊಸ ಮೀಟರ್‌ಗೆ ಬದಲಾವಣೆ ಮಾಡಲಾಗುವುದು, ಇದಕ್ಕೆ ಹಣ ಪಾವತಿ ಮಾಡುವ ಅವಶ್ಯಕತೆ ಇರುವುದಿಲ್ಲ. ಹಾಗಾಗಿ ವಿದ್ಯುತ್ ಗ್ರಾಹಕರು ಮೀಟರ್‌ಗಳನ್ನು ಬದಲಿಸಲು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.19 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯ 110/11ಕೆ.ವಿ ಸೋಮಸಮುದ್ರ ವಿದ್ಯುತ್ ಉಪ–ಕೇಂದ್ರದಲ್ಲಿ ವಿದ್ಯುತ್ ಲೈನ್ ಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಆ.19 ರಂದು ಬೆಳಿಗ್ಗೆ 09 ರಿಂದ 05 ಗಂಟೆಯವರೆಗೆ ಎಫ್–6 ವ್ಯಾಪ್ತಿಯ ನಗರದ ತಾಳೂರು ರಸ್ತೆ, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರಸ್ತೆ, ರಾಮ ನಗರ, ಅವಂಬಾವಿ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.17 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಬಳ್ಳಾರಿ ತಾಲ್ಲೂಕಿನ ಕುಡತಿನಿ ಗ್ರಾಮದ ಕೆಐಎಡಿಬಿ ಕೈಗಾರಿಕಾ ಪ್ರದೇಶ ಹಂತ–2 ರಲ್ಲಿ ವಾರ್ಷಿಕ 2,16,000 ಟನ್ ಉತ್ಪಾದನಾ ಸಾಮರ್ಥ್ಯದೊಂದಿಗೆ "ಕೋಲ್ಡ್ ರೋಲ್ಡ್ ಗ್ರೇನ್ ಓರಿಯೆಂಟೆಡ್" ಸ್ಟೀಲ್ ಪ್ಲಾಂಟ್ ಘಟಕವನ್ನು ಒಟ್ಟು 200 ಎಕರೆ (80.9 ಹೆಕ್ಟೇರ್) ಕೆಐಎಡಿಬಿ ಕೈಗಾರಿಕಾ ಪ್ರದೇಶದಲ್ಲಿ ಎರಡು ಹಂತಗಳಲ್ಲಿ ಸ್ಥಾಪನೆ ಮಾಡಲು ಮೆ.ಜೆ.ಎಸ್.ಡಬ್ಲ್ಯೂ –ಜೆ.ಎಫ್.ಇ ಎಲೆಕ್ಟ್ರಿಕಲ್ ಸ್ಟೀಲ್ ಪ್ರೈವೇಟ್ ಲಿಮಿಟೆಡ್ ಇವರು ಯೋಜನಾ ಪ್ರಸ್ತಾವನೆ ಸಲ್ಲಿಸಿದ್ದು, ಇದರ ಸಂಬಂಧ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಸೆ.17 ರಂದು ಬೆಳಿಗ್ಗೆ 11 ಗಂಟೆಗೆ ಕುಡತಿನಿ ಗ್ರಾಮದ ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶ ಹಂತ–2ರ ಯೋಜನಾ ಪ್ರದೇಶದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲಾಗುವುದು.

ಇದಕ್ಕೆ ಸಂಬಂಧಿಸಿದಂತೆ ಉದ್ದೇಶಿತ ಯೋಜನೆಯ ಕಾರ್ಯ ನಿರ್ವಾಹಕ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಸಂಬಂಧಿಸಿದ ಕಚೇರಿಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಸಾರಾಂಶ ಪ್ರತಿಯನ್ನು ಪ್ರದರ್ಶಿಸಲಾಗಿದೆ.

ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಟಗಿ: ಆ.20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಕಂಪ್ಲಿ ಜೆಸ್ಕಾಂ ವ್ಯಾಪ್ತಿಯ ಇಟಗಿ 110/11ಕೆವಿ ಉಪ ಕೇಂದ್ರದಲ್ಲಿ ವಿದ್ಯುತ್ ನಿರ್ವಹಣೆ ಕಾರ್ಯ ಕೈಗೊಳುತ್ತಿರುವುದರಿಂದ ಆ.20 ರಂದು ಬೆಳಿಗ್ಗೆ 09 ರಿಂದ ಸಂಜೆ 04 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

***ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**ಇಟಗಿ ಉಪ ಕೇಂದ್ರದ ವ್ಯಾಪ್ತಿಗೆ ಬರುವ ಸಣಾಪುರ, ಬೆಳಗೋಡುಹಾಳು, ನಂ.2 ಮುದ್ದಾಪುರ, ಅರಳಹಳ್ಳಿ, ಮಾರೆಮ್ಮ ಕ್ಯಾಂಪ್, ಬಸವೇಶ್ವರ ಕ್ಯಾಂಪ್, ಇಟಗಿ ಗ್ರಾಮಗಳ ನಿರಂತರ ಜ್ಯೋತಿ. ಎಫ್4–ಅರಳಹಳ್ಳಿ ಮತ್ತು ಎಫ್3–ಎಚ್‌ಟಿ ಮಾರ್ಗಗಳು, ನೀರಾವರಿ ವಿದ್ಯುತ್ ಮಾರ್ಗಗಳಿಗೆ ಸಂಬಂಧಿಸಿದಂತೆ ಎಫ್1–ಇಟಗಿ, ಎಫ್2–ತುಂಗಭದ್ರ, ಎಫ್7–ಮಣ್ಣೂರು ಕ್ಯಾಂಪ್ ಮತ್ತು ಎಫ್11–ಮುದ್ದಾಪುರ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಇಟಗಿ ಉಪಕೇಂದ್ರಕ್ಕೆ ಸಂಬಂಧಿಸಿದ ಪಂಪ್ ಸೆಟ್(ಐಪಿ ಸೆಟ್) ಮೇಲೆ ತಿಳಿಸಿದ ಮಾರ್ಗಗಳಲ್ಲಿ ಅಂ–ದು ಬೆಳಿಗ್ಗೆ 4 ರಿಂದ 9ವರೆಗೆ (5ತಾಸು) ಉಳಿದ 2 ತಾಸು ಸಂಜೆ ವಿದ್ಯುತ್ ಸರಬರಾಜು ಮಾಡಲಾಗುವುದು. ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕಾರ್ಯ ಪೂರ್ವಾನುಮತಿ ಇಲ್ಲದೇ ಮಾಡಬಾರದು. ಒಂದು ವೇಳೆ ವಿದ್ಯುತ್ ಅಪಘಾತ ಸಂಭವಿಸಿದ್ದಲ್ಲಿ ಜೆಸ್ಕಾಂ ಕಂಪನಿ ಜವಾಬ್ದಾರಿಯಾಗಿರುವುದಿಲ್ಲ. ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.20 ರಂದು ಬಳ್ಳಾರಿ ಗ್ರಾಮೀಣದಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.18–ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110/11ಕೆ.ವಿ ದಕ್ಷಿಣ ಉಪ–ಕೇಂದ್ರದ ವಿದ್ಯುತ್ ವಿತರಣಾ ಕೇಂದ್ರದ ಎನ್‌ಹೆಚ್‌ಎಐ ವತಿಯಿಂದ ರಸ್ತೆ ಅಗಲೀಕರಣ ಕಾರ್ಯ ತುರ್ತಾಗಿ ಕೈಗೊಳ್ಳುತ್ತಿರುವುದರಿಂದ ಆ.20 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ 11 ಕೆ.ವಿ ಮಾರ್ಗಗಳಾದ ಎಫ್–43 ಸಿದ್ದಾಪುರ ರಸ್ತೆ ಕೈಗಾರಿಕಾ ಮಾರ್ಗದ ಟಪಾಲ್ ಸ್ಟೀಲ್, ಸಿದ್ದಾಪುರ ರಸ್ತೆ, ಕೈಗಾರಿಕಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮೋಹನಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೊಲೀಸ್ ಸರ್ಪಗವಾಲಿನಲ್ಲಿ ದೇವಸ್ಥಾನದ ಭೂಮಿ ಸರ್ವೇ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕುಕನೂರು ಪಟ್ಟಣದ ಪ್ರಸಿದ್ಧ, ಐತಿಹಾಸಿಕ ದೇವಾಲಯ ಗುದ್ನೆಶ್ವರ ಮಠದ ಶ್ರೀ ರುದ್ರಮುನೀಶ್ವರ ದೇವಾಲಯದ ಜಮೀನು ಸರ್ವೇ ಕಾರ್ಯವನ್ನು ಜಿಲ್ಲಾ ಉಪ ವಿಭಾಗಾಧಕಾರಿ ಮಹೇಶ್ ಮಾಲಗಿತ್ತಿ ಅವರ ಸಮ್ಮುಖದಲ್ಲಿ ಸೋಮವಾರ ಮಾಡಲಾಯಿತು.

ಪೊಲೀಸ್ ಸರ್ಪಗಾವಲಿನೊಂದಿಗೆ ಗುದ್ನೇಶ್ವರ ದೇವಸ್ಥಾನ ಟ್ರಸ್ಟ್ ಗೆ ಸೇರಿದ ಭೂಮಿಯ ಸರ್ವೇ ಕಾರ್ಯವನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿಂದ ವೀಕ್ಷಣೆ ಜೊತೆಗೆ ಸರ್ವೇ ಕಾರ್ಯ ನಡೆಯಿತು.

ಸದರಿ ದೇವಸ್ಥಾನಕ್ಕೆ ಸೇರಿದ ಜಮೀನಿಗೆ ಸಂಬಂಧ ಪಟ್ಟಂತೆ ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದ್ದರೂ ಕೂಡ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಪೊಲೀಸ್ ಸರ್ಪ ಗವಾಲಿನಲ್ಲಿ ಸರ್ವೇ ಕಾರ್ಯ ನಡೆಸಿದ್ದು ಸ್ಥಳೀಯ ನಿವಾಸಿಗಳಲ್ಲಿ ಮತ್ತು ದೇವಸ್ಥಾನದ ಸೇವಕರಲ್ಲಿ ಆತಂಕ ಉಂಟು ಮಾಡಿದೆ. ದೇವಸ್ಥಾನದ ಜಾಗದಲ್ಲಿ ಸ್ಥಳೀಯ ಆಡಳಿತ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ನೂತನ ನ್ಯಾಯಾಲಯ ಮತ್ತು ಸರ್ಕಾರಿ ಕಚೇರಿ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸ್ಥಳೀಯ ಗ್ರಾಮಸ್ಥರು ಮತ್ತು ಸರ್ಕಾರಿ ಅಧಿಕಾರಿಗಳ ನಡುವೆ ಈಗಾಗಲೇ ತಿಕ್ಕಾಟ ನಡೆದು ಪ್ರಕರಣ ಕೋರ್ಟ್ ಮೆಟ್ಟಿಲೇರಿದೆ. ನ್ಯಾಯಾಲಯ ಈ ಪ್ರಕಾರಕ್ಕೆ ಸಂಬಂಧಿಸಿದಂತೆ ತಡೆಯಾಜ್ಞೆ ನೀಡಿದೆ ಎನ್ನಲಾಗಿದೆ. ಆದರೂ ಕೂಡ ಅಧಿಕಾರಿಗಳು ಮತ್ತೊಮ್ಮೆ ಸರ್ವೇ ಕಾರ್ಯಕ್ಕೆ ಮುಂದಾಗಿದ್ದು ದೇವಸ್ಥಾನದ ಭೂಮಿ ಕೈತಪ್ಪುವ ಭೀತಿಯಲ್ಲಿ ಸೇವಕರು ಮತ್ತು ಗ್ರಾಮಸ್ಥರು ಆತಂಕಕ್ಕೆ ಕಾರಣವಾಗಿದೆ.

ಈ ಸಂದರ್ಭದಲ್ಲಿ ಪ್ರತಿಕ್ರಿಯೆ ನೀಡಿದ ಉಪ ವಿಭಾಗಾಧಿಕಾರಿ ಮಹೇಶ್ ಮಾಲಗಿತ್ತಿ, ದೇವಸ್ಥಾನದ ಕೆಲ ಜಮೀನಿಗೆ ಸಂಬಂದಿಸಿದ ಪ್ರಕರಣಕ್ಕೆ ನ್ಯಾಯಾಲಯ ತಡಯಜ್ಞೆ ನೀಡಿದ್ದು ಅದನ್ನು ಪಾಲಿಸುತ್ತೇವೆ ಎಂದಿದ್ದಾರೆ. ಮತ್ತೊಂದು ಕಡೆ ಸರ್ವೇ ಕಾರ್ಯ ಮುಂದವರೆದಿದ್ದು ಸ್ಥಳೀಯರಲ್ಲಿ ಅನುಮಾನ ಉಂಟಾಗುವಂತೆ ಮಾಡಿದೆ ಎನ್ನಲಾಗಿದೆ.

# ನಾಗಮೋಹನ್ ದಾಸ್, ವರದಿಯನ್ನು ಕೂಡಲೇ ಯಥಾರೀತಿ ಜಾರಿ ಮಾಡಿ..!ಗಣೇಶ್ ಹೊರತಟ್ನಾಳ್ ಎಚ್ಚರಿಕೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಒಳ ಮೀಸಲಾತಿಗಾಗಿ ನಾಗಮೋಹನ್ ದಾಸ್ ವರದಿಯನ್ನು ಕೂಡಲೇ ಯಥಾರೀತಿ ಜಾರಿ ಮಾಡವಂತೆ ಈಗಾಗಲೇ ಮನವಿ ಮಾಡಿದ್ದು, ಸರ್ಕಾರ ವಿಳಂಬ ನೀತಿ ಅನುಸರಿಸಿದೆ, ಒಳಮೀಸಲಾತಿ ಜಾರಿಗೆ ರಾಜಕೀಯ ಮಾಡಿದ್ರೆ ರಕ್ತಪಾತ ಆಗುತ್ತೆ ಎಂದು ಮಾದಿಗ ಸಮುದಾಯ ಯುವ ಮುಖಂಡ ಗಣೇಶ್ ಹೊರತಟ್ನಾಳ್ ಎಚ್ಚರಿಸಿದರು. ನಗರದಲ್ಲಿ ಭಾನುವಾರ ಸುದ್ದಿಗೋಷ್ಠಿ ನಡೆಸಿ ಮಾತ್ನಾಡಿದ ಗಣೇಶ್ ಹೊರತಟ್ನಾಳ್, ಸುದೀರ್ಘ ಮೂರು ದಶಕಗಳಿಂದ ಒಳ ಮೀಸಲಾತಿ ಜಾರಿಗಾಗಿ ಮಾದಿಗ ಸಮುದಾಯ ಹೋರಾಟ ಮಾಡುತ್ತಲೇ ಇದೆ, ಕಾಂಗ್ರೆಸ್ ಸಿದ್ದರಾಮಯ್ಯ ಸರ್ಕಾರ ಚುನಾವಣೆ ಮುನ್ನ ಪ್ರಣಾಳಿಕೆಯಲ್ಲಿ ನೀಡಿದ ಒಳಮೀಸಲಾತಿ ಭರವಸೆಯನ್ನು ಮಾತಿನಂತೆ ಈಡೇರಿಸಲಿ, ಕೊಟ್ಟ ಮಾತಿನಂತೆ ನಾಗಮೋಹನ್ ದಾಸ್ ವರದಿಯನ್ನು ಯಥಾರೀತಿ ಜಾರಿ ಮಾಡಲಿ, ಆಗಸ್ಟ್ 16 ಎಂದು ಹೇಳಿದ ಸರ್ಕಾರ ಆಗಸ್ಟ್ 19ಕ್ಕೆ ಮುಂದೂಡಿದೆ, ಇದರಲ್ಲಿ ಏನೋ ಹುನ್ನಾರ ಅಡಿಗಿರುವುದು ಮೇಲ್ನೋಟಕ್ಕೆ ಕಾಣಿಸುತ್ತಿದೆ. ಇದು ಕಾಂಗ್ರೆಸ್ ನ ವಿಳಂಬ ನೀತಿ ಎದ್ದು ಕಾಣುತ್ತಿದೆ ಎಂದು ಆರೋಪಿಸಿದರು.

ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಂತೆ ಆದಿ ಕರ್ನಾಟಕ 147199, ಆದಿದ್ರಾವಿಡ 320641, ಆದಿ ಆಂಧ್ರ 7114 ಜನ ಸಂಖ್ಯೆ ಇದ್ದು ಇದನ್ನು 'ಇ' ಪ್ರವರ್ಗದಲ್ಲಿ ಗುರಿತಿಸಲಾಗಿದೆ, 'ಇ' ಗುಂಪಿನಲ್ಲಿ ಮೂಲ ಜಾತಿ ಹೇಳದೆ ಆದಿದ್ರಾವಿಡ ಎಂದು ಗುರುತಿಸಿಕೊಂಡವರು 320641 ಜನ ಇದ್ದಾರೆ. ಇವರಲ್ಲಿ ಬಹುತೇಕರು ಪೌರಕಾರ್ಮಿಕರಿದ್ದಾರೆ. ಮಾದಿಗ ಸಮುದಾಯದವರಾಗಿದ್ದಾರೆ, ಹಾಗಾಗಿ ಸರ್ಕಾರ ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು ಎಂದು ತಿಳಿಸಿದರು.

ಸಿದ್ದರಾಮಯ್ಯನವರು 2013–2018ವರೆಗೆ ಸಿಎಂ ಇದ್ದಾಗಲೂ ವಿಳಂಬ ಧೋರಣೆ ಅನುಸರಿಸಿದ್ದಾರೆ. ಸಿದ್ದರಾಮಯ್ಯ ಅವರು ಮೂರು ಸಚಿವರ ಕೈಗೊಂಬೆಯಾಗಿದ್ದಾರೆ. ಆಗಸ್ಟ್ 1ಕ್ಕೆ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಒಂದು ವರ್ಷ ಕಳೆದ್ರೂ, ಸಿದ್ದರಾಮಯ್ಯ ಸರ್ಕಾರ ಇನ್ನು ವಿಳಂಬ ನೀತಿ ಅನುಸರಿಸುತ್ತಿದೆ.

ಒಳಮೀಸಲಾತಿ ಜಾರಿಯಾಗದೇ, ನೇಮಕಾತಿಗಳು ಸಹ ನೆನಗುದಿಗೆ ಬಿದ್ದಿದೆ, ಸಿದ್ದರಾಮಯ್ಯ ಸರ್ಕಾರ ಕಾಲಹರಣ ನೀತಿಯನ್ನು ಪಕ್ಕಕ್ಕೆ ಇಟ್ಟು ಆಗಸ್ಟ್ 19 ಕ್ಕೆ ಒಳಮೀಸಲಾತಿ ಜಾರಿ ಮಾಡಬೇಕು, ಇಲ್ಲವಾದರೆ ಉಗ್ರಹೋರಾಟ, ರಕ್ತಪಾತ ಖಚಿತ ಎಂದರು. ಈ ಸಂದರ್ಭದಲ್ಲಿ ಆಗಸ್ಟ್ 19 ನೇ ದಿನಾಂಕದಂದು ಸರಕಾರ ಶಿಫಾರಸ್ಸು ಮಾಡಿ ಗೌರವಾನ್ವಿತ ರಾಜ್ಯಪಾಲರ ಅಂಕಿತ ಬೀಳದಿದ್ದರೆ ಕೊಪ್ಪಳ ಜಿಲ್ಲೆ ಬಂದ್ ಕರೆ ಮಾಡಲಾಗುವುದೆಂದು ಎಚ್ಚರಿಕೆ. ನೀಡಿದರು.

ಈ ಪತ್ರಿಕಾ ಗೋಷ್ಠಿಯಲ್ಲಿ ಮಾದಿಗ ಸಮುದಾಯದ ಮುಖಂಡರಾದ ಹನುಮೇಶ್ ಕಡೆಮನಿ, ರಾಮಣ್ಣ ಚೌಡಕಿ, ನಿಂಗಪ್ಪ ಮೈನಳ್ಳಿ, ಮಂಜುನಾಥ್ ಮುಸಲಾಪುರ, ಮಾರುತೆಪ್ಪ ಬಿಕನಳ್ಳಿ, ಶಂಕರ್ ನರೇಗಲ್, ಸುಧೀರ್ ಕಾತರಕಿ, ಬಸವರಾಜ್ ಮ್ಯಗಳಮನಿ ಇತರರು ಇದ್ದರು.

# ಗುರುವನ್ನು ಸ್ಮರಿಸಿ ಗೌರವಿಸುವುದೇ ಗುರುವಂದನೆ-ಗೌಡಪ್ಪಗೋಳ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.18-ಭಾರತೀಯ ಸಂಸ್ಕೃತಿಯಲ್ಲಿ ಗುರು - ಶಿಷ್ಯ ಪರಂಪರೆ ಶ್ರೇಷ್ಠವಾಗಿದ್ದು, ಈ ಪರಂಪರೆ ಮುಂದುವರೆಯುವುದು ಇಂದಿನ ಅಗತ್ಯವಾಗಿದೆ ಎಂದು ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತ ಜಿ.ಬಿ.ಗೌಡಪ್ಪಗೋಳ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ರವಿವಾರ ಸ್ಥಳೀಯ ಸರಕಾರಿ ಹಿರಿಯ ಪ್ರಾಥಮಿಕ ಹಾಗೂ ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯಲ್ಲಿ ಓದಿದ 2007-2012 ನೇ ಸಾಲಿನ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜ್ಞಾನ, ಸಂಸ್ಕಾರ ನೀಡಿ ತಮ್ಮ ಬದುಕಿಗೆ ಬೆಳಕು ನೀಡುವ ಗುರುಗಳನ್ನು ಶ್ರದ್ಧೆ, ಭಕ್ತಿಯಿಂದ ಗೌರವಿಸಿ, ಧನ್ಯತಾ ಭಾವದಿಂದ ಸ್ಮರಿಸುವುದೇ ಗುರುವಂದನಾ ಕಾರ್ಯಕ್ರಮ ಎಂದು ಹೇಳಿದ ಗೌಡಪ್ಪಗೋಳ, ಇದು ಗುರು-ಶಿಷ್ಯರ ಭಾವಗಳ ಸಂಗಮ ಎಂದರು.

ಮುಖ್ಯ ಅತಿಥಿ ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ ಮಾತನಾಡಿ, ಜ್ಞಾನ ಧಾರೆಯೆರೆದು ಮಕ್ಕಳ ಭವಿಷ್ಯ ರೂಪಿಸುವ ಗುರುಗಳ ಸ್ಮರಣೆ ಮಾಡಿ ಗೌರವಿಸುವ ಪರಂಪರೆ ಒಳ್ಳೆಯ ಸಂಪ್ರದಾಯವಾಗಿದೆ ಎಂದು ಹೇಳಿದರು.

ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯ ಮುಖ್ಯಗುರು ಎಂ.ಎ.ಮುನವಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಜಗನ್ನಾಥ ಪತ್ತಾರ ಮುಖ್ಯ ಅತಿಥಿಗಳಾಗಿದ್ದರು. ನಿವೃತ್ತ ಶಿಕ್ಷಕ ವಾಯ್.ಆರ್.ಭೂತಾಳಿ, ಶಿಕ್ಷಕರಾದ ಎಚ್.ಬಿ.ಗೋಣಿ ಹಾಗೂ ಜಿ.ಕೆ.ಒಡೆಯರ, ಹಳೇ ವಿದ್ಯಾರ್ಥಿಗಳಾದ ಸವಿತಾ ಕಾಡನ್ನವರ, ಭಾಗೀರಥಿ ಬೆನಕಟ್ಟಿ, ಲಕ್ಷ್ಮೀ ಅಂಗಡಿ ಮಾತನಾಡಿದರು.

ವಿಶ್ವಭಾರತಿ ಶಿಕ್ಷಣ ಸಮಿತಿಯ ಆಡಳಿತಾಧಿಕಾರಿ ಮಾಲತೇಶ ಅಮಾತೆಪ್ಪನವರ ಅಧ್ಯಥಕ್ಷತೆ ವಹಿಸಿದ್ದರು. ನಿವೃತ್ತ ಶಿಕ್ಷಕರುಗಳಾದ ಎಸ್.ಬಿ.ಮಡಿವಾಳರ, ವಿ.ಕೆ.ಬೂದಿಹಾಳ, ಪಂಡಿತ ಮಾಚಾ, ಎಂ.ವಿ.ಗೊರವರ, ಎನ್.ಎಚ್.ಬಾಳಕ್ಕನವರ, ಪಿ..ಬಿ.ಗಂಗರಡ್ಡಿ, ಎನ್.ಬಿ.ಮದಕಟ್ಟಿ, ಎಸ್.ಎಸ್.ಜಮಾದಾರ, ಆರ್.ಎಚ್.ಕುಲಕರ್ಣಿ, ಜಿ.ಜಿ.ಚಿತ್ತರಗಿ, ಜಿ.ಬಿ.ಲಾಯದಗುಂದಿ, ಶಿಕ್ಷಕರಾದ ಕೆ.ಎಚ್.ನಿಂಬಲಗುಂದಿ, ಆರ್.ಬಿ.ಬೆಣ್ಣೂರ, ಎಸ್.ಆರ್.ಮಾಚಾ, ಎಸ್.ಎಸ್.ಮನಗೂಳಿ, ಎಸ್.ಎಸ್.ಬಳೂಲದ, ವಿ.ಕೆ.ಹರ್ತಿ, ಎಸ್.ಆರ್.ಗಿರಿಜಾ, ಎಸ್.ಎಂ.ಹೊನಕೇರಿ ಅವರನ್ನು ಸನ್ಮಾನಿಸಲಾಯಿತು.

ಮಲ್ಲು ಬಡಿಗೇರ ಪ್ರಾರ್ಥಿಸಿದರು. ರೇಖಾ ದಾಸಪ್ಪನವರ ಸ್ವಾಗತಿಸಿದರು. ಮಾಲತೇಶ ಸನ್ನಪ್ಪನವರ ನಿರೂಪಿಸಿದರು. ಯಲ್ಲಾಲಿಂಗ ಚಲವಾದಿ ವಂದಿಸಿದರು.

### ಮಣಿನಾಗರದಲ್ಲಿ ವೇಮನರ ತತ್ವ ಚಿಂತನ

# ವೇಮನರ ವಚನಗಳು ಶಾಶ್ವತ ಸತ್ಯ-ಗೌಡಪ್ಪಗೋಳ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.18-ತತ್ವಜ್ಞಾನಿ ಮಹಾಯೋಗಿ ವೇಮನರ ವಚನಗಳು ಸಾರ್ವಕಾಲಿಕ ಸತ್ಯಗಳಾಗಿದ್ದು, ಅವು ಮನುಷ್ಯನಿಗೆ ಉತ್ತಮ ಬದುಕಿನ ದಾರಿ ತೋರುತ್ತವೆ ಎಂದು ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತ ಜಿ.ಬಿ.ಗೌಡಪ್ಪಗೋಳ ಹೇಳಿದರು.

ಬಾದಾಮಿ ತಾಲೂಕಿನ ಮಣಿನಾಗರ ಗ್ರಾಮದಲ್ಲಿ ರವಿವಾರ ಸ್ಥಳೀಯ ಕೊತ್ತಲೇಶ್ವರ ದೇವಸ್ಥಾನದಲ್ಲಿ ಬೆನಕಟ್ಟಿಯ ಹೇಮ ವೇಮನ ಸದ್ಬೋಧನ ಪೀಠ ಗ್ರಾಮದ ಮಾರುತಿ ಜೀರ್ಣೋದ್ಧಾರ ಸಮಿತಿಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮನೆ-ಮನದಲ್ಲಿ ವೇಮನರ 183 ನೇ ಮಾಸಿಕ ತತ್ವ ಚಿಂತನ ಹಾಗೂ ಹೇಮರಡ್ಡಿ ಮಲ್ಲಮ್ಮ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ವೇಮನರ ಪದ್ಯ ಕುರಿತು ಮಾತನಾಡಿದರು.

ವೇಮನರು ಪದ್ಯಗಳ ಮೂಲಕ ಸುಂದರ, ನೆಮ್ಮದಿಯ ಬದುಕಿಗೆ ಹೇಗೆ ಜೀವನ ಮಾಡಬೇಕು ಎಂಬುದನ್ನು ತಿಳಿಸುವ ಜೊತೆಗೆ ಪರೋಪಕಾರ, ದಾನ, ಧರ್ಮಗಳ ಮೂಲಕ ಪುಣ್ಯದ ಕಾರ್ಯಗಳನ್ನು ಮಾಡಿ ಜೀವನ ಸಾರ್ಥಕ್ಯ ಮಾಡಿಕೊಳ್ಳುವುದನ್ನು ತಿಳಿಸಿದ್ದಾರೆ ಎಂದ ಗೌಡಪ್ಪಗೋಳ, ಹೇಮರಡ್ಡಿ ಮಲ್ಲಮ್ಮಳ ಬದುಕು, ಅವಳ ಆದರ್ಶಗಳನ್ನು ತಿಳಿದು ಬಾಳಿದರೆ ನಮ್ಮದೂ ಉತ್ತಮ ಜೀವನವಾಗುತ್ತದೆ ಎಂದರು.

ಸಾನಿಧ್ಯ ವಹಿಸಿದ್ದ ಕೆರೂರಿನ ಆಧ್ಯಾತ್ಮಿಕ ಚಿಂತಕ ರುದ್ರಮುನಿ ಸ್ವಾಮಿಗಳು ಮಾತನಾಡಿ, ಪರೋಪಕಾರದ ಜೀವನ ಬದುಕನ್ನು ಅರಳಿಸುತ್ತದೆ. ಆ ಹಿನ್ನೆಲೆಯಲ್ಲಿ ಅಸಹಾಯಕರು, ಬಡವರಿಗೆ ನೆರವಾಗಿ ಮನುಷ್ಯ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸ್ವಾಮಿ ವಿವೇಕಾನಂದ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಡಿ.ಪಿ.ಅಮಲಝರಿ, ದಾನವನ್ನು ನಿರ್ಮಲ ಮನಸ್ಸಿನಿಂದ ಮಾಡಬೇಕು. ಸಾತ್ವಿಕರಾಗಿ ಬದುಕಿ ಸಮಾಜಕ್ಕೆ ಬೆಳಕಾಗಬೇಕು ಎಂದರು.

ಮುರನಾಳದ ಮೌನೇಶ್ವರ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸಿದರು. ಡಾ.ಅರವಿಂದ ಕೋವಳ್ಳಿ, ಸಿದ್ದನಗೌಡ ಪಾಟೀಲ, ಕೆ.ಪಿ.ಅರಿಷಿಣಗೋಡಿ, ಮಾಲತೇಶ ಅಮಾತೆಪ್ಪನವರ, ಭೀಮನಗೌಡ ಶೇಷಪ್ಪನವರ, ಈಶ್ವರ ಕೋನಪ್ಪನವರ ಅತಿಥಿಗಳಾಗಿದ್ದರು.

ಬೆನಕಟ್ಟಿಯ ಮಲ್ಲಮಾಂಬೆ ಭಜನಾ ತಂಡ ವೇಮನರ ವಚನ ಪಠಣ ಮಾಡಿದರು. ನಿವೃತ್ತ ಶಿಕ್ಷಕ ಸಿ.ಎಸ್.ನಾಗನೂರ ಸ್ವಾಗತಿಸಿದರು. ಮಲ್ಲಿಕಾರ್ಜುನ ನಾಗನೂರ ನಿರೂಪಿಸಿದರು.

# ನಾಳೆ ದೇವರಾಜ ಅರಸು ಜನ್ಮ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.18-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಗಸ್ಟ 20 ರಂದು ಬೆಳಿಗ್ಗ 11 ಗಂಟೆಗೆ ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸುವರು, ಶಾಸಕರು ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ,ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ನ್ಯಾಯವಾದಿ ಮಹಾಂತೇಶ ಆವಾರಿ ಅತಿಥಿ ಉಪನ್ಯಾಸ ನೀಡಲಿದ್ದಾರೆ.

## ನಂಜನಗೂಡು ತಾಲ್ಲೂಕು ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ಆರಂಭಿಸಲು ಕ್ರಮ ವಹಿಸಲಾಗುವುದು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಆಗಸ್ಟ್ 18, ನಂಜನಗೂಡು ತಾಲ್ಲೂಕು ಆಸ್ಪತ್ರೆಯಲ್ಲಿ ಟ್ರಮಾ ಕೇರ್ ಸೇವೆಗಳನ್ನು ಆರಂಭಿಸುವ ಉದ್ದೇಶವಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಡಾ. ಯತೀಂದ್ರ ಎಸ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಆಸ್ಪತ್ರೆಗಳನ್ನು ರಾಷ್ಟ್ರೀಯ ಅಪಘಾತ ಮತ್ತು ಸುಟ್ಟಗಾಯಗಳ ಕಾರ್ಯಕ್ರಮದಡಿಯಲ್ಲಿ ಬಲಗೊಳಿಸಲು ರೂ. 10.00 ಕೋಟಿಗಳ ಕ್ರಿಯಾ ಯೋಜನೆಗೆ ಅನುಮೋದನ ನೀಡಲಾಗಿದೆ.

ದಿನಾಂಕ: 19.03.2025 ರಂದು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಸ್ತೆ ಸುರಕ್ಷತಾ ಪ್ರಾಧಿಕಾರದ ಸಭೆಯು ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ. ಇದರಲ್ಲಿ ನಂಜನಗೂಡು ತಾಲ್ಲೂಕು ಆಸ್ಪತ್ರೆಗೆ ಅಗತ್ಯವಿರುವ ಉಪಕರಣಗಳನ್ನು ಸಹ ಪ್ರಸ್ತಾಪಿಸಲಾಗಿದೆ. ಕೇಂದ್ರ ಸರ್ಕಾರದ ರಾಷ್ಟ್ರೀಯ ಅಪಘಾತ ಮತ್ತು ಸುಟ್ಟಗಾಯಗಳ ತಡೆಗಟ್ಟುವಿಕೆ ಮತ್ತು ನಿರ್ವಹಣಾ ಕಾರ್ಯಕ್ರಮದ ಮಾರ್ಗಸೂಚಿಯನ್ವಯ-ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿನ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ವಿಭಾಗವನ್ನು ಮೇಲ್ದರ್ಜೆಗೇರಿಸಿ ಅಪಘಾತಕ್ಕೆ ಒಳಗಾದ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡುವುದು ಹಾಗೂ ಅವಶ್ಯಕವಿದ್ದಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಮೇಲ್ದರ್ಜೆಯ ಆಸ್ಪತ್ರೆಗಳಿಗೆ ತುರ್ತು ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಬೇಕಾಗಿರುತ್ತದೆ ಪ್ರತ್ಯೇಕ ಟ್ರಾಮಾ ಕೇರ್ ಸೆಂಟರ್‌ಗಳನ್ನು ಕಲ್ಪಿಸಬೇಕೆಂಬ ನಿಯಮವು ಮಾರ್ಗಸೂಚಿಯಲ್ಲಿ ಇಲ್ಲದಿರುವುದರಿಂದ ಟ್ರಾಮಾ ಕೇರ್ ಸೆಂಟರ್ ಸ್ಥಾಪಿಸಲು ಜಾಗದ ಅವಶ್ಯಕತೆ ಇರುವುದಿಲ್ಲ ಎಂದು ತಿಳಿಸಿದರು.

# ಅಕ್ಕಮಹಾದೇವಿ ಕಾಲೇಜಿನ ಫಲಿತಾಂಶ ಶೇ.99



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.18-ನಗರದ ಬಿ.ವಿ.ವಿ.ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ 2024-25ನೇ ಶೈಕ್ಷಣಿಕ ಸಾಲಿನ ಬಿಎ ಅಂತಿಮ ವರ್ಷದ ವಿದ್ಯಾರ್ಥಿನಿಯರ ಫಲಿತಾಂಶ ಶೇಕಡಾ 99ರಷ್ಟಾಗಿದ್ದು, ಮಹಾವಿದ್ಯಾಲಯ ಅತ್ಯುತ್ತಮ ಸಾಧನೆ ಮಾಡಿದೆ.

ತೇಜಶ್ವಿನಿ ಮೇಟಿ ಶೇ.88.44 ಅಂಕ ಗಳಿಸಿ ಪ್ರಥಮ, ಶೃತಿ ಪೂಜಾರಿ ಶೇ.88.27 ಪಡೆದು ದ್ವಿತೀಯ ಹಾಗೂ ಆಯಿಷಾ ಬೇವೂರ ಶೇ.88.22 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಬಿ.ವ್ಹಿ.ವ್ಹಿ. ಸಂಘದ ಕಾರ್ಯಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ್ ಅಥಣಿ, ಕಾಲೇಜು ಆಡಳಿತ ಮಂಡಳಿಯ ಕಾರ್ಯಧ್ಯಕ್ಷ ಗುರುಬಸವ ಸೂಳಿಭಾವಿ, ಆಡಳಿತ ಅಧಿಕಾರಿಗಳಾದ ಪ್ರೊ.ವ್ಹಿ.ಆರ್.ಶಿರೋಳ ಹಾಗೂ ಡಾ.ವ್ಹಿ.ಎಸ್.ಕಟಗಿಹಳ್ಳಿಮಠ, ಪದನಿಮಿತ್ತ ಕಾರ್ಯದರ್ಶಿ ಡಾ.ಎಸ್.ಎಮ್.ಗಾಂವಕರ, ಪ್ರಾಚಾರ್ಯ ಎಸ್.ಜೆ.ಒಡೆಯರ ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

# ಭಗವಂತನ ನಾಮಸ್ಮರಣೆಯಿಂದ ಪುಣ್ಯ ಫಲ ಪ್ರಾಪ್ತಿ

**ಬೀದರ**

ಮಲ್ಲಮ್ಮ ನುಡಿ ವಾರ್ತೆ



ಭಾರತೀಯ ಪರಂಪರೆಯಲ್ಲಿ ಶ್ರಾವಣ ಮಾಸ ವಿಶೇಷವಾದ ಮಹತ್ವವನ್ನು ಹೊಂದಿದೆ ಶ್ರಾವಣ ಮಾಸದಲ್ಲಿ ಎಲ್ಲರು ಭಕ್ತಿಯಲ್ಲಿ ಮಿಂದೇಳುವುದನ್ನು ನಾವು ಕಾಣುತ್ತೇವೆ ಈ ಮಾಸದಲ್ಲಿಯೆ ಇಷ್ಟೆಲ್ಲಾ ಧಾರ್ಮಿಕ ಆಚರಣೆ ಮತ್ತು ಗುರುಗಳಿಗೆ ಗೌರವ ಕುಡುವಂತದು ಕಾಣುವ ಶ್ರಾವಣ ಮಾಸ ಇದಾಗಿದೆ. ಹಿಂದೂ ಧರ್ಮದ ಪರಂಪರೆ ತತ್ವಗಳು ಯಾರಿಂದಲೂ ಅಳಿಸಲು ಸಾಧ್ಯವಿಲ್ಲ. ಅಂತಹ ಪರಂಪರೆಯಾದ ಈ ಪವಿತ್ರ ಶ್ರಾವಣ ಮಾಸದಲ್ಲಿಯಾರು ಮನ ಪೂರ್ವಕವಾಗಿ ತಮ್ಮ ಸಂಕಲ್ಪ ಈಡೇರಿಕೆಗೆ ಶ್ರೀ ರುದ್ರಾಭಿಷೇಕ ಪೂಜೆ ಮಾಡುವುದು, ಈ ಮಾಸ ಆರಂಭವಾದಾಗಿನಿಂದ ಸಮಾಪ್ತಿಯ ವರೆಗೆ ಪ್ರತಿದಿನ ಬಿಲ್ವಪ್ರಿಯನಾದ ಶಿವನಿಗೆ ಬಿಲ್ವಪತ್ರೆ ಅರ್ಪಿಸುವ ಪದ್ಧತಿ ಹಾಗೂ ಭಕ್ತಿಯಿಂದ ವಿಶೇಷ ವ್ರತ ಪೂಜಾದಿ ಕಾರ್ಯಗಳು ಹಾಗೂ ಉಪವಾಸ ವ್ರತ ಆಚರಿಸುವರೋ..ಮಹಾದೇವನು ಅವರ ಸಂಕಲ್ಪವನ್ನು ಶಿಘ್ರದಲಿ ಈಡೇರಿಸುವನು ಎನ್ನುವ ನಂಬಿಕೆ ಇದೆ. ಮಾನವನ ಜೀವನದ ಪರಮಾನಂದ ಪ್ರಾಪ್ತಿಗಾಗಿ ಶರಣರ ಸಂತರ ಮಾಹತ್ಮರ ಪುರಾಣ ಪ್ರವಚನ ಪುಣ್ಯ ಕ್ಷೇತ್ರಗಳ ದರ್ಶನ ಪಡೆದರೆ ಪುಣ್ಯ ಪ್ರಾಪ್ತಿಯಾಗುತ್ತದೆ ಅದಕ್ಕಾಗಿಯೇ ಶ್ರಾವಣ ಮಾಸ ಬಂದರೆ ಎಲ್ಲರ ಮನೆ ಸ್ವಚ್ಛಗೊಳಿಸಿಕೊಂಡು, ಮನ ಸ್ವಚ್ಛಗೊಳಿಸಿಕೊಳ್ಳಲು ಸಡಗರ ಸಂಭ್ರಮದ ಭಕ್ತಿ ವಾತಾವರಣ ಕಾಣುತ್ತೇವೆ. ಕೆಲ ಯುವಕರು ಶ್ವೇತ ವಸ್ತ್ರಗಳು ಧರಿಸುತ್ತಾರೆ, ತಿಂಗಳ ಪರಿಯಂತವಾಗಿ ಹಾಗು ಭಾರತದಲ್ಲಿ ಹೆಣ್ಣುಮಕ್ಕಳು ಲಕ್ಷ್ಮಿ ವ್ರತ, ಉಪವಾಸ ವ್ರತ, ಪ್ರತಿದಿನ ಮನದಾನಂದಕ್ಕಾಗಿ ಬ್ರಾಹ್ಮೀ ಮುಹೂರ್ತದಲ್ಲಿ ದೇವಸ್ಥಾನಕೆ ಹೋಗಿ ಬರುವುದು, ಹೀಗೆ ಅನೇಕ ರೀತಿಯ ಭಕ್ತಿ ಯಲ್ಲಿ ತಲ್ಲೀನರಾಗಿರುವುದು ಕಾಣುತ್ತೇವೆ. ಅದಕ್ಕಾಗಿಯೆ ಜನರು ಶ್ರಾವಣ ಮಾಸದಲ್ಲಿ ಶಿವ ಧ್ಯಾನ, ಭಜನೆ ಕೀರ್ತನೆ, ಪುರಾಣ ಅನೇಕ ಧಾರ್ಮಿಕ ಕಾರ್ಯಕ್ರಮಗಳು ಆಯೋಜಿಸಿ, ಪುಣ್ಯ ಕಾರ್ಯಗಳಲ್ಲಿ ಭಾಗವಹಿಸಿ ಭಕ್ತಿಯಿಂದ ತನುಮನದಿಂದ ನಿಸ್ವಾರ್ಥ ಸೇವೆ ಸಲ್ಲಿಸಿ ಪುಣ್ಯ ಫಲ ಪ್ರಾಪ್ತಿಪಡೆದುಕೊಂಡು ಜೀವನ ಧನ್ಯಗೊಳಿಸಿಕೊಳ್ಳುತ್ತಾರೆ. ಅದಲ್ಲದೇ ಇಂತಹ ಪರಿಶುದ್ಧ ಧಾರ್ಮಿಕ ನಂಬಿಕೆ ಭಕ್ತಿಭಾವದಿಂದ ನಡೆಯುವುದನ್ನು ಜಗತ್ತಿಗೆ ತನ್ನ ತತ್ವ, ಆದರ್ಶ, ಜ್ಞಾನ ದೀವಿಗೆ ಯಿಂದ ಬೆಳಕು ನೀಡಿದ ನಮ್ಮ ಭಾರತ ದಲ್ಲಿ ಮಾತ್ರ ಕಾಣಲು ಸಾಧ್ಯ.ಬಸವಾದಿ ಶರಣರ ನುಡಿಯಾದ ಕೂಡಲಸಂಗನ ಪೂಜಿಸಿದ ಫಲ ನಿಮ್ಮದಯ್ಯ ಎನ್ನುವ ವಚನದಂತೆ, ಶ್ರಾವಣ ಮಾಸದಲ್ಲಿ ನಾವೆಲ್ಲರೂ ಭಕ್ತಿಯಿಂದ ಗುರುವಿನ ಧ್ಯಾನಮಾಡಿ ಶ್ರೀ ಗುರು ಭದ್ರೇಶ್ವರ ಕೃಪೆಗೆ ಪಾತ್ರರಾಗೋಣ.



**ಶ್ರೀ ಶಾಂತಕುಮಾರ್ ಸ್ವಾಮಿ ಪೀಠಾಧಿಪತಿಗಳು ಶ್ರೀಗುರು ಭದ್ರೇಶ್ವರ ಸಂಸ್ಥಾನ ಬಾವಗಿ.**

# ಹೆಚ್ಚಿಸಿದ ಹಾಲಿನ ಮಾರಾಟ ದರ ಸಂಪೂರ್ಣವಾಗಿ ರೈತರಿಗೆ ವರ್ಗಾಯಿಸಲು ಹಾಲು ಒಕ್ಕೂಟಗಳಿಗೆ ಸೂಚನೆ

ಬೆಂಗಳೂರು,ಆಗಸ್ಟ್ 18-ಹಾಲು ಉತ್ಪಾದಕರಿಗೆ ಸರ್ಕಾರವು ಪ್ರತಿ ಲೀಟರ್ ಹಾಲಿಗೆ ರೂ. 4/- ಗಳಿಗೆ ಹೆಚ್ಚಿಸಿದ್ದು, ಹೆಚ್ಚಿಸಿದ ಹಾಲಿನ ಮಾರಾಟ ದರವನ್ನು ಸಂಪೂರ್ಣವಾಗಿ ರೈತರಿಗೆ ವರ್ಗಾಯಿಸಲು ಎಲ್ಲಾ ಒಕ್ಕೂಟಗಳಿಗೆ ಸೂಚಿಸಲಾಗಿದೆ ಎಂದು ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ ವೆಂಕಟೇಶ್ ಅವರು ತಿಳಿಸಿದರು. ಇಂದು ವಿಧಾನಸಭೆ ಕಲಾಪದ ವೇಳೆಯಲ್ಲಿ ಶಾಸಕರಾದ ಅರವಿಂದ್ ಬೆಲ್ಲದ್ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದ 16 ಜಿಲ್ಲಾ ಹಾಲು ಒಕ್ಕೂಟಗಳ ಆರ್ಥಿಕ ಪರಿಸ್ಥಿತಿಯನುಗುಣವಾಗಿ ಒಕ್ಕೂಟಗಳ ಆಡಳಿತ ಮಂಡಳಿ ಸಭೆಗಳಲ್ಲಿ ಚರ್ಚಿಸಿ ತೀರ್ಮಾನಿಸಿದಂತೆ ಹಾಲಿನ ಖರೀದಿ ದರವನ್ನು ಆಯಾ ಒಕ್ಕೂಟಗಳ ಹಂತದಲ್ಲೇ ನಿಗದಿಪಡಿಸಲಾಗುತ್ತಿದ್ದು, ಕಳೆದ 2 ವರ್ಷಗಳಿಂದ ಒಕ್ಕೂಟಗಳು ಖರೀದಿ ದರ ನಿಗದಿಪಡಿಸಲು ಸರ್ಕಾರದಿಂದ ಸೂಕ್ತ ಮಾರ್ಗದರ್ಶನ ಪಡೆ-ಯದೇ ಹೊರತು ದರ ಬದಲಾವಣೆಗೆ ಕ್ರಮ ವಹಿಸಬಾರದೆಂದು ಹಾಗೂ ಹೆಚ್ಚಿಸಿದ ಹಾಲಿನ ಮಾರಾಟ ದರವನ್ನು ಸಂಪೂರ್ಣವಾಗಿ ರೈತರಿಗೆ ವರ್ಗಾಯಿಸಲು ಎಲ್ಲಾ ಒಕ್ಕೂಟಗಳಿಗೆ ಸೂಚಿಸಲಾಗಿದೆ.

ಹಾಲು ಉತ್ಪಾದಕರಿಗೆ ಸರ್ಕಾರವು ಪ್ರತಿ ಲೀಟರ್ ಹಾಲಿಗೆ ರೂ. 4/- ಗಳಿಗೆ ಹೆಚ್ಚಿಸಿದ್ದು, ಹೆಚ್ಚಿಸಿದ ಪೂರ್ಣ ಮೊತ್ತವನ್ನು ಉತ್ಪಾದಕರುಗಳಿಗೆ ನೇರವಾಗಿ ಖರೀದಿ ದರದಲ್ಲಿ ಸೇರಿಸಿ ಡಿಬಿಟಿ ಮುಖಾಂತರ ಪಾವತಿಸಲಾಗುತ್ತಿದ್ದು, ಇದರಿಂದಾಗಿ ಹಾಲು ಉತ್ಪಾದಕರಿಗೆ ಲಾಭವಾಗಿರುತ್ತದೆ.

ಕರ್ನಾಟಕ ಹಾಲು ಮಹಾಮಂಡಳಿ ವ್ಯಾಪ್ತಿಯ 16 ಜಿಲ್ಲಾ ಹಾಲು ಒಕ್ಕೂಟಗಳ ವ್ಯಾಪ್ತಿಯಲ್ಲಿ ಒಟ್ಟು 8.89 ಲಕ್ಷ ಸಕ್ರಿಯ ಸದಸ್ಯರಿಂದ ಪ್ರಸ್ತುತ ದಿನವೊಂದಕ್ಕೆ 99.06 ಲಕ್ಷ ಕೆ.ಜಿ ಹಾಲು ಶೇಖರಣೆ-ಯಾಗುತ್ತಿದ್ದು, ಶೇ 10 ರಷ್ಟು ಪ್ರಗತಿಯಾಗಿರುತ್ತದೆ. ಪ್ರತಿ ಲೀಟರ್ ಹಾಲಿಗೆ ರೂ. 4/-ಗಳನ್ನು ಹೆಚ್ಚಿಸಿದ್ದು, ಪ್ರಸ್ತುತ ಸರಾಸರಿ ಹಾಲಿನ ಖರೀದಿ ರೂ. 35.30 ಆಗಿರುತ್ತದೆ ಎಂದು ತಿಳಿಸಿದರು.

# ಶಾಂತರೀತಿಯಿಂದ ಗಣೇಶ, ಈದ್‌ಮಿಲಾದ ಹಬ್ಬವನ್ನು ಆಚರಿಸಿ : ಡಿಸಿ ಸಂಗಪ್ಪ

ಮಲ್ಲಮ್ಮ ನುಡಿ ವಾರ್ತೆ



ಬಾಗಲಕೋಟೆ: ಆಗಸ್ಟ 18-: ಜಿಲ್ಲೆಯಲ್ಲಿ ಆಗಸ್ಟ 27 ರಂದು ಆಚರಿಸಲ್ಪಡುವ ಗಣೇಶ ಉತ್ಸವ ಹಾಗೂ ಸೆಪ್ಟೆಂಬರ 5 ರಂದು ಆಚರಿಸಲ್ಪಡುವ ಈದ್‌ಮಿಲಾದ ಹಬ್ಬವನ್ನು ಶಾಂತರೀತಿಯಿಂದ, ಸಂಭ್ರಮ ಸಡಗರದಿಂದ ಆಚರಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಕರೆ ನೀಡಿದರು.

ಜಿಲ್ಲಾಡಳಿತ ಭವನದ ಆಡಿಟೋ-ರಿಯಂ ಹಾಲ್‌ನಲ್ಲಿ ಸೋಮವಾರ ಗಣೇಶ ಉತ್ಸವ ಹಾಗೂ ಈದಮಿಲಾದ್ ಹಬ್ಬದ ಕುರಿತು ಜರುಗಿದ ಶಾಂತತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಾನೂನು ಸುವ್ಯವಸ್ಥೆಗೆ ಯಾವುದೇ ರೀತಿಯಲ್ಲಿ ದಕ್ಕೆ ಬರದಂತೆ ಹಬ್ಬವನ್ನು ಆಚರಿಸಬೇಕು. ಹಬ್ಬದ ಆಚರಣೆಗೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಸಂಪೂರ್ಣವಾಗಿ ಸಹಕಾರ ನೀಡಲಿದ್ದು, ಮಣ್ಣಿನಿಂದ ತಯಾರಿಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲು ಮುಂದಾಗಬೇಕು ಎಂದು ತಿಳಿಸಿದರು.

ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆಗೆ ಅನುಮತಿಗಾಗಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಪಿಡಬ್ಲುಡಿ, ಪೊಲೀಸ್, ಹೆಸ್ಕಾಂ ಹಾಗೂ ನಗರಸಭೆಯಿಂದ ಪಡೆಯಬಹುದಾದ ಅನುಮತಿಯಲ್ಲಿ ಅಡೆತಡೆಯಾಗದಂತೆ ಏಕಗವಾಕ್ಷಿ ಪದ್ದತಿಯ ವ್ಯವಸ್ಥೆ ಮಾಡಲಾಗಿದೆ. ಆಚರಣೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಎಷ್ಟು ಸಾಧ್ಯವೋ ಅಷ್ಟು ಪಾಲನೆ ಆಗಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಗಣೇಶ ಉತ್ಸವ ಮಂಡಳಿಗಳು ಒಗ್ಗಟ್ಟಿನಿಂದ ಆಚರಣೆ ಮಾಡಬೇಕು. ಆಚರಣೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಬರದಂತೆ ಪೊಲೀಸ್ ಸಿಬ್ಬಂದಿಗಳ ಜೊತೆ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಬೇಕು. ಗಣೇಶ ವಿಸರ್ಜನೆ ಸಮಯದಲ್ಲಿ ಡಿಸೆ ಸೌಂಡ್ ಸಿಸ್ಟಮ್ ಹಚ್ಚುವದರಿಂದ ಧಾರ್ಮಿಕ ಭಾವನೆ ಮೂಡಲು ಸಾಧ್ಯವಿಲ್ಲ. ಇದರ ಬದಲಾಗ ಜಾನಪದ ಕಲಾತಂಡಗಳ ಮೂಲಕ ಅದ್ದೂರಿಯಾಗಿ ಮೆರವಣಿಗೆ ಮಾಡುವದರ ಜೊತೆಗೆ ನಗರಸಭೆ, ಗ್ರಾಮ ಪಂಚಾಯತಿಯಿಂದ ನಿರ್ಮಿಸಲಾದ ಕೃತಕ ನೀರಿನ ತೊಟ್ಟಿಗಳಲ್ಲಿ ಗಣೇಶ ಮೂರ್ತಿ ವಿಸರ್ಜನೆ ಮಾಡುವಂತೆ ಮನವಿ ಮಾಡಿಕೊಂಡರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ ಕಾನೂನು ಸುವ್ಯವಸ್ಥೆಗೆ ದಕ್ಕೆ ಬರದ ರೀತಿಯಲ್ಲಿ ಹಬ್ಬವನ್ನು ಆಚರಣೆ ಆಗಬೇಕು. ಜಿಲ್ಲೆಯ ನಗರ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮರಾಗಳಿದ್ದು, ಇವುಗಳ ಮೂಲಕ ಇಲಾಖೆ ಎಲ್ಲವನ್ನು ಗಮನಿಸುತ್ತದೆ. ಸರ್ವಜನಿಕರ ಗಣೇಶ ಪ್ರತಿಷ್ಠಾಪನೆ ಸ್ಥಳಗಳಲ್ಲಿ ಪೆಂಡಾಲ ಹಾಕುವಾಗ ಸಂಚಾರಕ್ಕೆ ಅಡಗಡೆಯಾಗದಂತೆ ನೋಡಿಕೊಳ್ಳಬೇಕು. ಪೊಲೀಸ್ ಸಿಬ್ಬಂದಿಯ ಜೊತೆ ಗಣೇಶ ಮಂಡಳಿಯಿಂದ ವ್ಯಾಲೆಂಟರ್‌ಗಳನ್ನು ಸಹ ನಿಯೋಜಿಸಲು ತಿಳಿಸಿದ ಅವರು ಮೆರವಣಿಗೆಯಲ್ಲಿ ಯಾವ ರೀತಿಯ ಡಿಜೆ ಸೌಂಡ್ ಸಿಸ್ಟಮ್ ಅಳವಡಿಸುತ್ತೀರಿ ಎಂಬುದನ್ನು ಪರಿಶೀಲಿಸಿ ಮುಂದಿನ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ವಿವಿಧ ಗಣೇಶ ಉತ್ಸವ ಮಂಡಳಿಯವರು ಪ್ರತಿ ವರ್ಷದಂತೆ ಈ ವರ್ಷವೂ ಡಿಜೆ ಸೌಂಡ್ ಸಿಸ್ಟಮ್‌ಗೆ ಅವಕಾಶ ನೀಡಲು ವಿನಂತಿಸಿದರೆ ಇನ್ನು ಕೆಲವರು ಡಿಸೆ ಬಳಸುವದಿಲ್ಲವೆಂದು ತಿಳಿಸಿದರು. ಈದ್ ಮಿಲಾದ್ ಹಬ್ಬದ ನಿಮಿತ್ಯ ಹಳೆಯ ಬಾಗಲಕೋಟೆ ಮತ್ತು ನವನಗರದಲ್ಲಿ ತಲಾ ಒಂದು ದಿನ ಮೆರವಣಿಗೆ ಅವಕಾಶ ನೀಡುವಂತೆ ಸಮುದಾಯದ ಮುಖಂಡರು ಸಭೆಯಲ್ಲಿ ವಿನಂತಿಸಿಕೊಂಡರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಸೇರಿದಂತೆ ಗಣೇಶ ಉತ್ಸವ ಸಮಿತಿಯ ಮುಖಂಡರು ಹಾಗೂ ಈದ್‌ಮಿಲಾದ್ ಆಚರಣೆ ಸಮಿತಿಯ ಮುಖಂಡರು ಉಪಸ್ಥಿತರಿದ್ದರು.

## ಗೌರಿ ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಬೇಕು.

ಕಲಬುರಗಿ: ಆ.18 (ಕ.ವಾ.) 2025-26 ನೇ ಸಾಲಿನ ಕರ್ನಾಟಕ ರಾಜ್ಯದಾದ್ಯಂತ ಗೌರಿ ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಬೇಕು.ಪಿ.ಓ.ಪಿ ಮತ್ತು ರಾಸಾಯನಿಕ ಬಣ್ಣ ಲೇಪಿತ ಗಣೇಶ ಮೂರ್ತಿಗಳನ್ನು ತಯಾರಿಸುವುದಾಗಲಿ/ಮಾರಾಟ ಮಾಡುವುದಾಗಲಿ/ಸಂಗ್ರಹ ಮಾಡುವುದಾಗಲಿ/ಸಾಗಾಣಿಕೆಯನ್ನು ಮಾಡುವುದಾಗಲಿ ಇತ್ಯಾದಿಗಳು ಪರಿಸರಕ್ಕೆ ಮಾರಕವೆಂದು ಕರ್ನಾಟಕ ಸರ್ಕಾರವು ಈಗಾಗಲೇ ನಿಷೇಧಿಸಿರುತ್ತದೆ ಹಾಗೂ ಜೇಡಿ ಮಣ್ಣಿನಿಂದ ತಯಾರಿಸಿದಂತಹ ಮತ್ತು ನೈಸರ್ಗಿಕ ಬಣ್ಣ ಲೇಪಿತ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪರಿಸರ ಸ್ನೇಹಿ ಗಣೇಶ ಹಬ್ಬವನ್ನು ಆಚರಿಸಬೇಕೆಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿಗಳಾದ ಸೋಮಶೇಖರ್‌ಕೆ.ಎಂ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಕಮಲನಗರ : ತಾಲೂಕಿನ ಮೊದೋಳ(ಬಿ) ಗ್ರಾಮದ ಪಿ.ಕೆ.ಪಿ.ಎಸ್. ಅಧ್ಯಕ್ಷರಾದ ಗುರುನಾಥ ವಟಗೆ ಅವರು 79ನೇ ಸ್ವಾತಂತ್ರ್ಯೋತ್ಸವ ನಿಮಿತ್ತ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಸಿಬ್ಬಂದಿ ವರ್ಗದವರು ಮತ್ತು ಗ್ರಾಮಸ್ಥರು ಇದ್ದರು. (ಮಲ್ಲಮ್ಮ ನುಡಿ ಚಿತ್ರ).

# ಜನತೆಯ ನೆರವಿಗೆ ಧಾವಿಸಲು ಶಾಸಕ ಪ್ರಭು ಚವ್ಹಾಣ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಔರಾದ:ಅ.18:ಕಳೆದೆರಡು ದಿನಗಳಿಂದ ಸುರಿಯುತ್ತಿರುವ ವಿಪರೀತ ಮಳೆಯಿಂದಾಗಿ ಔರಾದ(ಬಿ) ಮತ್ತು ಕಮಲನಗರ ತಾಲ್ಲೂಕುಗಳಲ್ಲಿ ಸಾಕಷ್ಟು ಹಾನಿ ಸಂಭವಿಸಿದ್ದು, ಅಧಿಕಾರಿಗಳು ಕೂಡಲೇ ಸಾರ್ವಜನಿಕರ ನೆರವಿಗೆ ಧಾವಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಕೆರೆ ಕಟ್ಟೆಗಳು ಒಡೆದು ಮಳೆ ನೀರು

ಹೊಲಗಳಿಗೆ ನುಗ್ಗಿ ಸಾಕಷ್ಟು ಬೆಳೆ ಹಾನಿ ಸಂಭವಿಸಿದೆ. ಸೋಯಾ, ಉದ್ದು, ಹೆಸರು, ತೊಗರಿ ಸೇರಿದಂತೆ ಎಲ್ಲ ರೀತಿಯ ಬೆಳೆಗಳು ನೀರು ಪಾಲಾಗಿವೆ. ನಂದಿ ಬಿಜಲಗಾಂವ ಒಂದರಲ್ಲೇ ಸಾಕಷ್ಟು ಜಾನುವಾರುಗಳು ಮೃತಪಟ್ಟಿವೆ. ತಾಲ್ಲೂಕಿನಲ್ಲಿ ಹಲವು ಮನೆಗಳು ಕುಸಿದು ಜನಜೀವನ ಅಸ್ತವ್ಯಸ್ತಗೊಂಡಿದೆ. ಸಾರ್ವಜನಿಕರ ರಕ್ಷಣೆಗೆ ತುರ್ತು ಕ್ರಮ ವಹಿಸಬೇಕೆಂದು



ನಿರ್ದೇಶನ ನೀಡಿದ್ದಾರೆ.

ಕಂದಾಯ, ಕೃಷಿ, ತೋಟಗಾರಿಕೆ, ಪಶು ಸಂಗೋಪನೆ ಇಲಾಖೆಯ ಅಧಿಕಾರಿಗಳು ಖುದ್ದಾಗಿ ಸ್ಥಳ ಪರಿಶೀಲನೆ ನಡೆಸಿ ಹಾನಿಯ ಕುರಿತು ಸರ್ಕಾರಕ್ಕೆ ನಿಖರ ವರದಿ ಸಲ್ಲಿಸಬೇಕು. ಬೆಳೆ, ಮನೆ, ಜಾನುವಾರುಗಳನ್ನು ಕಳೆದುಕೊಂಡು ಸಂಕಷ್ಟದಲ್ಲಿರುವರಿಗೆ ಅಗತ್ಯ ಪರಿಹಾರ ಕಲ್ಪಿಸಲು ಪ್ರಮಾಣಿಕವಾಗಿ ಪ್ರಯತ್ನಿಸಬೇಕೆಂದು ತಿಳಿಸಿದ್ದಾರೆ.

ತಹಸೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ಸೇರಿದಂತೆ ಎಲ್ಲ ಇಲಾಖೆಗಳ ಅಧಿಕಾರಿಗಳು ಚುರುಕಿನಿಂದ ಕೆಲಸ ಮಾಡಬೇಕು. ಸಾರ್ವಜನಿಕರಿಂದ ಬರುವ ದೂರವಾಣಿ ಕರೆಗಳಿಗೆ ಸ್ಪಂದಿಸಬೇಕೆಂದು ತಿಳಿಸಿದ್ದಾರೆ.

ರಸ್ತೆ ಮತ್ತು ಸೇತುವೆಗಳು ಕೊಚ್ಚಿ ಹೋಗಿರುವ ಬಗ್ಗೆ ವರದಿಗಳಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ತಾತ್ಕಾಲಿಕ ಪರಿಹಾರ ಕೈಗೊಂಡು ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು. ನೆಲಕ್ಕುರುಳಿದ ವಿದ್ಯುತ್ ಕಂಬ ಮತ್ತು ತಂತಿಗಳನ್ನು ಸರಿಪಡಿಸಿ ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದ್ದಾರೆ.

ವಿಧಾನಸಭೆ ಅಧಿವೇಶನಗಳ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿದ್ದು, ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿ ಕ್ಷೇತ್ರದಲ್ಲಿ ಉಂಟಾಗಿರುವ ಹಾನಿಯ ಕುರಿತು ಚರ್ಚಿಸಿದ್ದೇನೆ. ಎಲ್ಲ ಅಧಿಕಾರಿಗಳ ಜೊತೆಗೆ ನಿರಂತರ ಸಂಪರ್ಕದಲ್ಲಿದ್ದು, ಮಳೆ ಹಾನಿಯ ನಿಯಂತ್ರಣಕ್ಕಾಗಿ ಅಗತ್ಯ ಸಲಹೆ ಸೂಚನೆಗಳನ್ನು ನೀಡುತ್ತಿದ್ದೇನೆ. ನಾನು ನಿಮ್ಮೊಂದಿಗಿದ್ದು ಆತಂಕಕ್ಕೆ ಒಳಗಾಗದಿರಿ ಎಂದು ರೈತರು ಹಾಗೂ ಸಾರ್ವಜನಿಕರಲ್ಲಿ ಕೋರಿದ್ದಾರೆ.

# ಕಾರ್ಮಿಕರ ಸಾಮಾಜಿಕ ಭದ್ರತೆಗೆ ಸರ್ಕಾರ ಸದಾ ಸಿದ್ಧ : ಸಂಸದ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.18:ಕಾರ್ಮಿಕರ ಸಾಮಾಜಿಕ ಭದ್ರತೆಗೆ ಸರ್ಕಾರ ಸದಾ ಸಿದ್ಧವಾಗಿದೆ ಎಂದು ಸಂಸದ ಸಾಗರ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಪುರಭವನದದಲ್ಲಿ ರವಿವಾರ ಭಾರತೀಯ ದ್ವಿಚಕ್ರ ವಾಹನ ಮೆಕಾನಿಕ್ ಮತ್ತು ಅಟೋಮೊಬೈಲ್ಸ್ ವೆಲ್‌ಫೇರ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಮೆಕಾನಿಕ್ ಮೀಟ್ 2025 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿಗಾಗಿ ಸರ್ಕಾರ ಸದಾ ಬದ್ಧವಾಗಿದೆ. ಅಸಂಘಟಿತ ವರ್ಗದ




ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗು ಇತರೆ ಸಂಬಂಧಿತ ಕಾರ್ಮಿಕರು ಬಹು ಸಂಖ್ಯೆಯಲ್ಲಿದ್ದು, ವರಿಗೆ ಸಾಮಾಜಿಕ ಭದ್ರೆ ಹಾಗು ಕಲ್ಯಾಣ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಸರ್ಕಾರವು ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕಲ್ಯಾಣ ಯೋಜನೆಯನ್ನು ರೂಪಿಸಿದ್ದು, ಕಾರ್ಮಿಕರ ಸಾಮಾಜಿಕ ಭದ್ರತೆಗಾಗಿ ಸದಾ ಸಿದ್ಧವಾಗಿದೆ ಎಂದು ತಿಳಿಸಿದರು. ಹಿರೇಮಠ ಸಂಸ್ಥಾನದ ಪೀಠಾದಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಸಾನಿಧ್ಯವಹಿಸಿ ಮಾತನಾಡಿದು. ತಪೋವನ ಅಟೋ ಸೆಂಟರ್‌ನ ಮಾಲಿಕ ಅಟೊಮೊಬೈಲ್ ವೆಲ್‌ಫೇರ್ ಟ್ರಸ್ಟ್ ಅಧ್ಯಕ್ಷ ವಿಲಾಸ ಬಕ್ಕಾ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಮುಖರಾದ ಪ್ರಕಾಶ ಮಾಶೆಟ್ಟೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇವೇಳೆ ಸುಮಾರು 14 ಅಟೋಮೋಬೈಲ್ಸ್‌ಗಳ ವತಿಯಿಂದ ಪ್ರದರ್ಶನ ಮತ್ತು ಮಾರಾಟ ನಡೆಯಿತು.

ಕಾರ್ಯಕ್ರಮದಲ್ಲಿ ಕಾರ್ಮಿಕ ಅಧಿಕಾರಿ ಮಂಜುನಾಥ, ಮಹಮದ್ ಖಾಸಿಮ್, ಶೇಖ್ ಫಿಯಾಜ್, ಮೆಕಾನಿಕ್ ಪ್ರವೀಣ, ಭಗವಾನ ಠಾಕೂರ, ಮೆಕಾನಿಕ್ ಸಚೀನ, ವಿಕ್ರಮ, ಜಗದೀಶ ಬಕ್ಕಾ ಉಪಸ್ಥಿತರಿದ್ದರು.

ಪ್ರಕಾಶ ಮಾಶೆಟ್ಟೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಜಗದೀಶ ಬಕ್ಕಾ ವಂದಿಸಿದರು.

# ಮಣ್ಣಿನ ಗಣಪನ ಪೂಜಿಸಲು ಪರಿಸರ ಸಚಿವ ಈಶ್ವರ ಖಂಡ್ರೆ ಮನವಿ

ಬೀದರ, ಅ 18 : ಭಾದ್ರಪದ ಶುಕ್ಲ ಚತುರ್ಥಿಯಂದು ಮನೆ ಮನೆಯಲ್ಲೂ ಪೂಜೆಗೊಳ್ಳುವ ಗಣೇಶ ಪರಿಸರ (ಮಣ್ಣಿನಿಂದ)ದಿಂದಲೇ ಹುಟ್ಟಿದ ದೇವರಾಗಿದ್ದು, ಪರಿಸರ ಸ್ನೇಹಿಯಾದ ಬಣ್ಣರಹಿತ ಮಣ್ಣಿನ ಮೂರ್ತಿಗಳನ್ನೇ ಪೂಜಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ ಬಿ ಖಂಡ್ರೆ ನಾಡಿನ ಜನತೆಗೆ ಮನವಿ ಮಾಡಿದ್ದಾರೆ.

ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ಚಿನ್ನದಿಂದ, ಬೆಳ್ಳಿಯಿಂದ ಅಥವಾ ಮಣ್ಣಿನಿಂದ ಮಾಡಿದ ಮೂರ್ತಿಗಳನ್ನು ಪೂಜಿಸುವುದು ಅನೂಚಾನವಾಗಿ ನಡೆದುಬಂದಿರುವ ಸಂಪ್ರದಾಯ.

ಆದರೆ ಇತ್ತೀಚಿನ ವರ್ಷಗಳಲ್ಲಿ ನೀರಲ್ಲಿ ಕರಗದ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ವಿಷಕಾರಿಯಾದ ಭಾರಲೋಹಯುಕ್ತ ರಾಸಾಯನಿಕ ಬಣ್ಣ ಲೇಪಿತ –ಪಿಓಪಿ ಮೂರ್ತಿಗಳ ಸಂಖ್ಯೆ ಹೆಚ್ಚಾಗಿದ್ದು, ಇದರ ವಿಸರ್ಜನೆಯಿಂದ ಜಲಚರಗಳು, ಪಶುಪಕ್ಷಿಗಳ ಸಾವಿಗೆ ಕಾರಣವಾಗುತ್ತಿದೆ ಎಂದೂ ತಿಳಿಸಿದ್ದಾರೆ. ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ) ಕಾಯಿದೆ 1974ರ ಕಲಂ 33(ಎ) ಅಡಿಯಲ್ಲಿ ರಾಜ್ಯದ ನದಿ, ಸರೋವರ, ಕೆರೆ, ಕಟ್ಟೆ, ಬಾವಿ ಸೇರಿದಂತೆ ಯಾವುದೇ ಜಲ ಮೂಲದಲ್ಲಿ ಪಿಓಪಿ ಮೂರ್ತಿಗಳ ವಿಸರ್ಜನೆ



ನಿಷೇಧಿಸಲಾಗಿದೆ. ಪ್ರಜ್ಞಾವಂತ, ಜವಾಬ್ದಾರಿಯುತ ನಾಗರಿಕರು, ಧಾರ್ಮಿಕರು ಪರಿಸರ ಸ್ನೇಹಿ ಮಣ್ಣಿನ ಗಣಪತಿ ಮೂರ್ತಿಗಳನ್ನು ಮಾತ್ರವೇ ಪೂಜಿಸಿ ಪರಿಸರ ಉಳಿಸುವಂತೆ ಈಶ್ವರ ಖಂಡ್ರೆ ಮನವಿ ಮಾಡಿದ್ದಾರೆ.

ಹೈಕೋರ್ಟ್ ಆದೇಶ: ಪಿಓಪಿ ಗಣೇಶ ವಿಗ್ರಹಗಳನ್ನು ಕ್ಯಾಲ್ಷಿಯಂ, ಸಲ್ಫೇಟ್, ಹೆಮಿಹೈಡ್ರೇಟ್ ಯುಕ್ತ ಪುಡಿಯಿಂದ ತಯಾರಿಸಲಾಗುತ್ತದೆ. ಇದರಲ್ಲಿ ಗಂಧಕ, ರಂಜಕ, ಜಿಪ್ಸಮ್ ಮತ್ತು ಮ್ಯಾಗ್ನೀಷಿಯಂ ಸೇರಿದಂತೆ ಅನೇಕ ಅಪಾಯಕಾರಿ ಅಂಶಗಳಿರುತ್ತವೆ. ಇಂತಹ ಮೂರ್ತಿಗಳಿಗೆ ಪಾದರಸ, ಕ್ಯಾಡ್ಮಿಯಂ, ಸೀಸ ಮತ್ತು ಇಂಗಾಲ ಒಳಗೊಂಡ ರಾಸಾಯನಿಕ ಬಣ್ಣ ಲೇಪಿಸಲಾಗುತ್ತದೆ. ಇದನ್ನು ಕೆರೆ, ಬಾವಿ, ನದಿಯಲ್ಲಿ ವಿಸರ್ಜಿಸಿದಾಗ ಭಾರ ಲೋಹ ಕರಗಿ ಜನ ಜಾನುವಾರುಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಜಲಚರಗಳ ಸಾವಿಗೆ ಕಾರಣವಾಗುತ್ತದೆ ಎಂದು ತಿಳಿಸಿದ್ದಾರೆ. ಹಬ್ಬದ ಸಂಭ್ರಮದಲ್ಲಿ ಯಾವುದೇ ಸಮುದಾಯದ ಧಾರ್ಮಿಕ ಭಾವನೆಗಳಿಗೆ ನೋವು ಉಂಟು ಮಾಡುವ ಉದ್ದೇಶ ಸರ್ಕಾರಕ್ಕೆ ಇಲ್ಲ. ಆದರೆ ಪರಿಸರಕ್ಕೆ ಮಾರಕವಾದ ಪಿಓಪಿ ಮೂರ್ತಿಗಳ ತಯಾರಿಕೆ, ಸಾಗಾಟ, ಮಾರಾಟ ಮತ್ತು ವಿಸರ್ಜನೆ ನಿಷೇಧಿಸಿ 2023ರ ಸೆ.15ರಂದು ಸರ್ಕಾರಿ ಆದೇಶ ಹೊರಡಿಸಲಾಗಿದೆ, ಇತ್ತೀಚೆಗೆ ರಾಜ್ಯ ಹೈಕೋರ್ಟ್ ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ನಿರ್ದೇಶನ ನೀಡಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಪರಿಸರ ಸ್ನೇಹಿಯಾದ ಮಣ್ಣಿನ ಮೂರ್ತಿಗಳನ್ನು ಪೂಜಿಸಿ ಪರಿಸರ ಉಳಿಸುವಂತೆ ಕೋರಿದ್ದಾರೆ.

# ಧಾರಾಕಾರ ಮಳೆ ಪ್ರವಾಹದ ಮುನ್ನೆಚ್ಚರಿಕೆ

ಮಲ್ಲಮ್ಮನುಡಿವಾರ್ತೆಬಾಗಲಕೋಟೆ,ಆ.18– ಹಿಡಕಲ್ ಜಲಾನಯನ ಪ್ರದೇಶದಲ್ಲಿ ಧಾರಾಕಾರ ಮಳೆ ಆಗುತ್ತಿರುವ ಹಿನ್ನಲೆಯಲ್ಲಿ ಹಿಡಕಲ್ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ಒಳಹರಿವು ಹರಿದು ಬರುತ್ತಿದೆ. ಜಲಾಶಯ ಶೇ.99.8 ರಷ್ಟು ಭರ್ತಿಯಾಗಿರುತ್ತದೆ. ಜಲಾಶಯಕ್ಕೆ ಬರುವ ನೀರಿನ ಪ್ರಮಾಣ ಗಣನೀಯವಾಗಿ ಏರತೊಡಗಿದ್ದು, ಜಲಾಶಯದ ಗರಿಷ್ಟ ಮಟ್ಟ 2175 ಅಡಿ ಇದೆ. ಆಗಸ್ಟ 18 ರಂದು ಬೆಳಿಗ್ಗೆ 8.30ಕ್ಕೆ ಜಲಾಶಯದ ಮಟ್ಟ 2174.667 ಅಡಿಗಳು ಇದ್ದು, ಜಲಾಶಯಕ್ಕೆ ಒಳಹರಿವಿನ ಪ್ರಮಾಣ 13337 ಕ್ಯೂಸೆಕ್ಸ್ ಇದೆ. ಘಟಪ್ರಭಾ ನದಿಗೆ 6000 ಕ್ಯೂಸೆಕ್ಸ್ ವರೆಗೆ ನೀರನ್ನು ನದಿ ಪಾತ್ರಕ್ಕೆ ಬೀಡಲಾಗುತ್ತಿದೆ. ಜಲಾಶಯದ ಒಳಹರಿವು ಹೆಚ್ಚಾದಂತೆ ಮತ್ತೆ 20,000 ಕ್ಯೂಸೆಕ್ಸ್ ವರೆಗೆ ನೀರನ್ನು ನದಿ ಪಾತ್ರಕ್ಕೆ ಹರಿಬಿಡಲಾಗುತ್ತಿದೆ. ಆದ್ದರಿಂದ ಘಟಪ್ರಭಾ ನದಿ ದಡದಲ್ಲಿ ಬರುವ ಎಲ್ಲ ಗ್ರಾಮಗಳ ಗ್ರಾಮಸ್ಥರು ತಮ್ಮ ಜಾನುವಾರುಗಳ ಸಮೇತ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಚುಳಕಿನಾಲಾ ಜಲಾಶಯದಿಂದ ಮಾಂಜ್ರಾ ನದಿಗೆ ನೀರು ಬಿಡುಗಡೆ: ಸಾರ್ವಜನಿಕರು ಎಚ್ಚರ ವಹಿಸಲು ಸೂಚನೆ

ಬೀದರ, ಅ 18 :ಬಸವಕಲ್ಯಾಣ ತಾಲೂಕಿನ ಮುಸ್ತಾಪೂರ ಗ್ರಾಮದ ಹತ್ತಿರವಿರುವ ಚುಳಕಿನಾಲಾ ಜಲಾಶಯ ಮೇಲ್ಭಾಗದ ಪ್ರದೇಶದಲ್ಲಿ ವ್ಯಾಪಕವಾಗಿ ನಿರಂತರವಾಗಿ ಮಳೆಯಾಗುತ್ತಿರುವುದರಿಂದ ಜಲಾಶಯದ ಒಳಹರಿವು ಹೆಚ್ಚಾಗುತ್ತಲಿರುವುದರಿಂದ ಜಲಾಶಯವು ಯಾವುದೇ ಕ್ಷಣದಲ್ಲಿ ಭರ್ತಿಯಾಗುವ ಹಂತದಲ್ಲಿರುತ್ತದೆ. ಸದರಿ ಜಲಾಶಯದ ಗರಿಷ್ಠ ಮಟ್ಟ ತಲುಪುವ ಸಂಭವ ಕಂಡಲ್ಲಿ ತಕ್ಷಣ ಚುಳಕಿನಾಲಾ ಜಲಾಶಯದ ಗೇಟುಗಳನ್ನು ತೆರೆದು ನದಿಗೆ ನೀರು ಬಿಡಲಾಗುವುದು.

ಆದಕಾರಣ ಜಲಾಶಯದ ಕೆಳಭಾಗದ ಗ್ರಾಮಗಳಿಗೆ ನದಿ ಪ್ರವಾಹದಿಂದ ತೊಂದರೆ ಉಂಟಾಗಬಹುದಾಗಿದೆ. ನದಿಯ ಕೆಳಭಾಗದ ತಳಪಾತ್ರದ ಅಕ್ಕಪಕ್ಕದ ಮುಚಾಳಂಬ, ಗೋರ್ಟ (ಬಿ), ರಾಚಪ್ಪ ಗೌಡಗಾಂವ, ಕೋಟಗೇರಾ, ಕುಟೆಗಾವ, ಲಾಧ, ಇಂಚೂರ್, ಹೊನ್ನಳ್ಳಿ, ಮೋರಂಬಿ ಗ್ರಾಮದ ಜನರು, ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು, ನದಿಯಲ್ಲಿ ಇಳಿಯುವುದಾಗಲಿ, ಬಟ್ಟೆ ಒಗೆಯುವುದಾಗಲಿ, ಈಜುವುದಾಗಲಿ, ದನಕರುಗಳಿಗೆ ನೀರು ಕುಡಿಸುವುದಾಗಲಿ ಮಾಡಬಾರದು. ನದಿ ಪಾತ್ರದಲ್ಲಿರುವ ಸಣ್ಣ ನೀರಾವರಿ ಇಲಾಖೆ ಮತ್ತು ಇನ್ನಿತರ ಯಾವುದೇ ಇಲಾಖೆಗಳಿಗೆ ಸಂಬಂಧಪಟ್ಟ ಆಸ್ತಿಗಳಿದ್ದಲ್ಲಿ ಸಂರಕ್ಷಿಸಿಕೊಳ್ಳಲು ಮುಂಜಾಗ್ರತೆ ವಹಿಸಿಕೊಳ್ಳುವಂತೆ ಬೀದರ ಕನೀನಿನಿ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗಲಿದ ಗಣ್ಯರಿಗೆ ಉಭಯ ಸದನಗಳಲ್ಲಿ ಸಂತಾಪ ಸೂಚನೆ



ಬೆಂಗಳೂರು, ಆ. 18:ಇಂದು ವಿಧಾನಸಭೆ ಮತ್ತು ವಿಧಾನ ಪರಿಷತ್ ನಲ್ಲಿ ಜ್ಞಾನದಾಸೋಹಿ ಡಾ:ಶರಣಬಸವಪ್ಪ ಅಪ್ಪ ಹಾಗೂ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ಶ್ರೀ ಕುಮಾರ ಚಂದ್ರಶೇಖರನಾಥ ಸ್ವಾಮೀಜಿಗಳು ನಿಧನ ಹೊಂದಿರುವುದನ್ನು ತಿಳಿಸಿ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಫರೀದ್ ಅವರು ವಿಧಾನ ಸಭೆಯಲ್ಲಿ ಹಾಗೂ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ವಿಧಾನಪರಿಷತ್ ನಲ್ಲಿ ಸಂತಾಪ ನಿರ್ಣಯವನ್ನು ಮಂಡಿಸಿ ಸಂತಾಪ ವ್ಯಕ್ತಪಡಿಸಿದರು. ವಿಧಾನ ಸಭೆಯಲ್ಲಿ ಸಚಿವರಾದ ಶಿವಾನಂದ ಪಾಟೀಲ್ ರವರು ಡಾ:ಶರಣಬಸವಪ್ಪ ಅಪ್ಪ ಹಾಗೂ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ಶ್ರೀ ಕುಮಾರ ಚಂದ್ರಶೇಖರನಾಥ ಸ್ವಾಮೀಜಿಗಳು ಸಂತಾಪ ಸೂಚನೆಗೆ ಬೆಂಬಲ ವ್ಯಕ್ತಪಡಿಸಿ ಡಾ:ಶರಣಬಸವಪ್ಪ ಅಪ್ಪ ಅವರು 14–11–1935ರಂದು ಜನಿಸಿದ್ದು, ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದಿಂದ ತತ್ವಶಾಸ್ತ್ರ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದು, ನಂತರ ಅದೇ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ಹಾಗೂ ಪ್ರತಿಷ್ಠಿತ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು, ಶರಣಬಸವೇಶ್ವರ ದೇವಸ್ಥಾನದ ದಾಸೋಹ ಸಂಸ್ಥಾನದ 8ನೇ ಪೀಠಾಧಿಪತಿಯಾಗಿದ್ದ ಶ್ರೀಯುತರು ಆಧ್ಯಾತ್ಮ ವಿಷಯ ಸೇರಿದಂತೆ ಹಲವು ವಿಷಯಗಳಲ್ಲಿ ಅಪಾರ ಜ್ಞಾನ ಹೊಂದಿದ್ದರು. ಧಾರ್ಮಿಕ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುವುದರ ಜೊತೆಗೆ ಶ್ರೀಯುತರು ಶರಣಬಸವೇಶ್ವರ ವಿಶ್ವವಿದ್ಯಾಲಯ, ಶರಣಬಸವೇಶ್ವರ ರೆಸಿಡೆನ್ಸಿಯಲ್ ಪಬ್ಲಿಕ್ ಸ್ಕೂಲ್, ಅಪ್ಪ ಪಬ್ಲಿಕ್ ಸ್ಕೂಲ್, ಗೋದುತಾಯಿ ಮಹಿಳಾ ಕಾಲೇಜು, ಎಂಜಿನಿಯರಿಂಗ್ ಕಾಲೇಜು ಸೇರಿದಂತೆ 60 ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಸುವ ಮೂಲಕ ಕಲಬುರಗಿಯಲ್ಲಿ ಶೈಕ್ಷಣಿಕ ಕ್ರಾಂತಿಯನ್ನೇ ಮಾಡಿದರು. 1963 ರಲ್ಲಿ ಅಖಿಲ ಭಾರತ ಶಿವಾನುಭವ ಮಂಟಪ ಸ್ಥಾಪನೆ, ದಾಸೋಹ ಜ್ಞಾನರತ್ನ ಸಾಹಿತಿಕ ಪಾಕ್ಷಿಕ ಪತ್ರಿಕೆಗಳನ್ನು ಪ್ರಾರಂಭಿಸಿದರು. ಗುಲ್ಬರ್ಗಾ ವಿಶ್ವವಿದ್ಯಾಲಯದ ಗೌರವ ಡಾ–ಕ್ಟರೇಟ್ ಪ್ರಶಸ್ತಿಗಳಲ್ಲದೇ ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

ಶ್ರೀ ಚಂದ್ರಶೇಖರನಾಥ ಸ್ವಾಮೀಜು ಅವರು ದಿ: 10–02–1945ರಂದು ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆಯ ಹಳ್ಳಿಯೊಂದರಲ್ಲಿ ಜನಿಸಿದ್ದರು. ಬಿ.ಕಾಂ ಪದವೀಧರರಾಗಿದದ ಶ್ರೀಯುತರು ಬೆಂಗಳೂರಿನ ತಿರುಚ್ಚಿ ಕೈಲಾಸಾಶ್ರಮದಲ್ಲಿ ಸಂಸ್ಕೃತ ವೇದ ಅಧ್ಯಯನ ಮಾಡಿದ್ದರು. 1968ರಲ್ಲಿ ಆದಿಚುಂಚನಗಿರಿ ಮಠದಲ್ಲಿ ಸನ್ಯಾಸ ದೀಕ್ಷೆ ಪಡೆದಿದ್ದ ಅವರು 1983ರಲ್ಲಿ ಕೆಂಗೇರಿ ಬಳಿ 10 ಎಕರೆ ಜಮೀನಿನಲ್ಲಿ ಶ್ರೀ ಗುರು ಜ್ಞಾನ ಕೇಂದ್ರ ಟ್ರಸ್ಟ್ ಹೆಸರಿನಲ್ಲಿ ಪತ್ಯೇಕವಾಗಿ ಶಾಲೆ ಕಾಲೇಜು ಪ್ರಾರಂಭಿಸಿದ್ದರು. ಶ್ರೀಯುತರು ಕಲ್ಯಾಣ ಕರ್ನಾಟಕದ ಬೆಳಕು ಡಾ: ಶರಣಬಸವಪ್ಪ ಅಪ್ಪ ಅವರು ದಿ:14–08–2025ರಂದು ನಿಧನ ಹೊಂದಿರುತ್ತಾರೆ. ಇವರ ನಿಧನವು ಇಡೀ ರಾಜ್ಯವು ಕಂಬನಿ ಮಿಡಿದಿದೆ. ಆಧ್ಯಾತ್ಮಿಕ ಗುರುಗಳಾದ ಶ್ರೀ ಚಂದ್ರಶೇಖರನಾಥ ಸ್ವಾಮೀಜಿ ಅವರು ದಿ:16–08–2025ರಂದು ನಿಧನ ಹೊಂದಿರುತ್ತಾರೆ. ಇಬ್ಬರು ಪರಮಪೂಜ್ಯರನ್ನು ಕಳೆದುಕೊಂಡ ಕರ್ನಾಟಕ ಬಡವಾಗಿದೆ ಎಂದು ತಿಳಿಸಿ ಈರ್ವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ತಿಳಿಸಿ ಸಂತಾಪಕ್ಕೆ ತಮ್ಮ ಬೆಂಬಲ ವ್ಯಕ್ತಪಡಿಸಿದರು. ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್. ಅಶೋಕ್ ಇಬ್ಬರು ಶರಣರು ವಿದ್ಯಾ ಹಾಗೂ ಅನ್ನದಾಸೋಹಕ್ಕೆ ಹಾಗೂ ಜನತೆಯ ದು:ಖ ದುಮ್ಮಾನಗಳಿಗೆ ಸದಾ ಸ್ಪಂದಿಸುತ್ತಿದ್ದರು. ತಮ್ಮ ಬೋಧನೆಗಳ ಮೂಲಕ ಜನರ ಸಮಸ್ಯೆಗಳಿಗೆ ತಮ್ಮ ಬೋಧನೆಗಳ ಮೂಲಕ ಜನರ ಸಮಸ್ಯೆಗಳಿಗೆ ಪರಿಹಾರ ನೀಡುತ್ತಿದ್ದರು. ಶರಣಬಸವಪ್ಪ ಅಪ್ಪ ಅವರು ಶರಣಬಸವೇಶ್ವರ ದೇವಸ್ಥಾನದ ದಾಸೋಹ ಸಂಸ್ಥಾನದ 8ನೇ ಪೀಠಾಧಿಪತಿಯಾಗಿದ್ದರು. 60ಕ್ಕೂ ಹೆಚ್ಚು ಶಾಖೆಗಳನ್ನು ತೆರೆಯುವುದರ ಮೂಲಕ ಅಭೂತ ಸಾಧನೆ ಮಾಡಿದ್ದರು. 26 ಎಕರೆ ವಿಸ್ತೀರ್ಣದಲ್ಲಿ ಗೋಶಾಲೆ ನಿರ್ಮಾಣ, ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಯನ್ನು ಮಾಡಿದ್ದಾರೆ.

ಚಂದ್ರಶೇಖರ ಸ್ವಾಮೀಜಿ ಅವರು 1968ರಲ್ಲಿ ಆದಿಚುಂಚನಗಿರಿ ಮಠದಲ್ಲಿ ಸನ್ಯಾಸ ದೀಕ್ಷೆ ಪಡೆದಿದ್ದ ಅವರು 1983ರಲ್ಲಿ ಕೆಂಗೇರಿ ಬಳಿ 10 ಎಕರೆ ಜಮೀನಿನಲ್ಲಿ ಶ್ರೀ ಗುರು ಜ್ಞಾನಕೇಂದರ ಟ್ರಸ್ಟ್ ಹೆಸರಿನಲ್ಲಿ ಪ್ರತ್ಯೇಕವಾಗಿ ಶಾಲೆ, ಕಾಲೇಜು ಪ್ರಾರಂಭಿಸಿದ್ದರು. 2002ರಲ್ಲಿ ಅದು ವಿಶ್ವ ಒಕ್ಕಲಿಗರ ಸಂಸ್ಥಾನ ಮಠ ಎಂದು ಪ್ರಚಾರಪಡೆಯಿತು. ಸನಾತನ ಸಂಸ್ಕೃತಿ ಹಾಗೂ ಪರಂಪರೆಗಳ ರಕ್ಷಕರಾಗಿದ್ದ ಶ್ರೀಯುತರು ಹಲವು ಸಾಮಾಜಿಕ ಚಳುವಳಿಗಳ ನೇತೃತ್ವ ವಹಿಸಿದ್ದರು. ಇಬ್ಬರೂ ಕೂಡ ಸಮಾಜಕ್ಕೆ ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ. ಇವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ತಿಳಿಸಿ ಸಂತಾಪಕ್ಕೆ ಬೆಂಬಲ ವ್ಯಕ್ತಪಡಿಸಿದರು. ವಿಧಾನಸಭೆರುಲ್ಲಿ ಕೃಷಿ ಸಚಿವ ಚೆಲುವರಾಯಸ್ವಾಮಿ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಶಾಸಕರುಗಳಾದ ಅರವಿಂದ ಬೆಲ್ಲದ್, ಶರಣ್‌ಕುಮಾರ್ ಕುಂದಾಪುರ, ಅರಗ ಜ್ಞಾನೇಂದ್ರ, ಅಲ್ಲಮಪ್ರಭು ಪಾಟೀಲ್, ಶರತ್ ಬಚ್ಚೇಗೌಡ, ಜಿ.ಟಿ ದೇವೇಗೌಡ, ಡಾ ಉಮೇಶ್ ಜಿ. ಜಾಧವ್, ಹಾಗೂ ಇನ್ನಿತರ ಶಾಸಕರು ಡಾ:ಶರಣಬಸಪ್ಪ ಅಪ್ಪ ಹಾಗೂ ಚಂದ್ರಶೇಖರ ಸ್ವಾಮೀಜಿ ಇವರುಗಳು ಸಂತಾಪ ನಿರ್ಣಯಕ್ಕೆ ಬೆಂಬಲ ವ್ಯಕ್ತಪಡಿಸಿ ತಮ್ಮ ಸಂತಾಪ ವ್ಯಕ್ತಪಡಿಸಿದರು. ವಿಧಾನಪರಿಷತ್ ನಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿರಾದ ಡಾ: ಶರಣ್ ಪ್ರಕಾಶ್ ರುದ್ರಪ್ಪ ಪಾಟೀಲ್, ಅರಣ್ಯ ಜೀವಿಶಾಸ್ತ ಹಾಗೂ ಪರಿಸರ ಸಚಿವರಾದ ಈಶ್ವರ್ ಖಂಡ್ರೆ, ಪರಿಷತ್ ಸದಸ್ಯರಾದ ತಳವಾರ ಸಾಬಣ್ಣ, ದಿನೇಶ್ ಗೂಳೀಗೌಡ, ಶಶಿಲ್ ನಮೋಶಿ ಅವರು ಬೆಂಬಲ ವ್ಯಕ್ತಪಡಿಸಿ ತಮ್ಮ ಸಂತಾಪವನ್ನು ವ್ಯಕ್ತಪಡಿಸಿದರು. ನಂತರ ಉಭಯ ಸದನಗಳಲ್ಲಿ ಮೃತರ ಗೌರವಾರ್ಥ ಒಂದು ನಿಮಿಷ ಮೌನಾಚರಣೆ ಮಾಡಿ, ನಂತರ ಸದನಲ್ಲಿ ಪ್ರಸ್ತಾಪಿತ ಸಂತಾಪ ಸೂಚನೆಯ್ನು ಮೃತಗಣ್ಯರ ಕುಟುಂಬಕ್ಕೆ ಕಳುಹಿಸಲಾಯಿತು.

# ಯಂಗ್ ಇಂಡಿಯಾ ಟ್ಯಾಂಗ್ರೆಸ್ ಪಾರ್ಟಿಗೆ ಚುನಾವಣಾ ಆಯೋಗದಿಂದ ನೋಟಿಸ್

ಬೀದರ, ಅ 18 : ಯಂಗ್ ಇಂಡಿಯಾ ಟ್ಯಾಂಗ್ರೆಸ್ ಪಾರ್ಟಿಗೆ (ಯಲ್ಲಮ್ ಗಲ್ಲಿ, ತುಗಾಂವ (ಹೆಚ್), ತಾಲ್ಲೂಕಾ ಭಾಲ್ಕಿ ಜಿಲ್ಲೆ ಬೀದರ.) ಚುನಾವಣಾ ಆಯೋಗದಿಂದ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ಬೀದರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚುನಾವಣಾ ಆಯೋಗದಲ್ಲಿ 1951ರ ಜನತಾ ಪ್ರಾತಿನಿಧ್ಯ ಕಾಯ್ದೆ ಸೆಕ್ಷನ್ 29ಎ ರನ್ವಯ ಸಂಘ, ಸಂಸ್ಥೆಯನ್ನು ರಾಜಕೀಯ ಪಕ್ಷವಾಗಿ ನೊಂದಾಯಿಸಲಾಗುತ್ತದೆ. ನೊಂದಾಯಿಸಿದ ಅಂತಹ ಪಕ್ಷಗಳು ಚುನಾವಣೆಯಲ್ಲಿ ಭಾಗವಹಿಸಬೇಕು. ಆದರೆ ಕಳೆದ 6 ವರ್ಷಗಳಿಂದ ಯಾವುದೇ ಜನಪ್ರತಿನಿಧಿಗಳ ಸದನಗಳಿಗೆ, ವಿಧಾನಸಭೆ, ಉಪಚುನಾವಣೆಯಲ್ಲಿ ಯಾವುದೇ ಅಭ್ಯರ್ಥಿಗಳನ್ನು "Young India Tangress Party" (ಯಲ್ಲಮ್ ಗಲ್ಲಿ, ತುಗಾಂವ (ಹೆಚ್), ತಾಲ್ಲೂಕಾ ಭಾಲ್ಕಿ ಜಿಲ್ಲೆ ಬೀದರ.) ಪಕ್ಷದಿಂದ ಅಭ್ಯರ್ಥಿಯನ್ನಾಗಿ ಮಾಡದಿರುವುದು ಕಂಡು ಬಂದಿದೆ.

ಸತತ ಆರು ವರ್ಷಗಳ ಕಾಲ ನೊಂದಾಯಿತ ಮಾನ್ಯತೆ ಪಡೆ–ಯದ ಪಕ್ಷದಿಂದ ಜನ ಪ್ರತಿನಿಧಿಗಳ ಸದನಗಳಿಗೆ ನಡೆಯುವ ಚುನಾವಣೆ, ವಿಧಾನಸಭಾ, ಉಪ ಚುನಾವಣೆಗಳಲ್ಲಿ, ಅಭ್ಯರ್ಥಿಗಳನ್ನು ನಿಲ್ಲಿಸದಿದ್ದಲ್ಲಿ ಅಂತಹ ಗುರುತಿಸಲಾದ ರಾಜಕೀಯ ಪಕ್ಷಗಳನ್ನು ನೋಂದಾಯಿತ ಪಕ್ಷಗಳ ಪಟ್ಟಿಯಿಂದ ಕೈಬಿಡಲು ಸಂವಿಧಾನದ 324ನೇ ವಿಧಿ ಮತ್ತು 1951ರ ಜನತಾ ಪ್ರಾತಿನಿಧ್ಯ ಕಾಯಿದೆ ಸೆಕ್ಷನ್ 29ಎ ರಡಿ ತೆಗೆದು ಹಾಕಲು ಅಧಿಕಾರ ನೀಡಲಾಗಿದೆ.

ನೋಂದಾಯಿತ ರಾಜಕೀಯ ಪಕ್ಷಗಳು ಮುಂದುವರೆಯಲು ಬಯಸಿದ್ದಲ್ಲಿ ಪಕ್ಷದ ಅಧ್ಯಕ್ಷರು ಅಥವಾ ಪ್ರಧಾನ ಕಾರ್ಯದರ್ಶಿಯಿಂದ ಮತ್ತು ಪಕ್ಷ ಅಸ್ತಿತ್ವದಲ್ಲಿ ಮುಂದುವರೆಯಲು ಎಲ್ಲಾ ದಾಖಲೆಗಳೊಂದಿಗೆ ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ರವರ ಕಛೇರಿ ದಿನಾಂಕ: 01–09–2025 ರೊಳಗಾಗಿ ಸಲ್ಲಿಸಬೇಕು ಯಾವುದೇ ಉತ್ತರ ಬಾರದಿದ್ದಲ್ಲಿ ಆಯೋಗವು ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಅವರು ತಿಳಿಸಿದ್ದಾರೆಂದು ಬೀದರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಭಿನ್ನ ಕೆನೆಪದರ ನೀತಿಯಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಅನ್ಯಾಯ: ನಮೋಶಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.18: ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಿಂದುಳಿದ ವರ್ಗಳಿಗೆ ಮಿಸಲಾತಿ ನೀಡುವಾಗ ಭಿನ್ನ ಕೆನೆಪದರ ನೀತಿ ಅನ್ವಯಿಸುತ್ತಿರುವುದರಿಂದಾಗಿ ವೇತನದಾರರ ಮಕ್ಕಳು ಅಖಿಲ ಭಾರತ ಹಾಗೂ ರಾಜ್ಯ ಕೋಟಾದಡಿ ವೈದ್ಯಕೀಯ, ಎಂಜಿನಿಯರಿಂಗ್ ಕೋಟಾದಡಿ ಪ್ರವೇಶ ಪಡೆಯುವಾಗ ಭಾರಿ ತಾರತಮ್ಯ ಅನುಭವಿಸುತ್ತಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಅವರು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ವಿಧಾನಸಭೆಯ ಅಧಿವೇಶನದಲ್ಲಿ ಸೋಮವಾರ ಶೂನ್ಯವೇಳೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಅವರು, ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು (ಎನ್‌ಟಿಎ) ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಪಶುವೈದ್ಯಕೀಯ,, ಹೋಮಿಯೋಪಥಿ ಕೋರ್ಸಗಳ ಪ್ರವೇಶಕ್ಕಾಗಿ ಪ್ರತಿ ವರ್ಷ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ



(ನೀಟ್), ಐಐಟಿ ಸೇರಿದಂತೆ ಇಂಜಿನಿಯರಿಂಗ್ ಕೋರ್ಸಗಳಿಗೆ ಜಂಟಿ ಪ್ರವೇಶ ಪರೀಕ್ಷೆ (ಜೆಇಇ) ನಡೆಸುತ್ತದೆ. ನೀಟ್, ಜೆಇಇ ಸೇರಿದಂತೆ ರಾಷ್ಟಮಟ್ಟದ ಪ್ರವೇಶ ಪರೀಕ್ಷೆಗಳನ್ನು ಬರೆದು ವಿವಿಧ ಕೋರ್ಸ್ಗಳಿಗೆ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಪೋಷಕರ ವೇತನ ಆದಾಯ 8 ಲಕ್ಷಕ್ಕಿಂತ ಹೆಚ್ಚಿದ್ದರೂ ಅಂತಹ ಮಕ್ಕಳಿಗೆ ಅಖಿಲ ಭಾರತ ಕೋಟಾದ ಅಡಿ ಪ್ರವೇಶ ನೀಡಲಾಗುತ್ತದೆ. ಅದೇ ವಿದ್ಯಾರ್ಥಿಗಳು ರಾಜ್ಯದ ಕೋಟಾದಡಿ ಪ್ರವೇಶ ಪಡೆಯುವಾಗ ಕೆನೆಪದರ ನೀತಿ ಅನ್ವಯಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿನ ಶಿಕ್ಷಣ ಮತ್ತು ಉದ್ಯೋಗ ಮೀಸಲಾತಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ–1ಕ್ಕೆ ಕೆನೆಪದರ ಅನ್ವಯವಾಗುವುದಿಲ್ಲ. ಆದರೆ, 2ಎ, 2ಬಿ, 3ಎ, ಮತ್ತು 3ಬಿ ಪ್ರ–ವರ್ಗದಲ್ಲಿ ಬರುವ ಇತರೆ ಹಿಂದುಳಿದ ಜಾತಿಗಳಿಗೆ ಕೆನೆಪದರ ಅನ್ವಯವಾಗುತ್ತದೆ. ಹೀಗಾಗಿ, ?8 ಲಕ್ಷಕ್ಕಿಂತ ಹೆಚ್ಚು ವಾರ್ಷಿಕ ಆದಾಯ ಪಡೆಯುವ ನೌಕರರ ಮಕ್ಕಳು ವೈದ್ಯಕೀಯ, ಎಂಜಿನಿಯರಿಂಗ್ಕೋರ್ಸ್ಗಳಿಗೆ ಪ್ರವೇಶ ಪಡೆಯಲು ಸಾಮಾನ್ಯ ವರ್ಗದಡಿಯೇ ಸ್ಪರ್ಧಿಸುವ ಪರಿಸ್ಥಿತಿ ಇದೆ. ಕೇಂದ್ರ ಸರ್ಕಾರದ ನಿಯಮಗಳ ಪ್ರಕಾರ ಹಿಂದುಳಿದ ಕೆನೆಪದರಕ್ಕೆ ಕೃಷಿ ಹಾಗೂ ವೇತನ ಆದಾಯ ಪರಿಗಣಿಸುವುದಿಲ್ಲ. ಕೇಂದ್ರ ಸರ್ಕಾರದ 1993ರ ಅಧಿಸೂಚನೆಯಂತೆ ರಾಜ್ಯವೂ ಕೃಷಿ ಮತ್ತು ವೇತನ ಆದಾಯ ಹೊರಗಿಟ್ಟು ಕೆನೆಪದರ ನೀತಿ ಅನುಸರಿಸಬೇಕು ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗ ಮೀಸಲಾತಿಯಲ್ಲಿ ಕೆನೆಪದರ ಕುರಿತು ವಿವಿಧ ಆದೇಶಗಳನ್ನು ಹೊರಡಿಸಿವೆ. ಕೇಂದ್ರ ಸರ್ಕಾರ ಕೆನೆಪದರ ನೀತಿ ಕುರಿತು ಸ್ಪಷ್ಟ ಮಾರ್ಗಸೂಚಿ ಹೊರಡಿಸಿದೆ, ಹಿಂದುಳಿದ ವರ್ಗದ ಕುಟುಂಬಗಳ ವಾರ್ಷಿಕ ಆದಾಯ ಲೆಕ್ಕ ಹಾಕುವಾಗ ಕೃಷಿ ಮತ್ತು ವೇತನ ಪರಿಗಣಿಸದೆ, ವ್ಯಾಪಾರ, ವ್ಯವಹಾರ, ಕೈಗಾರಿಕೆ ಮತ್ತಿತರ ಸಂಪತ್ತಿನ ಆದಾಯಗಳನ್ನು ಪರಿಗಣಿಸಲಾಗುತ್ತದೆ. ಕರ್ನಾಟಕ ಹೊರತುಪಡಿಸಿ ಇತರ ಬಹುತೇಕ ರಾಜ್ಯಗಳು ಕೇಂದ್ರದ ನಿಯಮಗಳನ್ನೇ ಅಳವಡಿಸಿಕೊಂಡಿವೆ ಎಂದು ಅವರು ತಿಳಿಸಿದರು. ಕರ್ನಾಟಕದಲ್ಲಿ ಮಾತ್ರ ವೇತನವನ್ನು ಒಳಗೊಂಡು ವಾರ್ಷಿಕ ಆದಾಯ ಲೆಕ್ಕ ಹಾಕಲಾಗುತ್ತದೆ ಎಂದು ಮಿಸಲಾತಿ ಭಿನ್ನ ಕೆನೆಪದರ ನೀತಿಯಿಂದ ಕರ್ನಾಟಕದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ ಎಂದು ಅವರು ಪ್ರಸ್ತಾಪಿಸಿದರು ಇದಕ್ಕೆ ಉತ್ತರಿಸಿ ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು ಇದು ನನ್ನ ಇಲಾಖೆ ಸಂಭಂದಿಸಿದ ವಿಷಯವಾದರು ಸಮಾಜಕಲ್ಯಾಣ ಇಲಾಖೆ ಹಾಗು ಸಂಭಂದಿಸಿದ ಇಲಾಖೆಗಳ ಅಭಿಪ್ರಾಯ ಸಂಗ್ರಹಿಸಿ ಬಗೆಹರಿಸಲು ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದರು.

# ಮಂಗಳೂರು ವಿಭಾಗಕ್ಕೆ ವಿದ್ಯುತ್ ಚಾಲಿತ ಬಸ್: ಸಚಿವ ರಾಮಲಿಂಗಾರೆಡ್ಡಿ

ಬೆಂಗಳೂರು,ಆ 18 :ಕರ್ನಾಟಕ ರಾಜ್ಯ ಸಾರಿಗೆ ನಿಗಮಕ್ಕೆ 350 ವಿದ್ಯುತ್ ಚಾಲಿತ ಬಸ್ ಗಳು ಹಂಚಿಕೆಯಾಗಿದ್ದು, ಆ ಪೈಕಿ ಮಂಗಳೂರು ವಿಭಾಗಕ್ಕೆ 100 ಸಂಖ್ಯೆಯ 12 ಮೀಟರ್ ಮಾದರಿಯ ವಿದ್ಯುತ್ ಚಾಲಿತ ಬಸ್ ಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ಇಂದು ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಭಾಗೀರಥಿ ಮುರುಳ್ಯ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು 2025–26ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ಒಟ್ಟು 5 (ಕ್ಲಬ್ ಕ್ಲಾಸ್ 2.0 ಮಾದರಿಯ 02 ಸೀಟರ್ ಹಾಗೂ ಅಂಬಾರಿ ಉತ್ಸವ ಮಾದರಿಯ 03 ಸ್ಲೀಪರ್ ಹೊಸ ಹವಾ ನಿಯಂತ್ರಿತ ವೋಲ್ವೋ ಮಲ್ಟಿ ಆಕ್ಸಲ್ ಬಸ್ ಗಳನ್ನು ಒದಗಿಸಲಾಗಿರುತ್ತದೆ. ಸಾರಿಗೆ ನಿಗಮಗಳಿಗೆ 2025–26ನೇ ಸಾಲಿನ ಆಯವ್ಯಯದಲ್ಲಿ 2000 ಡೀಸೆಲ್ ಬಸ್ ಗಳನ್ನು ಖರೀದಿಸುವ ಘೋಷಣೆ ಮಾಡಲಾಗಿದ್ದು, ಸದರಿ ಬಸ್ ಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಒಟ್ಟು 900 ಬಸ್ ಗಳನ್ನು ಹಂಚಿಕೆ ಮಾಡಲಾಗಿದ್ದು, ಬಸ್ ಗಳ ಖರೀದಿಗೆ ಅವಶ್ಯವಿರುವ ಅನುದಾನ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. ಬಸ್ ಗಳನ್ನು ಖರೀದಿ/ಪಡೆದ ನಂತರ ಅಗತ್ಯತೆಯನ್ನು ಪರಿಗಣಿಸಿಸುಳ್ಯ ಘಟಕಕ್ಕೆ ಆದ್ಯತೆ ಮೇರೆಗೆ ಪರಿಶೀಲಿಸಿ ಬಸ್ ಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.